ಸಂಪುಟ: 14 Volume | ಸಂಚಿಕೆ: 16 Issue | ಪುಟಗಳು 08 Pages | ಶನಿವಾರ 18 ಏಪ್ರಿಲ್ 2026 | ₹4 | PRGINO.120927 (RNINO:KARKAN/2011/48371) | BDR/054/2026-2027 | www.mallammanudi.in | mallammanudi@gmail.com | 9448604450, 9845028349

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

**ಬೆಳಗು**

ಪ್ರೀತಿಯಿಂದಾಡಿದ ಪ್ರತಿಯೊಂದು ನುಡಿಯು ಸಿಡಿಲಿನಂತೆ ಪರಿಣಾಮಕಾರಿ.

–ಸ್ವಾಮಿ ವಿವೇಕಾನಂದ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper

ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ | ಪ್ರಧಾನ ಸಂಪಾದಕರು: ಮಾಣಿಕರೆಡ್ಡಿ, ಕೌಡಾಳೆ

ಮಹಿಳಾ ಮೀಸಲು ಮಸೂದೆ ಸ್ವಾಗತಾರ್ಹ 6

ಮುಸ್ಲಿಂ, ಕುರುಬ ಸಮಾಜಕ್ಕೆ ಅವಮಾನ ಖಂಡನೆ 7

ಲಾಭಕ್ಕಾಗಿ ಕ್ಷೇತ್ರ ಮರುವಿಂಗಡಣೆ 8



ಹುಮನಾಬಾದ ನಗರಕ್ಕೆ ಶುಕ್ರವಾರ ರಂದು ಆಗಮಿಸಿದ ಸತ್ಯ ಸಾಯಿ ಬಾಬಾ ರವರ "ಶ್ರೀ ಸತ್ಯ ಸಾಯಿ ಪ್ರೇಮ ಪ್ರವಾಹಿನಿ " ರಥಕ್ಕೆ ವಿಧಾನ ಪರಿಷತ್ ಸದಸ್ಯರು ಡಾ.ಚಂದ್ರಶೇಖರ ಬಿ ಪಾಟೀಲ ರವರು ಪಾಟೀಲ ಪರಿವಾರದ ವತಿಯಿಂದ ಭವ್ಯವಾಗಿ ಸ್ವಾಗತಿಸಿದರು. ಭಕ್ತಿ ಭವ್ಯ ಸಾಗರದ ನಡುವೆ "ಶ್ರೀ ಸತ್ಯ ಸಾಯಿ ಪ್ರೇಮ ಪ್ರವಾಹಿನಿ " ರಥವೂ ನಗರದಲ್ಲಿ ಭಕ್ತೂತ್ಸವದ ಭವ್ಯ ಸಾಗರದಲ್ಲಿ ಸಾಗಿತ್ತು.ಬ್ರಾಹ್ಮಣ ಸಮಾಜದ ರಾಜ್ಯ ಉಪಾಧ್ಯಕ್ಷ ವೆಂಕಟೇಶ ಕುಲಕರ್ಣಿ ಉಪಸ್ಥಿತರಿದ್ದರು.

## ರಾಷ್ಟ್ರವಿರೋಧಿ ಕೃತ್ಯವನ್ನು ಸಹಿಸಲ್ಲ..!

• ಮಲ್ಲಮ್ಮ ನುಡಿ ವಾರ್ತೆ ನವದೆಹಲಿ

ಮಹಿಳಾ ಮೀಸಲಾತಿ ಮಸೂದೆಯ ಮೇಲಿನ ಚರ್ಚೆಯ ಸಂದರ್ಭದಲ್ಲಿ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಲೋಕಸಭೆಯಲ್ಲಿ ಮಹಿಳಾ ಮೀಸಲಾತಿ ಮಸೂದೆಯೇ ಅಲ್ಲ; ಇದು ಭಾರತದ ಚುನಾವಣಾ ನಕ್ಷೆಯನ್ನು ಬದಲಾಯಿಸುವ ಪ್ರಯತ್ನ ಎಂದಿದ್ದಾರೆ. 2023ರಲ್ಲಿ ಇದೇ ಸದನದಲ್ಲಿ ಮಸೂದೆ ಅಂಗೀಕರಿಸಿದ್ದರೂ ಇನ್ನೂ ಏಕೆ ಬಾಕಿ ಉಳಿದಿದೆ ಎಂದು ಪ್ರಶ್ನಿಸಿದ್ದಾರೆ. ಮಹಿಳೆಯರು ದೇಶದ ಕೇಂದ್ರ ಶಕ್ತಿ. ನಾವೆಲ್ಲರೂ ನಮ್ಮ ಜೀವನದಲ್ಲಿ ತಾಯಿ ಮತ್ತು ಸಹೋದರಿಯ ರೂಪದಲ್ಲಿ ಮಹಿಳೆಯರಿದ್ದಾರೆ ಎಂದು ತಿಳಿಸಿದ್ದಾರೆ.

ನಿಮ್ಮ ಶಕ್ತಿ ಕ್ಷೀಣಿಸುತ್ತಿರುವುದರಿಂದ, ನೀವು ದೇಶದ ನಕ್ಷೆಯನ್ನು ಬದಲಾಯಿಸಲು ಬಯಸುತ್ತೀರಿ.



ನೀವು ಅಸ್ಸಾಂ ಮತ್ತು ಜಮ್ಮು ಮತ್ತು ಕಾಶ್ಮೀರದಲ್ಲಿ ಅದನ್ನು ಮಾಡಿದ್ದೀರಿ, ಮತ್ತು ಈಗ ದೇಶದಲ್ಲಿ ಅದನ್ನು ಮಾಡಲು ನಿಮಗೆ ಸಾಂವಿಧಾನಿಕ ತಿದ್ದುಪಡಿ ಬೇಕು. ಇದು ರಾಷ್ಟ್ರ ವಿರೋಧಿ. ನೀವು ಇದನ್ನು ಮಾಡಲು ನಾವು ಬಿಡುವುದಿಲ್ಲ ಎಂದು ಪಟ್ಟು ಹಿಡಿದಿದ್ದಾರೆ.

## ವಿನಯ್ ಕುಲಕರ್ಣಿಗೆ ಜೀವಾವಧಿ ಶಿಕ್ಷೆ

• ಮಲ್ಲಮ್ಮ ನುಡಿವಾರ್ತೆ,ಬೆಂಗಳೂರು

ಧಾರವಾಡ ಬಿಜೆಪಿ ನಾಯಕ ಯೋಗೇಶ್ ಗೌಡ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ನ್ಯಾಯಾಲಯ ತೀರ್ಪು ಪ್ರಕಟಿಸಿದೆ. ಕಾಂಗ್ರೆಸ್ ಶಾಸಕ ವಿನಯ್ ಕುಲಕರ್ಣಿಗೆ ಜೀವಾವಾಧಿ ಶಿಕ್ಷೆಯನ್ನು ನೀಡಿದೆ. ಇದೇ ಪ್ರಕರಣದಲ್ಲಿ 15 ಅಪರಾಧಿಗಳಿಗೂ ಜೀವಾವಾಧಿ ಶಿಕ್ಷೆ ವಿಧಿಸಿರುವ ಕೋರ್ಟ್ 19ನೇ ಅಪರಾಧಿ ಚೆನ್ನಕೇಶವ ಟಿಂಗರಿಕರ್ ಗೆ 7 ವರ್ಷ ಜೈಲು ಶಿಕ್ಷೆ ವಿಧಿಸಿದೆ.

ಬೆಂಗಳೂರಿನ ವಿಶೇಷ ಜನಪ್ರತಿನಿಧಿಗಳ ಕೋರ್ಟ್ ನ ನ್ಯಾಯಮೂರ್ತಿ ಸಂತೋಷ್ ಗಜಾನನ ಭಟ್ ಅವರು ಇಂದು ಮಹತ್ವದ ತೀರ್ಪು ಪ್ರಕಟಿಸಿದ್ದಾರೆ. ಇದೇ ವೇಳೆ ಯೋಗೇಶ್ ಗೌಡ



ಮಕ್ಕಳಿಗೆ ಪರಿಹಾರವಾಗಿ 16 ಲಕ್ಷ ರೂಪಾಯಿ ನೀಡುವಂತೆ ವಿನಯ್ ಕುಲಕರ್ಣಿಗೆ ಸೂಚಿಸಿದ್ದಾರೆ.

## ಕಾರ್ಮಿಕರ ಧರಣಿ ಸತ್ಯಾಗ್ರಹ ತೀವ್ರ

**ಜೇವರಗಿ:** ಪೌರಕಾರ್ಮಿಕರ ಬಾಕಿ ವೇತನ, ನೇಮಕ ಸಮಸ್ಯೆ ಹಿನ್ನೆಲೆಯಲ್ಲಿ ಜೇವರಗಿಯಲ್ಲಿ ನಡೆಯುತ್ತಿರುವ ಧರಣಿ ಸತ್ಯಾಗ್ರಹ ತೀವ್ರಗೊಂಡಿದೆ. ಕಾರ್ಮಿಕ ಸಂಘಟನೆ ಮುಖಂಡರು ಜನಪ್ರತಿನಿಧಿಗಳು, ಅಧಿಕಾರಿಗಳ ವಿರುದ್ಧ ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಪುರಸಭೆ ಪೌರಕಾರ್ಮಿಕರ ಸಂಘಟನೆಯ ಮುಖಂಡ ಮಹೇಶ್ ಕುಮಾರ್ ರಾಥೋಡ್ ಮಾತನಾಡಿ, ಇಲ್ಲಿನ ಶಾಸಕರು ಪೌರಕಾರ್ಮಿಕರು ಹಾಗೂ ದುಡಿಯುವ ವರ್ಗದ ಪರ ನಿಜವಾದ ಬದ್ಧತೆ ಹೊಂದಿದ್ದರೆ, ತಕ್ಷಣ ಧರಣಿ ನಡೆಯುತ್ತಿರುವ ಸ್ಥಳಕ್ಕೆ ಭೇಟಿ ನೀಡಿ ತಮ್ಮ ಕಾಳಜಿಯನ್ನು ಸಾಬೀತುಪಡಿಸಬೇಕು ಎಂದ್ದಾರೆ.

## ಯುವಕ ಆತ್ಮಹತ್ಯೆ

**ಕಲಬುರಗಿ:** ಜೇವರ್ಗಿ ರಸ್ತೆಯಲ್ಲಿರುವ ಕಟ್ಟಿಸಂಗಾವಿ ಸೇತುವೆಗೆ ನೇಣು ಬಿಗಿದುಕೊಂಡು ಯುವಕ ಆತ್ಮಹತ್ಯೆ ಮಾಡಿಕೊಂಡಿದ್ದಾನೆ. ಕಲಬುರಗಿ ನಗರದ ಹೊರವಲಯದ ಫರಹತಾಬಾದ್ ಗ್ರಾಮದ ನಿವಾಸಿ ಪ್ರಭುದೇವ ಈಶ್ವರರಾವ್ (32) ಆತ್ಮಹತ್ಯೆ ಮಾಡಿಕೊಂಡವ. ಆತ್ಮಹತ್ಯೆ ಮಾಡಿಕೊಂಡಿರುವ ಮಾಹಿತಿ ತಿಳಿದ ತಕ್ಷಣ ಫರಹತಾಬಾದ್ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಸಿಎಂ ವಿರುದ್ಧ ರಾಜಣ್ಣ ಬೇಸರ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ಆಪ್ತರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುತ್ತಿದ್ದರೂ ಮುಖ್ಯಮಂತ್ರಿಗಳು ಅಸಹಾಯಕರಂತೆ ಇರುವುದಕ್ಕೆ ಮಾಜಿ ಸಚಿವ ಕೆ.ಎನ್. ರಾಜಣ್ಣ ಅಸಮಾಧಾನ ಹೊರಹಾಕಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿ, ಸಿದ್ದರಾಮಯ್ಯ ಅವರ ಆಪ್ತ ವಲಯದಲ್ಲಿ ಗುರುತಿಸಿಕೊಂಡಿದ್ದ ಶಾಸಕರು, ಸಚಿವರವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುತ್ತಿದೆ. ಇಷ್ಟಾದರೂ ಸುಮ್ಮನಿರುವುದು ಬೇಸರ ಎಂದಿದ್ದಾರೆ.

# ಸಂಪುಟ ಪುನಾರಚನೆ ಸರ್ಕಸ್

### ಕಾಂಗ್ರೆಸ್‌ನ ಹಿರಿಯ ಶಾಸಕರ ನಿಯೋಗದಿಂದ ಹೈಮೇಲೆ ಒತ್ತಡ, ಎರಡು ಬಣಗಳ ನಡುವೆ ತಿಕ್ಕಾಟ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಸಚಿವ ಸಂಪುಟ ಪುನರ್ ರಚನೆ ಸರ್ಕಸ್ ಜೋರಾಗಿದೆ. ಏತನ್ಮಧ್ಯೆ ಕಾಂಗ್ರೆಸ್‌ನ ಹಿರಿಯ ಶಾಸಕರ ನಿಯೋಗ ಹೈಕಮಾಂಡ್ ಮೇಲೆ ಒತ್ತಡ ಹೇರಲು ದೆಹಲಿಯಲ್ಲಿ ಕಸರತ್ತು ನಡೆಸಿದೆ. ಕರ್ನಾಟಕ ಕಾಂಗ್ರೆಸ್ ಉಸ್ತುವಾರಿ,ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲ ಅವರನ್ನೂ ಭೇಟಿ ಮಾಡಿದೆ.

**ನಿಯೋಗದ ಗುರಿ ಸಾಧನೆ?:** ಐದು ದಿನಗಳಿಂದ ನವದೆಹಲಿಯಲ್ಲಿ ಬೀಡುಬಿಟ್ಟಿರುವ ಹಿರಿಯ ಕಾಂಗ್ರೆಸ್ ಶಾಸಕರ ನಿಯೋಗ, ತಮ್ಮ ಗುರಿಯನ್ನು ಸಾಧಿಸಿದ್ದೇವೆ ಎನ್ನುತ್ತಿದೆ. ಇದು ಸಿದ್ದರಾಮಯ್ಯ ಪಾಳಯಕ್ಕೆ ಹೊಸ ಸವಾಲಾಗಿದ್ದು, ತಮ್ಮ ನಾಯಕ ಪ್ರಸ್ತುತ ಕಾಂಗ್ರೆಸ್ ಸರ್ಕಾರದ ಪೂರ್ಣ ಅವಧಿಗೆ ಸಿಎಂ ಆಗಿ ಮುಂದುವರಿಸುವಂತೆ ಒತ್ತಾಯಿಸಿದೆ.

**ಡಿಕೆಶಿ ಬಣದ ಹೈ ಒತ್ತಡ:** ಆದರೆ ಉಪಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮತ್ತು ಅವರ ಪಾಳಯವು ಕಾಂಗ್ರೆಸ್ ಹೈಕಮಾಂಡ್ ಮೇಲೆ ಒತ್ತಡ ಹೇರುವ ಸಾಧ್ಯತೆಯಿದೆ, ಮೊದಲು ನಾಯಕತ್ವದ ಸಮಸ್ಯೆಯನ್ನು ಬಗೆಹರಿಸಿ ನಂತರ ಸಂಭಾವ್ಯ ಸಂಪುಟ ಪುನರ್ರಚನೆ ನಿರ್ಧರಿಸುವಂತೆ ಒತ್ತಾಯಿಸಲು ಮುಂದಾಗಿದೆ ಎಂದು ತಿಳಿದು ಬಂದಿದೆ.



### ಮುಖ್ಯಮಂತ್ರಿ, ಡಿಸಿಎಂ ದೆಹಲಿಗೆ

ರಾಜ್ಯ ಕಾಂಗ್ರೆಸ್‌ನಲ್ಲಿ ನಾಯಕತ್ವ ಬದಲಾವಣೆ ವಿಚಾರ ದಿನಕ್ಕೊಂದು ತಿರುವು ಪಡೆಯುತ್ತಿದೆ. ಸಂಪುಟ ಪುನಾರಚನೆ ಕೂಗು ಬಲವಾಗಿರುವಾಗಲೇ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ದೆಹಲಿಗೆ ತೆರಳಿದ್ದಾರೆ. ವರಿಷ್ಠರನ್ನು ಭೇಟಿ ಮಾಡಿ ರಾಜ್ಯ ಕಾಂಗ್ರೆಸ್‌ನಲ್ಲಿರುವ ಗೊಂದಲಗಳ ನಿವಾರಣೆ ಸಂಬಂಧ ಚರ್ಚಿಸುವ ಸಾಧ್ಯತೆಗಳಿರುವುದು ಸ್ಪಷ್ಟವಾಗಿದೆ.

### ನೀ ಕೊಡೆ, ನಾ ಬಿಡೆ..!

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಮೂರು ವರ್ಷವಾಗುತ್ತಿದ್ದು, ಸಂಪುಟ ಪುನಾಚರನೆಗೆ ಹಿರಿಯ, ಕಿರಿಯ ಶಾಸಕರು ಒತ್ತಾಯಿಸುತ್ತಿದ್ದಾರೆ. ಇದಕ್ಕೆ ಅವಕಾಶ ಕೊಡಿ ಎನ್ನುವುದು ಸಿಎಂವಾದ. ನಾಯಕತ್ವ ಬದಲಾವಣೆ ವಿಚಾರ ಇತ್ಯರ್ಥವಾಗದೆ ಸಂಪುಟ ಪುನಾರಚನೆಗೆ ಅವಕಾಶ ಕೊಡಬೇಡಿ ಎಂದು ಡಿಸಿಎಂ ತಮ್ಮ ಅಹವಾಲನ್ನು ವರಿಷ್ಠರ ಬಳಿ ಮತ್ತೆ ಮಂಡಿಲಿದ್ದಾರೆ ಎಂದು ಮೂಲ ಖಚಿತ ಪಡಿಸಿದೆ.

### ರಿಸಲ್ಟ್ ಬಳಿಕ ಪುನಾರಚನೆ?

ಮೂರಕ್ಕೂ ಹೆಚ್ಚು ಬಾರಿ ಗೆದ್ದಿರುವ ಶಾಸಕರು ಉಸ್ತುವಾರಿ ಸುರ್ಜೇವಾಲಾ ಅವರನ್ನು ಭೇಟಿ ಮಾಡಿದ್ದಾರೆ. ಐದು ರಾಜ್ಯಗಳ ವಿಧಾನಸಭೆಗಳ ಫಲಿತಾಂಶ, ಮೇ 4 ರಂದು ದಾವಣಗೆರೆ ದಕ್ಷಿಣ ಮತ್ತು ಬಾಗಲಕೋಟೆ ಉಪಚುನಾವಣೆ ರಿಸಲ್ಟ್ ಪ್ರಕಟವಾದ ಬಳಿಕ ಸಂಪುಟ ಪುನಾರಚನೆಗೆ ಹೈಅನುಮೋದಿಸುತ್ತದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಭೇಟಿ ಮಾಡಿದ ನಂತರ ಶಾಸಕರು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

### ಖರ್ಗೆ, ಭರವಸೆ, ಅಸಮಾಧಾನ

ಸಚಿವ ಸಂಪುಟದಲ್ಲಿರುವ ಹಾಲಿ ಸಚಿವರ ಕಾರ್ಯಕ್ಷಮತೆಯ ಬಗ್ಗೆ ಸುರ್ಜೇವಾಲ್ ಅವರಿಗೆ ಮಾಹಿತಿ ಸಿಕ್ಕಿದೆ. ಆದಷ್ಟು ಬೇಗ ಪುನರ್ರಚನೆ ಮಾಡುವುದಾಗಿ, ನ್ಯಾಯ ಒದಗಿಸಲಾಗುವುದು ಎಂದಿದ್ದಾರೆ. ಬಲ್ಲ ಮೂಲಗಳ ಪ್ರಕಾರ, ಖರ್ಗೆ ಪುನರ್ರಚನೆಗೆ ಸಕಾರಾತ್ಮಕವಾಗಿ ಪ್ರತಿಕ್ರಿಯಿಸಿದರು ಆದರೆ ಮುಖ್ಯಮಂತ್ರಿಯಾಗಿ ಎರಡನೇ ಅವಧಿಯಲ್ಲಿ ಸಿದ್ದರಾಮಯ್ಯ ಅವರ ಕಾರ್ಯವೈಖರಿಯ ಬಗ್ಗೆ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎನ್ನಲಾಗಿದೆ.

## ರಾಜ್ಯದಲ್ಲಿ H5N1 ಹಕ್ಕಿ ಜ್ವರ ವೈರಸ್ ಪತ್ತೆ

• ಮಲ್ಲಮ್ಮ ನುಡಿವಾರ್ತೆ, ಬೆಂಗಳೂರು

ರಾಜ್ಯದಲ್ಲಿ ಹಕ್ಕಿಜ್ವರದ ಆತಂಕ ಮತ್ತೆ ಪ್ರತ್ಯಕ್ಷವಾಗಿದೆ. H5N1 ಹಕ್ಕಿ ಜ್ವರ ವೈರಸ್ ಪತ್ತೆಯಾಗಿರುವುದು ಸಾರ್ವಜನಿಕರಲ್ಲಿ ಚಿಂತೆ ಆವರಿಸಿದೆ. ಕೇಂದ್ರ ಸರ್ಕಾರದ ಅನುಮತಿ ಮೇರೆಗೆ ನಡೆದ ತಪಾಸಣೆ ಮಾಡಿದ್ದು, ರಾಜ್ಯದ ಪೌಲ್ಟ್ರಿ ಫಾರಂನಲ್ಲಿ ಮೊದಲ ಹಂತದಲ್ಲೇ H5N1 ವೈರಸ್ ದೃಢಪಟ್ಟಿದೆ. ಈ ಹಿನ್ನೆಲೆ ಮುನ್ನೆಚ್ಚರಿಕಾ ಕ್ರಮವಾಗಿ ಫಾರಂನಲ್ಲಿದ್ದ ಕೋಳಿಗಳನ್ನು ನಾಶಪಡಿಸಿ ಗುಂಡಿಯಲ್ಲಿ ಹೂಳಲಾಗಿದೆ.

ಬೆಂಗಳೂರು ಗ್ರಾಮಾಂತರ ಭಾಗದ ಹೆಸರಘಟ್ಟ ಪ್ರದೇಶದಲ್ಲಿರುವ ರಾಜ್ಯ ಸರ್ಕಾರಿ ಪೌಲ್ಟ್ರಿ ಫಾರಂ ಅನ್ನು ತಾತ್ಕಾಲಿಕವಾಗಿ ಮುಚ್ಚಲಾಗಿದೆ. ಇದೇ ಫಾರಂ ರಾಜ್ಯದ ವಿವಿಧ ಭಾಗಗಳಿಗೆ ಕೋಳಿ ಸರಬರಾಜು ಮಾಡುತ್ತಿದ್ದ ಪ್ರಮುಖ ಕೇಂದ್ರವಾಗಿತ್ತು. ಈ ಬೆಳವಣಿಗೆಯ ಹಿನ್ನೆಲೆಯಲ್ಲಿ ಪೌಲ್ಟ್ರಿಫಾರಂ ಕಾರ್ಮಿಕರನ್ನು ಕ್ವಾರಂಟೈನ್ಗೆ ಒಳಪಡಿಸಲಾಗಿದೆ. ಸುತ್ತಮುತ್ತಲಿನ ಪಂಚಾಯಿತಿಗಳಿಗೆ ಎಚ್ಚರಿಕಾ ನೋಟಿಸ್ ನೀಡಲಾಗಿದೆ. ಕೋಳಿ ಅಂಗಡಿಗಳು ಮತ್ತು ಶೆಡ್ಗಳಲ್ಲಿ ಕಡ್ಡಾಯ ತಪಾಸಣೆ ಮಾಡಲು ಸೂಚಿಸಲಾಗಿದೆ.

## ನಾಯಕರ ವಿರುದ್ಧ ಕ್ರಮ: ಕಳವಳ

• ಮಲ್ಲಮ್ಮ ನುಡಿವಾರ್ತೆ, ಬೆಂಗಳೂರು

ದಾವಣಗೆರೆ ದಕ್ಷಿಣದಲ್ಲಿ ಮುಸಲ್ಮಾನ ನಾಯಕರಿಗೆ ಟಿಕೆಟ್ ಕೈತಪ್ಪಿದ ವಿಚಾರಕ್ಕೆ ನಡೆದ ರಾಜಕೀಯ ಬೆಳವಣಿಗೆಗಳಿಂದ ಇಬ್ಬರು ನಾಯಕರು ತಮ್ಮಸ್ಥಾನ ಕಳೆದುಕೊಂಡಿದ್ದಾರೆ. ಎಂಎಲ್ಸಿ ಅಬ್ದುಲ್ ಜಬ್ಬಾರ್ ಅಮಾನತು ಮತ್ತು ಸಿಎಂ ರಾಜಕೀಯ ಕಾರ್ಯದರ್ಶಿ ಸ್ಥಾನದಿಂದ ನಸೀರ್ ಅಹ್ಮದ್ ರಾಜೀನಾಮೆ ವಿಚಾರ ಸಚಿವ ಸಂಪುಟ ಸಭೆಯಲ್ಲಿ ಸ್ಫೋಟಗೊಂಡಿದೆ. ಮುಸ್ಲಿಂನಾಯಕರ ವಿರುದ್ಧದ ಕ್ರಮಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಮತ್ತು ಸತೀಶ್ ಜಾರಕಿಹೊಳಿ ಸೇರಿದಂತೆ ಹಲವು ಸಚಿವರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು ಎನ್ನಲಾಗಿದೆ.



## ಬಾರದ ಊರಿಗೆ ಹೊರಟ ಏಳು ಜನ..!


• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಕಾರು ಮತ್ತು ವಿಆರ್‌ಎಲ್ ಬಸ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ 7 ಜನ ದಾರುಣವಾಗಿ ಮೃತಪಟ್ಟಿದ್ದರೆ. ಈ ಘಟನೆ ಸುರಪುರ ತಾಲೂಕಿನ ದೇವಾಪುರ ಬಳಿ ನಡೆದಿದೆ. ಸುರಪುರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

ಯಾದಗಿರಿಯಿಂದ ರಾಯಚೂರು ಕಡೆ ಹೊರಟಿದ್ದ ಕಾರು, ಬೆಂಗಳೂರಿನಿಂದ ಕಲಬುರಗಿ ಕಡೆ ಬರುತ್ತಿದ್ದ ಖಾಸಗಿ ಬಸ್ ಮುಖಾಮುಖಿ ಡಿಕ್ಕಿಯಾದಾಗ ಕಾರಿನಲ್ಲಿದ್ದ 7 ಜನ ಕೊನೆ ಯುಸಿರೆಳೆದಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಸುರಪುರ ಶಾಸಕ ರಾಜಾ ವೇಣುಗೋಪಾಲ್ ನಾಯಕ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

**ಚಿಂತಾಕಜನಕ ಸ್ಥಿತಿಯಲ್ಲಿರುವವರು**

ಕೃಷ್ಣಾ ನಾಯಕ(52),ಅನಂತ ಕಲಾ ಗಂಡ ಕೃಷ್ಣಾ ನಾಯಕ(45),ಶರಣಪ್ಪ(36). ನಿಸರ್ಗ ಗಂಡ ಶರಣಪ್ಪ(30),ಸಿದ್ದಾರ್ಥ ಶರಣಪ್ಪ(03) ಹಾಗೂ ಶಶಿಕಲಾ (30) ಎಂದು ಗುರುತಿಸಲಾಗಿದೆ. ಅದ್ವಿಕಾ ತಂದೆ ಶರಣಪ್ಪ(05) ಹಾಗೂ ಶ್ರೀನಿಧಿ ತಂದೆ ಶರಣಪ್ಪ(1.5 ವರ್ಷ) ಎಂಬ ಮಕ್ಕಳ ಪರಿಸ್ಥಿತಿ ಚಿಂತಾಜಕವಾಗಿದ್ದು,ಅವರಿಗೆ ಚಿಕಿತ್ಸೆ ನೀಡಲಾಗುತ್ತಿದೆ.ಬಸ್ ನಲ್ಲಿದ್ದ ಎಲ್ಲಾ 20 ಪ್ರಯಾಣಿಕರು ಸುರಕ್ಷಿತಾಗಿದ್ದಾರೆ ಎನ್ನಲಾಗಿದೆ.



### ಹತ್ತಿದ ಬೆಂಕಿ, ಆಕಾಶದೆತ್ತರ ಹೊಗೆ

ಅಪಘಾತದ ತೀವ್ರತೆಗೆ ವಾಹನ ನಡುರಸ್ತೆಯಲ್ಲೇ ಬೆಂಕಿ ಹೊತ್ತಿಕೊಂಡು ಹೊಗೆ ಆಕಾಶದೆತ್ತರಕ್ಕೆ ಚಾಚಿತ್ತು. ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕದಳ ಸಿಬ್ಬಂದಿ ಬೆಂಕಿ ನಂದಿಸಲು ಹರಸಾಹಸಪಟ್ಟಿದ್ದಾರೆ. ಡಿಕ್ಕಿಯ ತೀವ್ರತೆಗೆ ಕಾರಿನಲ್ಲಿ ಪ್ರಯಾಣಿಸುತ್ತಿದ್ದವರು ಸ್ಥಳದಲ್ಲೇ ಸಜೀವ ದಹನಗೊಂಡಿದ್ದು, ಗುರುತಿಸಲು ಸಹ ಸಾಧ್ಯವಾಗದ ಸ್ಥಿತಿಗೆ ದೇಹಗಳು ಕರಕಲಾಗಿವೆ.

## ಸ್ತ್ರೀಯರ ಪ್ರಗತಿ, ರಾಷ್ಟ್ರದ ಪುರೋಭಿವೃದ್ಧಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಒಂದು ರಾಷ್ಟ್ರದ ಪ್ರಗತಿಯನ್ನು ನಾನು ಆ ಸಮಾಜದ ಮಹಿಳೆಯರು ಸಾಧಿಸಿರುವ ಪ್ರಗತಿಯ ಆಧಾರದ ಮೇಲೆ ಅಳೆಯುತ್ತೇನೆ ಎಂದಿರುವ ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಈ ಮಾತುಗಳು ಇಂದು ಭಾರತದ ಸಂಸತ್ತಿನಲ್ಲಿ ಸಾಕಾರಗೊಳ್ಳುತ್ತಿವೆ ಎಂದು ಬಿಜೆಪಿ ಮುಖಂಡ ಛಲವಾದಿ ಟಿ. ನಾರಾಯಣಸ್ವಾಮಿ ತಿಳಿಸಿದ್ದಾರೆ.

ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಲ್ಲಿ ಮಹಿಳೆಯರಿಗೆ



33% ಮೀಸಲಾತಿ ಕಲ್ಪಿಸುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಮಂಡಿಸಿರುವ ಐತಿಹಾಸಿಕ ಸಾಂವಿಧಾನಿಕ ತಿದ್ದುಪಡಿ ಮಸೂದೆಯನ್ನು ನಾನು ಮುಕ್ತಕಂಠದಿಂದ ಸ್ವಾಗತಿಸುತ್ತೇನೆ ಎಂದು ಗುಣಗಾನ ಮಾಡಿದ್ದಾರೆ.

### ಮಹಿಳೆಯ ಸಾಸಹಸಕ್ಕೆ ಇತಿಹಾಸ ಸಾಕ್ಷಿ

ನಮ್ಮ ಸ್ಫೂರ್ತಿ, ನಮ್ಮ ಇತಿಹಾಸವು ಮಹಿಳೆಯರ ಸಾಹಸಕ್ಕೆ ಸಾಕ್ಷಿಯಾಗಿದೆ. ಕಿತ್ತೂರು ರಾಣಿ ಚೆನ್ನಮ್ಮನ ಅಪ್ರತಿಮ ಧೈರ್ಯ, ಒನಕೆ ಓಬವ್ವನ ತಪಸ್ಸು, ಝಾನ್ಸಿ ರಾಣಿ ಲಕ್ಷ್ಮೀಬಾಯಿಯ ರಣಾಂಗಣದ ಹೋರಾಟಗಳು ನಮಗೆ ಸದಾ ಪ್ರೇರಣೆ. ಅಂದು ಅನ್ಯಾಯದ ವಿರುದ್ಧ ಕತ್ತಿ ಹಿಡಿದು ಹೋರಾಡಿದ ಮಹಿಳೆಯರು, ಇಂದು ದೇಶದ ನೀತಿ ನಿರೂಪಣೆಯಲ್ಲಿ ಪಾಲ್ಗೊಳ್ಳಲು ಸಂವಿಧಾನದ ಶಕ್ತಿಯನ್ನು ಪಡೆದುಕೊಳ್ಳುತ್ತಿದ್ದಾರೆ.

### ಸ್ತ್ರೀಯರಿಗೆ ಶಾಸನಾತ್ಮಕ ಗೌರವ

ಮೋದಿಜೀ ಅವರ ದೃಢ ಸಂಕಲ್ಪದಿಂದ ದಶಕಗಳಿಂದ ನೆನೆಗುದಿಗೆ ಬಿದ್ದಿದ್ದ ಮಹಿಳಾ ಮೀಸಲಾತಿ ಮಸೂದೆಗೆ ಜೀವ ನೀಡಿ, ಅದನ್ನು ವಾಸ್ತವಕ್ಕೆ ತರುತ್ತಿರುವ ಗೌರವಾನ್ವಿತ ಪ್ರಧಾನಮಂತ್ರಿಗಳಾದ ಶ್ರೀ ನರೇಂದ್ರ ಮೋದಿಜೀ ಅವರಿಗೆ ಸಮಸ್ತ ಸ್ತ್ರೀ ಸಮಾಜದ ಪರವಾಗಿ ಅನಂತ ಅನಂತ ಧನ್ಯವಾದಗಳನ್ನು ಸಲ್ಲಿಸುತ್ತೇನೆ. ಇದು ಕೇವಲ ಒಂದು ಮಸೂದೆಯಲ್ಲ, ಇದು ತಾಯಿ ಭಾರತಮಾತೆಯ ಪುತ್ರಿಯರಿಗೆ ನೀಡುತ್ತಿರುವ ಶಾಸನಾತ್ಮಕ ಗೌರವ ಎಂದಿದ್ದಾರೆ ಛಲವಾದಿ.

**ರಾಜ್ಯದಲ್ಲಿ ಬರಗಾಲದ ಕರಿನೆರಳು ಆವರಿಸಿದೆ. ಹೀಗಿದ್ದು, ಸಿಎಂ, ಡಿಸಿಎಂ ದೆಹಲಿ ಪ್ರವಾಸ ಮಾಇದ್ದು ಸಲ್ಲ: ಪ್ರತಿಪಕ್ಷ ನಾಯಕ ಆರ್.ಅಶೋಕ್**

# ಸಾರ್ವಜನಿಕರ ಆರೋಗ್ಯ, ಶಕ್ತಿಯುತ ಜೀವನಕ್ಕೆ ಯೋಗ ಸಹಕಾರಿ

• ಮಲ್ಲಮ್ಮ ನುಡಿ ವಾರ್ತೆ ಬೀದರ

12 ನೇ ಅಂತರರಾಷ್ಟ್ರೀಯ ಯೋಗ ದಿವಸವನ್ನು ಅರ್ಥಪೂರ್ಣವಾಗಿ ಆಚರಿಸಲು ಭಾರತ ಸರ್ಕಾರವು ಈ ವರ್ಷ ಆರೋಗ್ಯ, ಜ್ಞಾನ ಮತ್ತು ವಿಶ್ವಶಾಂತಿಗಾಗಿ ಯೋಗ ಎಂಬ ಧ್ಯೇಯವಾಕ್ಯದೊಂದಿಗೆ ದೇಶಾದ್ಯಂತ ನೂರು ಕಡೆ ಯೋಗ ಮಹೋತ್ಸವ ಕಾರ್ಯಕ್ರಮ ಆಯೋಜಿಸುವುದರ ಮೂಲಕ ಯೋಗದ ಪ್ರಚಾರ ಪ್ರಸಾರ ಮಾಡುತ್ತಿದೆ ಎಂದು ದೆಹಲಿಯ ಯೋಗ ಸರ್ಟಿಫೀಕೆಶನ್ ಬೋರ್ಡನ ಸದಸ್ಯರು ಹಾಗೂ ಐ.ಎನ್.ಓ ರಾಷ್ಟ್ರೀಯ ಅದ್ಯಕ್ಷರಾದ ಅನಂತ ಬಿರಾದಾರ ಅವರು ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ ಏಪ್ರೀಲ್ 19 ಭಾನುವಾರ ಬೆಳಿಗ್ಗೆ 5:30 ಕ್ಕೆ ಬೀದರ ನಗರದ ಗುರುನಾನಕ್ ದೇವ ಇಂಜಿನಿಯರಿಂಗ್ ಕಾಲೇಜಿನ ಮೈದಾನದಲ್ಲಿ ಭಾರತ ಸರ್ಕಾರದ ಆಯುಷ್ ಇಲಾಖೆಯ ಮೊರಾರ್ಜಿ ದೇಸಾಯಿ ರಾಷ್ಟ್ರೀಯ ಯೋಗ ಸಂಸ್ಥೆ, ಅಂತರರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ಸಂಸ್ಥೆ, ಸೂರ್ಯ ಫೌಂಡೇಶನ್ ನೇತೃತ್ವದಲ್ಲಿ ಗುರುನಾನಕ್ ಗ್ರೂಪ್ ಆಫ್ ಇನ್ಸಟಿಟ್ಯೂಟ್ಸ್ ಬೀದರ ಇವರ ಸಹಯೋಗದೊಂದಿಗೆ ಹಾಗೂ ಜಿಲ್ಲೆಯ ವಿವಿಧ ಸಂಘ ಸಂಸ್ಥೆಗಳ ಸಹಭಾಗಿತ್ವದೊಂದಿಗೆ

ಭವ್ಯವಾದ ಯೋಗ ಮಹೋತ್ಸವವನ್ನು ಆಯೋಜಿಸಲಾಗಿದ್ದು ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಈ ಯೋಗ ಮಹೋತ್ಸವದಲ್ಲಿ ಭಾಗವಹಿಸಿ ಜೀವನವನ್ನು ಆರೋಗ್ಯಕರ, ಶಾಂತಿಯುತ ಮತ್ತು ಶಕ್ತಿಯುತವಾಗಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಅಂತರರಾಷ್ಟ್ರೀಯ ಪ್ರಾಕೃತಿಕ ಚಿಕಿತ್ಸಾ ಸಂಸ್ಥೆ ಹಾಗೂ ಸೂರ್ಯ ಫೌಂಡೇಶನ್ ದೇಶ ವಿದೇಶಗಳಲ್ಲಿ ಜನರ ಆರೋಗ್ಯದ ಹಿತದೃಷ್ಟಿಯಿಂದ ಪ್ರಾಕೃತಿಕ ಚಿಕಿತ್ಸೆ ಮತ್ತು



ಯೋಗದ ಪ್ರಚಾರ ಪ್ರಸಾರಕ್ಕಾಗಿಯೆ ಪದ್ಮಶ್ರೀ ಜಯಪ್ರಕಾಶ ಅಗ್ರವಾಲ್ ಅವರ ಮಾರ್ಗದರ್ಶನದಲ್ಲಿ ಸೇವೆಗೈಯುತ್ತಿದ್ದು ಬೀದರನಲ್ಲಿ ನಡೆಯುವ ಯೋಗ ಮಹೋತ್ಸವದಲ್ಲಿ ಯೋಗದ ವಿವಿಧ ಆಯಾಮಗಳು ಮತ್ತು ಅದರ ಉಪಯುಕ್ತತೆಯನ್ನು ವ್ಯಾಪಕವಾಗಿ ಪ್ರಚಾರ ಮಾಡಲಾಗುವುದು ವಿಶೇಷವಾಗಿ ಯೋಗ ಮಹೋತ್ಸವ ಕಾರ್ಯಕ್ರಮದಲ್ಲಿ ತಾಡಸನ (ಪರ್ವತ ಭಂಗಿ) ಆಸನದ ಮೇಲೆ ಏಶಿಯಾ ಬುಕ್ ಆಫ್ ರೇಕಾರ್ಡ್ ಮಾಡಲಾಗುತ್ತಿದೆ ಮತ್ತು ಭಾಗವಹಿಸಿದ ಪ್ರತಿಯೊಬ್ಬರಿಗು ಭಾರತ ಸರ್ಕಾರದ ಆಯುಶ್ ಇಲಾಖೆ ವತಿಯಿಂದ ಇ-ಪ್ರಮಾಣಪತ್ರ ಕೂಡ ದೊರಕಲಿದೆ ಎಂದು ಬಿರಾದಾರ ಅವರು ತಿಳಿಸಿದರು.

ಕಾರ್ಯಕ್ರಮದಲ್ಲಿ ಚಿದಂಬರಾಶ್ರಮದ ಡಾ.ಶಿವಕುಮಾರ ಮಹಾಸ್ವಾಮಿಗಳು, ಹಿರೇಮಠ ಸಂಸ್ಥಾನ ಭಾಲ್ಕಿಯ ಗುರಬಸವ ಪಟ್ಟದ್ದೇವರು, ಪ್ರಜಾಪಿತ ಬ್ರಹ್ಮಕುಮಾರಿ ಪ್ರತಿಮಾ ಬೆಹನಜಿ, ಭಾರತ ಸರ್ಕಾರದ ಆಯುಶ್ ಇಲಾಖೆಯ ಸಚಿವರಾದ ಪ್ರತಾಪರಾವ ಜಾಧವ, ಆಯುರ್ವೇದ ಬೋರ್ಡ್ ಅದ್ಯಕ್ಷರಾದ ಡಾ.ಅಲ್ಲಮಪ್ರಭು ಗುಡ್ಡ, ಪತಂಜಲಿ ಯೋಗಪಿಠ ಹರಿದ್ವಾರ ರಾಜ್ಯ ಪ್ರಭಾರಿ ಭವರಲಾಲ್ ಆರ್ಯ, ಶಾಸಕರಾದ ಡಾ.ಶೈಲೇಂದ್ರ ಬೆಲ್ದಾಳೆ, ಗುರುನಾನಕ್ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರಾದ ಡಾ.ಸರ್ದಾರ್ ಬಲಬೀರಸಿಂಗ್, ಡಾ.ರೇಶ್ಮಾ ಕೌರ ಸೇರಿದಂತೆ ವಿವಿಧ ಶಿಕ್ಷಣ ಸಂಸ್ಥೆಯ ಮುಖ್ಯಸ್ಥರು ಹಾಗೂ ಗಣ್ಯರು ಭಾಗವಹಿಸಲಿದ್ದಾರೆ.

ಗುರುನಾನಕ್ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಪವಿತ್ ಸಿಂಗ್ ಮಾತನಾಡಿ ಮನುಷ್ಯನ ಮಾನಸಿಕ ದೈಹಿಕ ಆಧ್ಯಾತ್ಮಿಕ ಹಿತಕ್ಕಾಗಿ ಯೋಗ ಅತ್ಯವಶ್ಯಕ ಈ ನಿಟ್ಟಿನಲ್ಲಿ ಸೂರ್ಯ ಫೌಂಡೇಶನ್ ಹಾಗೂ ಐ.ಎನ್.ಓ ದೇಶಾದ್ಯಂತ ಉತ್ತಮ ಕೆಲಸ ಮಾಡುತಿದ್ದು ಆಯುಶ್ ಇಲಾಖೆ ಅಡಿಯಲ್ಲಿ ಹಮ್ಮಿಕೊಂಡ ಭವ್ಯವಾದ ಯೋಗ ಮಹೋತ್ಸವ ಕಾರ್ಯಕ್ರಮಕ್ಕೆ ಗುರುನಾನಕ ಶಿಕ್ಷಣ ಸಂಸ್ಥೆಯು ಆದ್ಯ ಕರ್ತವ್ಯವೆಂದು ಭಾವಿಸಿ ಸಂಪೂರ್ಣವಾಗಿ ಕಾರ್ಯಕ್ರಮದ ಯಶಸ್ಸಿಗಾಗಿ ಸಹಕರಿಸುತ್ತಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಜಿಲ್ಲೆಯ ಯೋಗಾಸಕ್ತರು ಭಾಗವಹಿಸಬೇಕೆಂದು ವಿನಂತಿಸಿದರು.

# ಮಾನವ ಒಳಿತಿಗಾಗಿ ಅನುಷ್ಠಾನ ಅಗತ್ಯ



• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ಲೋಕ ಕಲ್ಯಾಣಕ್ಕಾಗಿ ಜಪ-ತಪ-ಅನುಷ್ಠಾನಗಳು ಹಿಂದಿನ ಕಾಲದಿಂದಲೂ ನಡೀತಾ ಬಂದಿವೆ ಎಂದು ತಾಲ್ಲೂಕು ಪಂಚಾಯತ ಮಾಜಿ ಸದಸ್ಯ ಶ್ರೀಮಂತ ಪಾಟೀಲ ತಾಳಮಡಗಿ ಹೇಳಿದರು.ತಾಲ್ಲೂಕಿನ ತಾಳಮಡಗಿ ಗ್ರಾಮದ ಮಹೇಬೂಬ್ ಸುಬಾನಿ ದರ್ಗಾದಲ್ಲಿ ಲೋಕ ಕಲ್ಯಾಣಕ್ಕಾಗಿ ಸುನೀಲ ಸಾಹೇಬ್ ಅವರು 11 ದಿನಗಳ ಕಾಲ ಹಮ್ಮಿಕೊಂಡಿದ್ದ ಮೌನ ಅನುಷ್ಠಾನದ ಸಮಾರೋಪ ಸಮಾರಂಭದಲ್ಲಿ ಭಾಗಿಯಾಗಿ ಪಾಟೀಲ ಮಾತನಾಡಿದರು. ಮನುಷ್ಯನಾಗಿ ಹುಟ್ಟಿದ ಬಳಿಕ ಒಂದಿಷ್ಟು ಒಳ್ಳೆಯ ಕಾರ್ಯಗಳ ಮೂಲಕ ಜೀವನವನ್ನು ಸಾರ್ಥಕ ಪಡಿಸಿಕೊಳ್ಳುವಲ್ಲಿ ಪ್ರತಿಯೊಬ್ಬರೂ ಗಮನ ಹರಿಸಬೇಕಿದೆ.ಅದನ್ನ ಸುನೀಲ ಸಾಹೇಬರು ಪ್ರಯತ್ನ ನಡೆಸುತ್ತಿದ್ದಾರೆ. ಅವರ ಧಾರ್ಮಿಕ ಕಾರ್ಯ ಮುಂದುವರಿಯಲಿ,ಅವರ ಜೀವನ ಯಶಸ್ವಿಯಾಗಲಿ ಎಂದು ಹೇಳಿ ಶುಭ ಹಾರೈಸಿದರು.


ಈ ಸಂದರ್ಭದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ಉಮೇಶ ಕುಲಕರ್ಣಿ,ಗ್ರಾಪಂ ಮಾಜಿ ಸದಸ್ಯ ಪ್ರಕಾಶ ವಣಕೇರಿ,ಪಪ್ಪು ಪಾಟೀಲ,ಕಾರ್ತಿಕ ಬಂಡೆಪನೋರ,ತೊಫಿಕ ಮೋಜನ,ಆಕಾಶ ವಿಶ್ವಕರ್ಮ,ಪ್ರಭು ನಿಂಪಣ್ಣಿ,ಬಾಬಾ ನಾಯಕ ಮೋಜನ,ಸಚಿನ ಬಾಜೋಳಗಿ,ಹುಸೇನ ಸಾಹೇಬ್, ಅನೀಲ ಮಂಗಲಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ದುಡಿಯೋಣ ಬಾ ಅಭಿಯಾನಕ್ಕೆ ಚಾಲನೆ

• ಮಲ್ಲಮ್ಮ ನುಡಿ ವಾರ್ತೆ, ಚಿಟಗುಪ್ಪ

ತಾಲೂಕಿನ ಉಡಬನಳ್ಳಿ ಗ್ರಾಮ ಪಂಚಾಯತ ವ್ಯಾಪ್ತಿಯಲ್ಲಿ ಬರುವ ಕರಕನಳ್ಳಿ ಗ್ರಾಮದಲ್ಲಿ ಮನರೇಗಾ ಯೋಜನೆಯ ದುಡಿಯೋಣ ಬಾ ಅಭಿಯಾನಕ್ಕೆ ಚಾಲನೆ ನೀಡಲಾಯಿತು. ನಂತರ ಮಾಹಿತಿ ಶಿಕ್ಷಣ ಸಂವಹನ ಸಂಯೋಜಕ ವಿಶ್ವನಾಥ ಗಡ್ಡಿಮನಿ ಮಾತನಾಡುತ್ತ ಗ್ರಾಮೀಣ ಪ್ರದೇಶದ ಕೂಲಿ ಕಾರ್ಮಿಕರು ಕೂಲಿ ಕೆಲಸಕ್ಕೆ ನಗರ ಪ್ರದೇಶಗಳಿಗೆ ಗೂಳೆ ಹೋಗದೆ ತಮ್ಮ ಊರುಗಳಲ್ಲಿ ವಾಸಿಸುತ್ತ ಕೂಲಿ ಕೆಲಸ ಪಡೆದು ಬದುಕು ಸಾಗಿಸಲು ಉದ್ಯೋಗ ಖಾತ್ರಿ ಸಹಕಾರಿಯಾಗಿದ್ದು ಪ್ರತಿಯೊಬ್ಬರು ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಕೂಲಿ ಕೆಲಸ ಪಡೆಯುವ ಗಂಡು ಮತ್ತು ಹೆಣ್ಣಿಗೆ ಸಮಾನವಾಗಿ 370 ರೂ. ಕೂಲಿ ಮೊತ್ತ ನೀಡಲಾಗುತ್ತದೆ.ಪ್ರತಿ ವರ್ಷಕ್ಕೆ ಉದ್ಯೋಗ ಚೀಟಿ ಹೊಂದಿರುವ ಪ್ರತಿಯೊಂದು ಕುಟುಂಬಕ್ಕೂ ಒಂದು ಆರ್ಥಿಕ ವರ್ಷದಲ್ಲಿ 100 ದಿನ ಕೆಲಸ ಕೊಡಲಾಗುತ್ತದೆ. ಕೆಲಸ ಪಡೆಯುವ ಕಾರ್ಮಿಕರು ಫಾರಂ ನಂ 6 ರಲ್ಲಿ ಕೂಲಿ ಕಾರ್ಮಿಕರ ಪಟ್ಟಿಯ ಅರ್ಜಿಯನ್ನು ತಮ್ಮ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸಲ್ಲಿಸಿ ಕೂಲಿ ಕೆಲಸ ಪಡೆಯಬೇಕು ಎಂದು ಮಾಹಿತಿ ನೀಡಿದರು. ಈ ಸಂದರ್ಭದಲ್ಲಿ ಕರ ವಸೂಲಿಗಾರ ಮೈಬೂಬ್, ದ್ವಿತಿಯ ದರ್ಜೆ ಸಹಾಯಕ ದಶರಥ ಸೇರಿದಂತೆ ಇತರರು ಉಪಸ್ಥಿತರಿದ್ದರು.





ಬೀದರ್ : ಮಲ್ಲಮ್ಮ ನುಡಿ ಪತ್ರಿಕೆ ಹೊರತಂದ ಯುಗಾದಿ ಹಬ್ಬದ ಸಂಚಿಕೆಯನ್ನು ದೆಹಲಿಯ ಯೋಗ ಸರ್ಟಿಫೀಕೆಶನ್ ಬೋರ್ಡನ ಸದಸ್ಯರು ಹಾಗೂ ಐ.ಎನ್.ಓ ರಾಷ್ಟ್ರೀಯ ಅದ್ಯಕ್ಷರಾದ ಅನಂತ ಬಿರಾದಾರ ಹಾಗೂ ಸೂರ್ಯ ಫೌಂಡೇಶನ್ ಹಾಗೂ ಐ.ಎನ್.ಓ ರಾಜ್ಯ ಸಂಚಾಲಕ ಗುರುನಾಥ ರಾಜಗೀರಾ ಅವರಿಗೆ ತಂಡದಿಂದ ಪತ್ರಿಕಾಭವನದಲ್ಲಿ ಇಂದು ಬಿಡುಗಡೆ ಗೊಳಿಸಿದರು,




ಚಿತ್ರ ಮಾಹಿತಿ: ಭಗೀರಥ ಸೇವಾ ಟ್ರಸ್ಟ್ (ರಿ) ಹಾಗೂ ಕನ್ನಡ ಸಂಸ್ಕೃತಿ ಇಲಾಖೆ ಬೀದರ್ ಇವರ ಸಂಯುಕ್ತ ಆಶ್ರಯದಲ್ಲಿ ಶ್ರೀ ಸೋಮೇಶ್ವರ ದೇವಸ್ಥಾನ ಕಳಸಾರೋಹಣ ಕಾರ್ಯಕ್ರಮ ನಿಮಿತ್ಯ ಲಾಧ ಗ್ರಾಮದಲ್ಲಿ ಸುಗಮ ಸಂಗೀತ ಕಾರ್ಯಕ್ರಮ ನಡೆಯಿತು. ಕಲಾವಿದರಾದ ಸುರೇಖಾ ರಮೇಶ್ ಲಿಂಬಾವೆ, ಮೇಘ ಜಾಬಶೆಟ್ಟಿ ಉಪಸ್ಥಿತರಿದ್ದರು. ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಪೂಜ್ಯಶ್ರೀ ಡಾ. ಬಸವಲಿಂಗಪಟ್ಟ ದೇವರು, ಅಧ್ಯಕ್ಷತೆಯನ್ನು ಅಂಬಾದಾಸ್ ತುಕಾರಾಂ, ಮುಖ್ಯ ಅತಿಥಿಯಾಗಿ ಪ್ರಸನ್ನ ಖಂಡ್ರೆ, ಗ್ರಾಮದ ಮುಖಂಡರು ಉಪಸ್ಥಿತರಿದ್ದರು.

# ದೇಶದ ಪ್ರಗತಿಯಲ್ಲಿ ರೈತರ ಪಾತ್ರ ಹಿರಿದು

• ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ

ಭಾರತಕೃಷಿಪ್ರಧಾನದೇಶವಾಗಿದ್ದು, ರೈತರು ದೇಶದ 140 ಕೋಟಿ ಜನರಿಗೆ ಆಹಾರ ಪೂರೈಸುವ ಮೂಲಕ ಪ್ರಮುಖ ಪಾತ್ರ ವಹಿಸುತ್ತಿದ್ದಾರೆ ಎಂದು ಇಳಕಲ್ ಚಿತ್ತರಗಿ ವಿಜಯಮಹಾಂತೇಶ್ವರ ಸಂಸ್ಥಾನಮಠದ ಗುರುಮಹಾಂತ ಸ್ವಾಮೀಜಿ ಹೇಳಿದರು. ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ,ವಚನ ಜಾತ್ರೆ-2026, ಡಾ.ಚನ್ನಬಸವ ಪಟ್ಟದ್ದೇವರ 27ನೆಯ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ನಿಮಿತ್ತ ಹಿರೇಮಠ ಸಂಸ್ಥಾನ ಮತ್ತು ಅಮೃತ ಮಹೋತ್ಸವ ಸಮಿತಿ ವತಿಯಿಂದ ಬುಧವಾರ ಆಯೋಜಿಸಿದ್ದ ಸಾಧಕ ರೈತರ ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ರೈತರು ನಮ್ಮ ದೇಶದ ಬೆನ್ನೆಲು. ಅವರ ಪರಿಶ್ರಮದಿಂದಲೇ ನಮಗೆ ಅನ್ನ ದೊರೆಯುತ್ತದೆ. ಅವರ ಬೆವರ ಹನಿಯಿಂದ ನಾವು ಬದುಕುತ್ತಿದ್ದೇವೆ. ಅಧುನಿಕ ತಂತ್ರಜ್ಞಾನ ಎಷ್ಟೆ ಬೆಳೆದರೂ ಅನ್ನದ ಅಗಳನ್ನು ತಯಾರಿಸಲು ಸಾಧ್ಯವಿಲ್ಲ. ಅದು ರೈತನಿಂದಲೇ ಸಾಧ್ಯ. ತಂತ್ರಜ್ಞಾನ ಬೆಳೆದ ಹಾಗೆ ನಮ್ಮ ದೇಶದ ಯುವಕ ನೌಕರಿಗಳು ಕಡಿಮೆಯಾಗುತ್ತಿವೆ. ಅದಕ್ಕಾಗಿ ನಾವು ಕೃಷಿಯ ಕಡೆ ಗಮನ ಕೊಡಬೇಕಾಗಿದೆ.

ಕೃಷಿನಮ್ಮ ಮೂಲಸಂಸ್ಕೃತಿಯಾಗಿದೆ. ಅದನ್ನು ಮರೆತಿರುವುದರಿಂದ ನಮ್ಮ ಬಾಳಿನಲ್ಲಿ ಅನೇಕ ಸಮಸ್ಯೆಗಳು ಉಂಟಾಗುತ್ತಿವೆ. ದೇಶದ ಅನ್ನ ಕೊಡುವ ರೈತನ ಪರಿಸ್ಥಿತಿ ಅತ್ಯಂತ ಕಷ್ಟಕರವಾಗಿದೆ. ಇತ್ತೀಚಿನ ದಿನಮಾನಗಳಲ್ಲಿ ರೈತನಿಗೆ ಹೆಣ್ಣು ಸಿಗುವುದು ಬಹಳ ಅಪರೂಪವಾಗಿದೆ ಎಂದು ಕಳವಳ ವ್ಯಕ್ತಪಡಿಸಿದರು.

ಪೀಠಾಧಿಪತಿ ಗುರುಬಸವ ಪಟ್ಟದ್ದೇವರು,ಚಿಕ್ಕಗುರುನಂಜೇಶ್ವರ ಮಹಾಸ್ವಾಮಿಗಳು, ಶಾಂತವೀರ ಮುರುಘರಾಜೇಂದ್ರಮಹಾಸ್ವಾಮಿಗಳು, ಬಸವಲಿಂಗ ಮಹಾಸ್ವಾಮಿಗಳು

ಸಿದ್ಧಯ್ಯ ಕೋಟೆ, ಸಿದ್ಧಲಿಂಗ ಮಹಾಸ್ವಾಮಿಗಳು, ಚನ್ನಬಸವ ಮಹಾಸ್ವಾಮಿಗಳು, ಘನಲಿಂಗ ರುದ್ರಮುನಿ ಮಹಾಸ್ವಾಮಿಗಳು ಸಾನಿಧ್ಯ ವಹಿಸಿಕೊಂಡಿದ್ದರು.

ಜಿಲ್ಲಾ ರೈತ ಸಂಘದ ಅಧ್ಯಕ್ಷರಾದ ಸಿದ್ರಾಮಪ್ಪ ಅಣದೂರೆ,ಮಲ್ಲಿಕಾರ್ಜುನ ಸ್ವಾಮಿ, ಪ್ರಮುಖರಾದ ಬಸವರಾಜ ದೇಶಮುಖ,ಡಾ.ವೈಜಿನಾಥ ಬುಟ್ಟೆ, ಬಂಡೆಪ್ಪ ಕಂಟೆ, ರವಿ ಮೀಸೆ, ಪ್ರಕಾಶ ಘೂಳೆ, ಸುನೀಲ ಮಾಳಗೆ ಸೇರಿದಂತೆ ಹಲವರು ಇದ್ದರು. ಆರತಿ ಪಾತ್ರೆ ನಿರೂಪಿಸಿದರು. ಶಿಖರೇಶ್ವರ ಶೆಟಕಾರ ವಂದಿಸಿದರು.



## 75 ಸ್ವಚ್ಛತಾ ಕಾರ್ಮಿಕರಿಗೆ ಸನ್ಮಾನ

"ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಶನಿವಾರ ಸಾಯಂಕಾಲ 6 ಗಂಟೆಗೆ 75 ಸ್ವಚ್ಛತಾ ಕಾರ್ಮಿಕರನ್ನು ಸನ್ಮಾನಿಸಲಾಗುತ್ತಿದೆ. ತ್ರಿನೇತ್ರ ಮಹಾಂತ ಶಿವಯೋಗಿಗಳು ದಿವ್ಯಸಾನಿಧ್ಯ ವಹಿಸಿಕೊಳ್ಳಲಿದ್ದಾರೆ. ಜಗದ್ಗುರು ಇಮ್ಮಡಿ ಸಿದ್ಧರಾಮ ಮಹಾಸ್ವಾಮಿಗಳು, ಜಯಶಾಂತಲಿಂಗ ಮಹಾಸ್ವಾಮಿಗಳು, ಅಭಿನವ ಶಿವಲಿಂಗ ಮಹಾಸ್ವಾಮಿಗಳು, ಮುರುಘೇಂದ್ರ ಮಹಾಸ್ವಾಮಿಗಳು, ಶಿವಾನಂದ ಮಹಾಸ್ವಾಮಿಗಳು, ಗಂಗಾಧರ ಮಹಾಸ್ವಾಮಿಗಳು, ಸಿದ್ಧಲಿಂಗ ಮಹಾಸ್ವಾಮಿಗಳು ಮತ್ತು ಮಹಾಂತ ಸ್ವಾಮಿಗಳು ಸಾನಿಧ್ಯ ವಹಿಸಿಕೊಳ್ಳಳಿದ್ದಾರೆ. ಆರ್ಥಿಕ ಇಲಾಖೆ ಅಪರ್ ಮುಖ್ಯ ಕಾರ್ಯದರ್ಶಿ ರಿತೇಶ್ ಕುಮಾರ ಸಿಂಗ್ ಅಧ್ಯಕ್ಷತೆ ವಹಿಸಿಕೊಳ್ಳಲಿದ್ದಾರೆ. ರೇವಣಸಿದ್ದಪ್ಪ ಜಲಾದೆ, ಸಂಗಮೇಶ ಕಾರಬಾರಿ, ಸೋಮಶೇಖರ ಚಿದ್ರಿ, ರಾಜೇಂದ್ರಕುಮಾರ ಗಂದಗೆ, ಜೈರಾಜ ಖಂಡ್ರೆ, ಡಾ.ರಜನೀಶ ವಾಲಿ, ಶಶಿ ಹೊಸ್ಸಳ್ಳಿ, ಕುಶಾಲರಾವ ಪಾಟೀಲ, ಬಿ.ಜಿ.ಶಟಕಾರ, ಸಿದ್ರಾಮಯ್ಯ ಸ್ವಾಮಿ, ಬಸವರಾಜ ಭತಮುರ್ಗೆ, ವಿಜಯಕುಮಾರ ಸೋನಾರೆ ಅವರು ಗೌರವ ಅತಿಥಿಗಳಾಗಿ ಆಗಮಿಸಲಿದ್ದಾರೆ.' ಗೀತಾ ಪಾಟೀಲ ಅವರು ನಿರೂಪಣೆ ಮಾಡಲಿದ್ದಾರೆ. ಮಹಾನಂದ ದೇಶಮುಖ ಶರಣು ಸಮರ್ಪಣೆ ಮಾಡಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

**ಶಾಲಾ ಶಿಕ್ಷಣ ಇಲಾಖೆಯ, ಉಪನಿರ್ದೇಶಕರ ಕಾರ್ಯಾಲಯ, ಬೀದರ. ಜಿಲ್ಲೆ – ಬೀದರ.**

No: DPI/2026-27/IND664 Date: 16/04/2026

2024–25ನೇ ಸಾಲಿಗೆ ಕೆಎಫ್‌ಡಿಸಿ ಸಿಎಸ್‌ಆರ್ ಅನುದಾನಅಡಿ ಭಾಲ್ಕಿ ತಾಲೂಕಿನ ಸರಕಾರಿ ಪ್ರೌಢ ಶಾಲೆ ಮಳಚಾಪೂರಗೆ ವಿಜ್ಞಾನ,ಗಣಿತ ಪ್ರಯೋಗಾಲಯ ಹಾಗೂ ಕಲಿಕಾ ಸಾಮಗ್ರಿ ಸರಬರಾಜು ಸಂಬಂಧ ಅಲ್ಪಾವಧಿ ಇ–ಟೆಂಡರ್ ಅಧಿಸೂಚನೆ ಹೊರಡಿಸಲಾಗಿದೆ. ದ್ವಿಲಕೋಟೆ ಪದ್ಧತಿಯಲ್ಲಿ ಆಸಕ್ತ ಅಧೀಕೃತ ಮಾರಾಟ ಸಂಸ್ಥೆಗಳಿಂದ ಇ–ಟೆಂಡರ್ ಆಹ್ವಾನಿಸಲಾಗಿದೆ.

**ಟೆಂಡರ್ ವೇಳಾ ಪಟ್ಟಿ ಹಾಗೂ ವಿವರಗಳು:**– 1) ಟೆಂಡರ್‌ಗೆ ಇಟ್ಟಿರುವ ಮೊಬಲಗು **ರೂ: 8.78 ಲಕ್ಷ,** 2) ಟೆಂಡರ್ ಡಾಕ್ಯುಮೆಂಟ್‌ನ್ನು ವೆಬ್ ಸೈಟ್ ನಿಂದ ಡೌನಲೋಡ್ ಮಾಡಕೊಳ್ಳಬೇಕಾದ ದಿನಾಂಕ ದಿ:16–04–2026 ರಿಂದ 27–04–2026. ಸಂಜೆ: 5.00, 3) ಟೆಂಡರ್ ಬಿಡಗಳನ್ನು ಸಲ್ಲಿಸಲು ಕೊನೆಯ ದಿನಾಂಕ (ವೆಬ್ ಸೈಟ್ ಮೂಲಕ) ಸಮಯ ದಿ:27/06/2026 ಸಮಯ ಸಂಜೆ: 5.00, 4) ತಾಂತ್ರಿಕ ಬಿಡ್‌ಗಳನ್ನು ತೆರೆಯುವ ದಿನಾಂಕ & ಸಮಯ ದಿ:28/04/2026 ಸಮಯ ಸಂಜೆ:05:15 ನಿಮಿಷ, 5) ಆರ್ಥಿಕ ಬಿಡ್ ಗಳನ್ನು ತೆರೆಯ ಬಹುದಾದ ಸಂಭಾವ್ಯ ದಿನಾಂಕ & ಸಮಯ ದಿ:30/04/2026 ಮು:11.00 ಗಂಟೆ, 6) ಇ.ಎಂ.ಡಿ. ಮೊಬಲಗು (ವಿದ್ಯುನ್ಮಾನ ಪ್ರಕ್ರಿಯೆ ಮೂಲಕ ಮಾತ್ರ) ರೂ:22000/–, 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ದೂರವಾಣಿ ಸಂಖ್ಯೆ 9448999330 8) ಅಂತರ ಜಾಲತಾಣದ ವಿಳಾಸ www.kppp.karnataka.gov.in

ಸಹಿ/– ಉಪನಿರ್ದೇಶಕರು (ಆಡಳಿತ)
ಶಾಲಾ ಶಿಕ್ಷಣ ಇಲಾಖೆ, ಬೀದರ ಜಿಲ್ಲೆ.

ವಾ.ಸಾ.ಸಂ.ಇ/ಬೀದರ/13/ಕೆ.ಎಸ್.ಎಂ.ಸಿ.&ಎ/2026–27



ಬಸವಕಲ್ಯಾಣ : ತಾಲ್ಲೂಕಿನ ಪರತಾಪೂರ ಗ್ರಾಮದ ಸಂಗೀತಾ ತಂದೆ ರತನ ಗಾಯಕವಾಡ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶೇ.83 ರಷ್ಟು ಅಂಕ ಪಡೆದ ಹಿನ್ನೆಲೆಯಲ್ಲಿ ತಾ.ಪಂ.ಕಾ.ನಿ.ಅ.ರಮೇಶ ಸುಲ್ಪಿ ರವರು ವಿದ್ಯಾರ್ಥಿನಿಗೆ ಗ್ರಾ.ಪಂ.ವತಿಯಿಂದ 5 ಸಾವಿರ ರೂ. ಚೆಕ್ ವಿತರಿಸಿ, ಸನ್ಮಾನಿಸುವ ಮೂಲಕ ಪ್ರೋತ್ಸಾಹಿಸಿದರು. ಈ ಸಂದರ್ಭದಲ್ಲಿ ಪಿಡಿಒ ಚಂದ್ರಾಮ ಧೂಳಖೇಡ, ಗ್ರಾ.ಪಂ.ಕಾ.ದ.ರೇವಣಸಿದ್ಧ ಪಾಟೀಲ್ ಹಾಗೂ ಸಿಬ್ಬಂದಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಸಂಪಾದಕೀಯ

ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349



## ವಿಶ್ವಗುರು ಬಸವಣ್ಣ, ಗೌತಮ ಬುದ್ಧ, ಡಾ. ಬಿ.ಆರ್. ಅಂಬೇಡ್ಕರ್ ಸೇರಿದಂತೆ ಇತರೆ ಮಹಾಪುರುಷರ ತತ್ವಗಳು ಮಾನವ ಜೀವನಕ್ಕೆ ದಿಕ್ಕು ತೋರಿಸುವ ದೀಪಗಳಂತಿವೆ



ಬಸವಣ್ಣರು ಸಮಾನತೆ, ಕಾಯಕ ಮತ್ತು ದಾಸೋಹದ ಮಹತ್ವವನ್ನು ಸಾರಿದರು. ಜಾತಿ ಭೇದವಿಲ್ಲದ ಸಮಾಜವನ್ನು ನಿರ್ಮಿಸಲು ಅವರು ಮಾಡಿದ ಪ್ರಯತ್ನಗಳು ಇಂದಿಗೂ ಪ್ರಸ್ತುತವಾಗಿವೆ.

ಬುದ್ಧರು ಅಹಿಂಸೆ, ಶಾಂತಿ, ಮಧ್ಯಮ ಮಾರ್ಗ ಮತ್ತು ದಯೆಯ ಮೌಲ್ಯಗಳನ್ನು ಬೋಧಿಸಿದರು. ಮನಸ್ಸಿನ ಶುದ್ಧತೆ ಮತ್ತು ದುಃಖ ನಿವಾರಣೆಯ ದಾರಿ ಅವರ ತತ್ವಗಳಲ್ಲಿ ಅಡಗಿದೆ.

ಡಾ. ಅಂಬೇಡ್ಕರ್ ಅವರು ಶಿಕ್ಷಣ, ಸಂಘಟನೆ ಮತ್ತು ಹೋರಾಟದ ಮೂಲಕ ಸಮಾಜದಲ್ಲಿ ಸಮಾನತೆ, ನ್ಯಾಯ ಮತ್ತು ಸ್ವಾಭಿಮಾನವನ್ನು ಸ್ಥಾಪಿಸಲು ಕರೆ ನೀಡಿದರು.

ಈ ಮಹಾಪುರುಷರ ತತ್ವಗಳನ್ನು ನಾವು ಜೀವನದಲ್ಲಿ ಅಳವಡಿಸಿಕೊಂಡರೆ:
ಸಮಾಜದಲ್ಲಿ ಸಮಾನತೆ ಮತ್ತು ಸೌಹಾರ್ದತೆ ಹೆಚ್ಚುತ್ತದೆ
ಅಜ್ಞಾನ, ಅನ್ಯಾಯ ಮತ್ತು ಭೇದಭಾವ ಕಡಿಮೆಯಾಗುತ್ತದೆ
ವ್ಯಕ್ತಿತ್ವದಲ್ಲಿ ಶಿಸ್ತು, ಮೌಲ್ಯ ಮತ್ತು ಮಾನವೀಯತೆ ಬೆಳೆಯುತ್ತದೆ
ಆದ್ದರಿಂದ, ಇಂತಹ ಮಹಾನ್ ಚಿಂತಕರ ಮಾರ್ಗದರ್ಶನವನ್ನು ಕೇವಲ ಓದುವುದಲ್ಲ, ನಮ್ಮ ದಿನನಿತ್ಯ ಜೀವನದಲ್ಲಿ ಅನುಸರಿಸುವುದು ಅತ್ಯಗತ್ಯ. ಅದುವೇ ನಿಜವಾದ ಗೌರವವೂ ಆಗುತ್ತದೆ.

# ನವೋದಯ ವಿದ್ಯಾಲಯ : ನೂರಕ್ಕೆ ನೂರು ಫಲಿತಾಂಶ



• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ತಾಲೂಕಿನ ನಾರಾಯಣಪುರ ಗ್ರಾಮದ ಸಮೀಪ ಇರುವ ಜವಾಹರ್ ನವೋದಯ ವಿದ್ಯಾಲಯದ ಒಟ್ಟು 76 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದು ಎಲ್ಲಾ ವಿದ್ಯಾರ್ಥಿಗಳು ಉತ್ತೀರ್ಣರಾಗಿರುತ್ತಾರೆ. ನೂರಕ್ಕೆ ನೂರು ಫಲಿತಾಂಶ ಪಡೆದಿದ್ದಕ್ಕೆ ಪ್ರಾಚಾರ್ಯರಾದ ಅರವಿಂದ ವಿದ್ಯಾರ್ಥಿಗಳಿಗೆ ಮತ್ತು ಶಿಕ್ಷಕರನ್ನು ಅಭಿನಂದಿಸಿದ್ದಾರೆ.

ಮಾಸ್ಟರ್ ಶಿವಶಾಂತ್, ಕಾರಮುಗೆ ಶೇ. 92.6 ಪ್ರತಿಶತ ಅಂಕಗಳನ್ನು ಪಡೆದು ಪ್ರಥಮ ಸ್ಥಾನ ಪಡೆದರೆ, ಶೇ 92 ಅಂಕಗಳು ಪಡೆದು ಕುಮಾರಿ ಸ್ಫೂರ್ತಿ ದ್ವಿತೀಯ ಸ್ಥಾನ ಪಡೆದಿದ್ದರೆ , ಶೇಕಡ 90 ಅಂಕಗಳು ಪಡೆದು ಕುಮಾರಿ ಖುಷಿ ಗೌಡ ಮೂರನೇ ಸ್ಥಾನಕ್ಕೆ ತನ್ನದಾಗಿಸಿಕೊಂಡಿದ್ದಾರೆ.

ವಿಶೇಷವೆಂದರೆ ಕುಮಾರಿ ಶ್ರದ್ಧಾ ಕೆ.ಓ ಕನ್ನಡದಲ್ಲಿ ನೂರಕ್ಕೆ ನೂರು ಅಂಕಗಳನ್ನು ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾಳೆ ಎಂದು ಕನ್ನಡ ಶಿಕ್ಷಕರಾದ ಧರ್ಮನ ಚಿಟ್ಟಾ ಹರ್ಷ ವ್ಯಕ್ತಪಡಿಸಿದ್ದಾರೆ.

ಶೇ 75ಕ್ಕಿಂತ (75–93) ಒಟ್ಟು 31 ವಯ ವಿದ್ಯಾರ್ಥಿಗಳು ಅತ್ಯುತ್ತಮ ಶ್ರೇಣಿಯಲ್ಲಿ ತೇರ್ಗಡೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾರೆ ಎಂದು ಪ್ರಾಚಾರ್ಯರು ಹಾಗೂ ಶಿಕ್ಷಕರು ವಿಧ್ಯಾರ್ಥಿಗಳಿಗೆ ಅಭಿನಂದಿಸಿದರು.

# ಉಚಿತ ಆಯುರ್ವೇದ ತಪಾಸಣೆ ಶಿಬಿರ

• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ

ನಗರದಲ್ಲಿ ಬಸವ ಜಯಂತಿ ಹಾಗೂ ಸಂಗಪ್ಪ ಚಂದನಕೆರೆ ಸ್ಮರಣಾರ್ಥ ಇಲ್ಲಿನ ಹುಲಸೂರ ರಸ್ತೆಯಲ್ಲಿರುವ ಎಸ್. ಬಿ. ಚಂದನಕೆರೆ ಕಾಂಪ್ಲೆಕ್ಸ್ ನಲ್ಲಿ ಸಂಗಮೇಶ್ವರ ಆಸ್ಪತ್ರೆಯ ವತಿಯಿಂದ ರವಿವಾರ ಬೆಳಿಗ್ಗೆ 10 ರಿಂದ ಮಧ್ಯಾಹ್ನ 2 ರವರೆಗೆ ಉಚಿತ ಆಯುರ್ವೇದ ತಪಾಸಣೆ ಹಾಗೂ ಚಿಕಿತ್ಸಾ ಶಿಬಿರವನ್ನು ಆಯೋಜಿಸಲಾಗಿದೆ. ಈ ಶಿಬಿರದಲ್ಲಿ ಮಂಡಿನೂವು. ಕೀಲು ಮತ್ತು ಮೂಳೆ ನೋವು ಎಲ್ಲಾ ತರಹದ ವಾತ ರೋಗಗಳು. ಚರ್ಮರೋಗ ಹಾಗೂ ಬಂಜೆತನಕೆ ಉಚಿತ ತಪಾಸಣೆ ಮತ್ತು ಚಿಕಿತ್ಸೆ ನೀಡಲಾಗುವುದು ಎಂದು ಡಾ. ಧನರಾಜ ಎಸ್. ಚಂದನಕೆರೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಒಂದು ದಿನದ ಕಾರ್ಯಾಗಾರ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಮಾಹಿತಿ ಹಕ್ಕು ಕಾಯ್ದೆ ಕುರಿತು ಕಲಬುರಗಿ ಜಿಲ್ಲೆಯ ಜಿಲ್ಲಾ ಮಟ್ಟದ, ತಾಲೂಕು ಮಟ್ಟದ ಹಾಗೂ ನಗರ ಹಾಗೂ ಗ್ರಾಮೀಣ ಪ್ರದೇಶದ ಸ್ಥಳಿಯ ಸಂಸ್ಥೆಗಳ ಸಾರ್ವಜನಿಕ ಮಾಹಿತಿ ಅಧಿಕಾರಿಗಳಿಗೆ ಏಪ್ರಿಲ್ 18ರ ಶನಿವಾರ ಬೆಳಿಗ್ಗೆ 10ಗಂಟೆಗೆ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠ ಹಾಗೂ ಕಲಬುರಗಿ ಜಿಲ್ಲಾಡಳಿತ ವತಿಯಿಂದ ಕಾರ್ಯಗಾರ ಹಮ್ಮಿಕೊಳ್ಳಲಾಗಿದೆ.

ಕಾರ್ಯಗಾರವನ್ನು ಕರ್ನಾಟಕ ಮಾಹಿತಿ ಆಯೋಗದ ಕಲಬುರಗಿ ಪೀಠದ ರಾಜ್ಯ ಮಾಹಿತಿ ಆಯುಕ್ತರಾದ ಬಿ. ವೆಂಕಟಸಿಂಗ್ ಉದ್ಘಾಟಿಸಲಿದ್ದಾರೆ.

# ಮಹಿಳಾ ಧ್ವನಿಗೆ ಶಕ್ತಿಯಾದ ಬಸವಣ್ಣನವರು: ಕೊರಣೇಶ್ವರ ಸ್ವಾಮಿಜಿ




• **ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣ**

ಜಗತ್ತಿನಲ್ಲಿ ಮೊದಲ ಬಾರಿಗೆ ಮಹಿಳೆಯರಿಗೆ ಸಾಮಾಜಿಕವಾಗಿ, ಮಾತುಗಾರಿಕೆಯ ಸ್ವಾತಂತ್ರ್ಯ ಕಲ್ಪಿಸಿದ್ದು ಬಸವಣ್ಣನವರು ಎಂದು ಉಸ್ತುರಿಯ ವಿರಕ್ತ ಮಠದ ಪೂಜ್ಯ ಶ್ರೀ ಕೊರಣೇಶ್ವರ ಮಹಾಸ್ವಾಮಿಗಳು ಹೇಳಿದರು.

ಇಲ್ಲಿನ ಶ್ರೀ ಬಸವೇಶ್ವರ ದೇವಸ್ಥಾನದಲ್ಲಿ ಮಹಾತ್ಮ ಬಸವೇಶ್ವರರ 76ನೇ ಜಾತ್ರಾ ಮಹೋತ್ಸವ ಪ್ರಯುಕ್ತ ಶ್ರೀ ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಹಾಗೂ ವಿಶ್ವಸ್ಥ ಸಮಿತಿಯ ವತಿಯಿಂದ ಹಮ್ಮಿಕೊಂಡಿದ್ದ ಹದಿನೈದು ದಿನಗಳ ಬಸವ ತತ್ವ ಆಧ್ಯಾತ್ಮಿಕ ಪ್ರವಚನದ ಸಮಾರೋಪ ಸಮಾರಂಭದ ದಿವ್ಯ ಸಾನಿಧ್ಯ ವಹಿಸಿ ಆಶಿರ್ವಚನ ನೀಡಿದ ಅವರು,

ಮಹಿಳೆಯನ್ನು ಮಾಯೆಯ ನೆಲೆಯಿಂದ ಮಾನವೀಯ ನೆಲೆಗೆ ತಂದು ನಿಲ್ಲಿಸಿದ್ದು ಶರಣರು ಎಂದರು.

ಮಹಾದೇವಿಯಕ್ಕ, ಲಕ್ಕಮ್ಮ, ನಾಗಾಂಬಿಕೆ ಮೊದಲಾದ ಶರಣೆಯರು ಈ ನೆಲದಲ್ಲಿ ವೈಚಾರಿಕ ಬೆಳೆಯನ್ನು ಬೆಳೆದಿದ್ದಾರೆ. ಶರಣೆಯರು ತೋರಿದ ವಿಚಾರ ಪಥದಲ್ಲಿ ಈ ಕಾಲದ ಮಹಿಳೆಯರು ಸಾಗಬೇಕು. ಶರಣರ ಭಕ್ತಿಯು ಮುಗ್ಧತೆ ಮೀರಿದ್ದು. ಮೌಢ್ಯ, ಕಂದಾಚಾರ, ಅಂಧಾನುಕರಣೆ ನಿರಾಕರಿಸಿದ ಅವರು, ಭಕ್ತಿಯನ್ನು ವಿಚಾರ ಕ್ರಾಂತಿಯಾಗಿಸಿದ್ದರು ಎಂದರು.

ಹದಿನೈದು ದಿನಗಳ ವರೆಗೆ ಬಸವತತ್ವ ಆಧ್ಯಾತ್ಮಿಕ ಪ್ರವಚನ ನೀಡಿದ ಚಿಗರಳ್ಳಿಯ ಮರುಳ ಶಂಕರದೇವ ಗುರುಪೀಠದ ಪೂಜ್ಯ ಶ್ರೀ ಸಿದ್ಧಬಸವ ಕಬೀರ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಬಸವಕಲ್ಯಾಣದಂಥ ಪ್ರಜ್ಞೆ, ಕರುಣೆ, ಸೌಹಾರ್ದದ ನೆಲದಲ್ಲಿ ಕೆಲವು ದಿನ ಮಾತನಾಡುವ ಅವಕಾಶ ದೊರೆತಿದ್ದು ಶರಣ ಸಂವಾದದ ಅನುಭವ ನೀಡಿದೆ ಎಂದರು. ಬಸವೇಶ್ವರ ದೇವಸ್ಥಾನ ಪಂಚ ಕಮಿಟಿ ಹಾಗೂ ವಿಶ್ವಸ್ಥ ಸಮಿತಿಯವರು ಈ ನೆಲದಲ್ಲಿ ಬಸವ ಚಿಂತನೆ ಜೀವಂತವಾಗಿ ಇರಿಸಿದ್ದಾರೆ.

ಅವರ ಸಾಮಾಜಿಕ ಕಾಳಜಿ ದೊಡ್ಡದು ಎಂದರು.

ಭದ್ರಾವತಿಯ ಗಂಗಾಂಬಿಕಾ ಅಕ್ಕನವರು, ಅಧ್ಯಕ್ಷತೆ ವಹಿಸಿದ್ದರು. ಬಿಡಿಪಿಸಿ ಅಧ್ಯಕ್ಷರಾದ ಅನಿಲಕುಮಾರ ರಗಟೆ ಮಾತನಾಡಿದರು.

ಬಿಡಿವಿಸಿ ಅಧ್ಯಕ್ಷರಾದ ಶಶಿಕಾಂತ ದುರ್ಗೆ, ಬಿಡಿಪಿಸಿ ಉಪಾಧ್ಯಕ್ಷರಾದ ಮಲ್ಲಿಕಾರ್ಜುನ ಕುರಕೋಟೆ, ಕೋಶಾಧ್ಯಕ್ಷ ಜಗನ್ನಾಥ ಖೂಬಾ, ಕಾರ್ಯದರ್ಶಿ ಅಶೋಕ ನಾಗರಾಳೆ, ಸಹ ಕಾರ್ಯದರ್ಶಿ ಸುನೀಲ ರಾಯವಾಡೆ , ಬಸವರಾಜ ಬಾಲಕಿಲೆ, ನಿರ್ದೇಶಕರಾದ ಬಸವರಾಜ ಕೋರಕೆ, ಈರಣ್ಣಾ ಹಲಶೆಟ್ಟೆ, ಭದ್ರಿನಾಥ ಪಾಟೀಲ , ವಿವೇಕಾನಂದ ಹೊದಲೂರೆ ಬಸವರಾಜ ತೊಂಡಾರೆ, ಮಲ್ಲಿಕಾರ್ಜುನ ಚಿರಡೆ ಸುನೀಲಕುಮಾರ ಹೊಳಕುಂದೆ, ರಾಜಕುಮಾರ ಹೊಳಕುಂದೆ, ಪುಷ್ಪಾವತಿ ಮಾಮಾ, ಬಿಡಿವಿಸಿ ಬಿಡಿವಿಸಿ ಉಪಾಧ್ಯಕ್ಷ ಡಾ. ಜಿ. ಎಸ್ ಭುರಾಳೆ, ಕಾರ್ಯದರ್ಶಿ ನಾಗಯ್ಯಾ ಸ್ವಾಮಿ, ಶಿವರಾಜ ಶಾಶೆಟ್ಟಿ , ಬಸವರಾಜ ಪಾಟೀಲ, ಸೋಮಶೇಖರಯ್ಯಾ ವಸ್ತ್ರದ, ಮಲ್ಲಿನಾಥ ಮಂಠಾಳೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಂಜನಾ ಭೂಶೆಟ್ಟಿ ಹಾಗೂ ಮಂಜುನಾಥ ಹೇಮಶೆಟ್ಟಿ ಅವರಿಂದ ವಚನ ಗಾಯನ ನಡೆಯಿತು. ರುದ್ರಮಣಿ ಮಠಪತಿ ಸ್ವಾಗತಿಸಿದರು. ಜ್ಯೋತಿ ತುಗಾವೆ ನಿರೂಪಿಸಿದರು. ವಂದಿಸಿದರು.

# ಟ್ರಾಫಿಕ್ ಅರಾಜಕತೆ: ಅಟೋ ಚಾಲಕರು, ಬೀದಿ ವ್ಯಾಪಾರಿ ವಿರುದ್ಧ ಪೊಲೀಸರ ಕಿಡಿ



• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ಪ್ರಮುಖ ರಸ್ತೆಗಳಲ್ಲಿ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಟ್ರಾಫಿಕ್ ಸಮಸ್ಯೆ ಗಂಭೀರ ರೂಪ ತಾಳಿದ್ದು, ಸಾರ್ವಜನಿಕರ ಜೀವಕ್ಕೆ ಅಪಾಯಕಾರಿಯಾಗಿ ಪರಿಣಮಿಸುತ್ತಿದೆ. ವಿಶೇಷವಾಗಿ ಅಟೋ ಚಾಲಕರ ಅಡ್ಡಾದಿಡ್ಡಿ ನಿಲುಗಡೆ ಹಾಗೂ ಬೀದಿ ಬದಿ, ನಡು ರಸ್ತೆಯಲ್ಲಿ ತರಕಾರಿ–ಹಣ್ಣು ಮಾರುವವರ ನಿರ್ಲಕ್ಷ್ಯದಿಂದ ಅಪಘಾತಗಳ ಸಂಖ್ಯೆ ಹೆಚ್ಚುತ್ತಿರುವುದು ಆತಂಕಕ್ಕೆ ಕಾರಣವಾಗಿದೆ.

ಈ ಹಿನ್ನೆಲೆಯಲ್ಲಿ ಬಳ್ಳಾರಿ ನಗರದ ಸಂಚಾರಿ ಪೋಲಿಸ್ ಠಾಣೆಯ ಸರ್ಕಲ್ ಇನ್ಸೆಕ್ಟರ್ ರುದ್ರಪ್ಪ ಅವರು ಕಠಿಣ ಕ್ರಮಕ್ಕೆ ಮುಂದಾಗಿದ್ದಾರೆ. ನಿಯಮ ಉಲ್ಲಂಘನೆ ಮಾಡುತ್ತಿರುವ ಅಟೋ ಚಾಲಕರು ಹಾಗೂ ಬೀದಿ ವ್ಯಾಪಾರಿಗಳನ್ನು ಠಾಣೆಗೆ ಕರೆಯಿಸಿ ಗಂಭೀರ ಎಚ್ಚರಿಕೆ ನೀಡಿ ತರಾಟೆಗೆ ತೆಗೆದುಕೊಂಡರು.

ಸಭೆಯಲ್ಲಿ ಮಾತನಾಡಿದ ಅವರು, "ರಸ್ತೆ ಎಂದರೆ ಸಾರ್ವಜನಿಕರ ಸಂಚಾರಕ್ಕೆ. ಅದನ್ನು ನಿಮ್ಮ ವೈಯಕ್ತಿಕ ವ್ಯಾಪಾರ ಕೇಂದ್ರವನ್ನಾಗಿ ಮಾಡಿಕೊಳ್ಳುವುದು ಸಂಪೂರ್ಣ ತಪ್ಪು. ನಡು ರಸ್ತೆಯಲ್ಲಿ ಬಂಡಿ ನಿಲ್ಲಿಸಿ ಹಣ್ಣು–ತರಕಾರಿ ಮಾರಾಟ ಮಾಡುವುದು, ಅಟೋಗಳನ್ನು ಎಲ್ಲೆಂದರಲ್ಲಿ ನಿಲ್ಲಿಸಿ ಪ್ರಯಾಣಿಕರನ್ನು ಏರಿಸುವುದು ಇವೆಲ್ಲವು ನೇರವಾಗಿ ಅಪಘಾತಗಳಿಗೆ ಕಾರಣವಾಗುತ್ತಿದೆ," ಎಂದು ಕಿಡಿಕಾರಿದರು. ಇನ್ನೂ ಮುಂದುವರಿದು "ಇಂದು ಅನೇಕ ವ್ಯಾಪಾರಿಗಳು ಪಾಲಿಕೆ ಅನುಮತಿ ಪಡೆದು, ತೆರಿಗೆ ಕಟ್ಟಿ–ಕೊಂಡು ಮಳಿಗೆಗಳಲ್ಲಿ ವ್ಯಾಪಾರ ಮಾಡುತ್ತಿದ್ದಾರೆ. ಆದರೆ ನೀವು ನಿಯಮ ಮೀರಿ ರಸ್ತೆಯನ್ನು ಆಕ್ರಮಿಸಿಕೊಂಡು ಸಾರ್ವಜನಿಕರ ಜೀವದೊಂದಿಗೆ ಆಟವಾಡುತ್ತಿದ್ದೀರಿ. ಇದನ್ನು ಯಾವ ಕಾರಣಕ್ಕೂ ಸಹಿಸಲಾಗುವುದಿಲ್ಲ," ಎಂದು ಗಟ್ಟಿಯಾಗಿ ಎಚ್ಚರಿಸಿದರು.

ನಡು ರಸ್ತೆಯಲ್ಲಿ ವ್ಯಾಪಾರ ಮಾಡುತ್ತಿದ್ದವರ ತಕ್ಕಡಿಗಳು ಮತ್ತು ಬಂಡಿಗಳನ್ನು ವಶಕ್ಕೆ ಪಡೆದು ಠಾಣೆಗೆ ತರಲಾಗಿದ್ದು, ಇಂತಹ ಕಾನೂನುಬಾಹಿರ ಚಟುವಟಿಕೆಗಳನ್ನು ತಕ್ಷಣ ನಿಲ್ಲಿಸಲು ಸೂಚಿಸಲಾಯಿತು. "ಇನ್ನು ಮುಂದೆ ರಸ್ತೆಯಲ್ಲಿ ವ್ಯಾಪಾರ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ನಿಮ್ಮಿಂದಲೇ ಅಪಘಾತಗಳು ನಡೆಯುತ್ತಿವೆ ಎಂಬುದು ಸ್ಪಷ್ಟವಾಗಿದೆ," ಎಂದು ರುದ್ರಪ್ಪ ಅವರು ಕೋಪೋದ್ರಿಕ್ತವಾಗಿ ಹೇಳಿದರು. ಅಟೋ ಚಾಲಕರ ವಿರುದ್ಧವೂ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಅವರು, "ನಿಮಗೆ ನಿಗದಿತ ಸ್ಟ್ಯಾಂಡ್‌ಗಳಿದ್ದರೂ ಅವನ್ನು ಬಿಟ್ಟು ನಡು ರಸ್ತೆಯಲ್ಲಿ ಅಡ್ಡವಾಗಿ ನಿಲ್ಲಿಸುವುದು, ಟ್ರಾಫಿಕ್ ಅಡಚಣೆ ಮಾಡುವುದು ಅಸಭ್ಯ ವರ್ತನೆ. ಇಂತಹ ನಿರ್ಲಕ್ಷ್ಯ ಮುಂದುವರೆದರೆ ವಾಹನ ವಶಕ್ಕೆ ಪಡೆಯುವಷ್ಟೇ ಅಲ್ಲ, ಕಾನೂನು ಕ್ರಮವೂ ಕಠಿಣವಾಗಿರುತ್ತದೆ," ಎಂದು ಎಚ್ಚರಿಸಿದರು. ನಗರದಲ್ಲಿ ಶಿಸ್ತಿನ ಕೊರತೆ ಹಾಗೂ ನಿಯಮ ಉಲ್ಲಂಘನೆಗಳು ಮುಂದುವರೆದರೆ ಸಾರ್ವಜನಿಕರ ಜೀವ ಹಾನಿ ಅನಿವಾರ್ಯವಾಗುತ್ತದೆ ಎಂಬ ಸಂದೇಶವನ್ನು ಸ್ಪಷ್ಟವಾಗಿ ನೀಡಿದ ಸಂಚಾರಿ ಪೊಲೀಸರು, ಇನ್ನು ಮುಂದೆ ಯಾವುದೇ ರೀತಿಯ ಸಡಿಲಿಕೆ ಇರದು ಎಂದು ತಿಳಿಸಿದರು.

ಒಟ್ಟಿನಲ್ಲಿ, ಬಳ್ಳಾರಿ ನಗರದಲ್ಲಿ ಟ್ರಾಫಿಕ್ ನಿಯಂತ್ರಣಕ್ಕಾಗಿ ಪೊಲೀಸರು ಕಠಿಣ ಹಾದಿ ಹಿಡಿದಿದ್ದು, ನಿಯಮ ಉಲ್ಲಂಘಿಸುವವರ ವಿರುದ್ಧ "ಸಹಿಷ್ಣುತೆ ಇಲ್ಲ" ಎಂಬ ಸಂದೇಶವನ್ನು ಗಟ್ಟಿಯಾಗಿ ರವಾನಿಸಿದ್ದಾರೆ.

# ಕುಡಿಯುವ ನೀರಿಗಾಗಿ ಸಭೆ ಅಧಿಕಾರಿಗಳಿಗೆ ತಾಕಿತು

• **ಮಲ್ಲಮ್ಮ ನುಡಿ ವಾರ್ತೆ , ಮುದಗಲ್**

ಪಟ್ಟಣದಲ್ಲಿ ಬಹು ದಿನಗಳಿಂದ ಕುಡಿಯುವ ನೀರಿನ ಸಮಸ್ಯೆ ಇದ್ದು, ಸಾರ್ವಜನಿಕ ರಿಗೆ ತೊಂದರೆ–ಯಾಗದಂತೆ ಕೂಡಲೇ 4ರಿಂದ 5ದಿನಗಳಿಗೊಮ್ಮೆ ನೀರು ಪೂರೈಕೆ ಮಾಡಬೇಕೆಂದು ಲಿಂಗಸುಗೂರು ಕ್ಷೇತ್ರದ ಶಾಸಕ ಮಾನಪ್ಪ ಡಿ. ವಜ್ಜಲ್ ಶುಕ್ರವಾರ ಪುರಸಭೆ ಮುಖ್ಯಾಧಿಕಾರಿ ಪ್ರವೀಣ್ ಬೋಗಾರ್ ಅವರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪುರಸಭೆ ಸಭಾಭವನದಲ್ಲಿ ಹಮ್ಮಿಕೊಂಡಿದ್ದ ಕುಡಿಯುವ ನೀರಿನ ಸಮಸ್ಯೆ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನೀರಿನ ಸಮಸ್ಯೆ ಬಗೆಹರಿಸಲು ಎಷ್ಟು ಹಣ ವ್ಯಯವಾಗುತ್ತದೆ. ಕ್ರಿಯಾಯೋಜನೆ ಮಾಡಿದ್ದೀರಾ, 23 ವಾರ್ಡ್‌ಗಳಲ್ಲಿ ಬೋರ್ವೆಲ್ಲಗಳ ಚಾಲ್ತಿ, ಅಕ್ರಮಿತ ಸ್ಥಳಗಳ ಪರಿಶೀಲನೆ, ಚರಂಡಿ ಸ್ವಚ್ಛತೆ, ಕಸ ಎತ್ತುವಿಕೆ, ಬೀದಿ ನಾಯಿಗಳಿಂದ ಜನರಿಗೆ ತೊಂದರೆ, ಖಾತಾ ನಕಲ್ ನೀಡುವ ಸಮಸ್ಯೆ, ಗೋವುಗಳ ರಕ್ಷಣೆ, ವಾಣಿಜ್ಯ ಮಳಿಗೆ ಹರಾಜು, ಬೀದಿ ದೀಪ ಸಮಸ್ಯೆ, ಉದ್ಯಾನವನದ ಒತ್ತುವರಿ ಲಿಸ್ಟ್, ಕೋಟೆ ತಡೆಗೋಡೆ ನಿರ್ಮಾಣ, ಬೀದಿಬದಿ ವ್ಯಾಪಾರಸ್ಥರ ಸಮಸ್ಯೆ, ಸೇರಿದಂತೆ ಪುರಸಭೆಯ ರೆವಿನ್ಯೂ ( ಖರ್ಚು ವೆಚ್ಚದ ) ದಾಖಲೆ ಸಹಿತ ಮಾಹಿತಿ ಕೇಳಿದರು. ಮಾಹಿತಿಗೆ ಸ್ಪಂದಿಸಿದ ಮುಖ್ಯಾಧಿಕಾರಿ ನೀರಿಗಾಗಿ ಅಂದಾಜು 75 ಲಕ್ಷದವರೆಗೆ ವೆಚ್ಚ ತಗಲುತ್ತದೆ ಎಂದು ಉತ್ತರಿಸಿದರು. ನೀರಿನ ಸಮಸ್ಯೆ ಬಗೆಹರಿಸಲು, ಶಾಸಕರ (ಕೆಕೆಆರ್‌ಡಿಬಿ) ಯೋಜನೆಯಲ್ಲಿ ಒಂದು ಕೋಟಿ ಅನುದಾನ ನೀಡುವ ಭರವಸೆ ನೀಡಿದರು. ಪಟ್ಟಣದ ಸಾರ್ವಜನಿಕರಿಗೆ ನಾಲ್ಕರಿಂದ ಐದು ದಿನಗಳಿಗೊಮ್ಮೆ ಸಮರ್ಪಕ ನೀರು ಪೂರೈಕೆ ಮಾಡಬೇಕು. ಮೀಟಿಂಗ ಇರುವಾಗ ದಾಖಲೆಗಳು ಇಲ್ಲದೆ ಅಡ್ಡಗೋಡೆ ಮೇಲೆ ದೀಪ ಇಟ್ಟಹಾಗೆ ಹೇಳುವುದು ಸರಿಯಲ್ಲ, ಸರಕಾರಿ ಆಸ್ತಿಗಳಿಗೆ ದಕ್ಕೆ ಯಾಗದಂತೆ ನೋಡಿಕೊಳ್ಳಬೇಕು. ಕುಡಿಯುವ ನೀರಿಗಾಗಿ ಸಮರ್ಪಕ ಕಾರ್ಯನಿರ್ವಹಿಸಲು ರಂಗನಾಥ ಅವರಿಗೆ ವಹಿಸಬೇಕು.

ಜವಾಬ್ದಾರಿಯುತವಾಗಿ ಕಾರ್ಯ ನಿರ್ವಹಿಸಿ ಇಲ್ಲವಾದರೆ ಸರಿಯಾದ ಕ್ರಮ ಜರುಗಿಸಲಾಗುವದು ಎಂದು ಅಧಿಕಾರಿಗಳಿಗೆ ತಾಕಿತ್ತು ಮಾಡಿದರು.

ಸಹಾಯಕ ಆಯುಕ್ತರಾದ ಬಸವಣ್ಣಪ್ಪ ಕಲಶೆಟ್ಟಿ, ಮಸ್ಕಿ ವೃತ್ತದ ಸಿಪಿಐ ರಾಮಣ್ಣ ಜಲಗೇರಿ, ಪುರಸಭೆ ಸಿಬ್ಬಂದಿಗಳು ಇದ್ದರು.




# ಅಪ್ಪಾಜಿಯವರ ಅಮೃತ ಮಹೋತ್ಸವಕ್ಕೆ ಸರ್ವರ ಸಹಕಾರ ಅಗತ್ಯ: ದಾಕ್ಷಾಯಣಿ ಅವ್ವಾಜಿ



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ 75ನೇ ಅಮೃತ ಮಹೋತ್ಸವಕ್ಕೆ ಸರ್ವರ ಸಹಕಾರ ಅಗತ್ಯ ಎಂದು ಕಲಬುರ್ಗಿಯ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿ ಹಾಗೂ ಶ್ರೀ ಶರಣ ಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷೆ ಡಾ.ದಾಕ್ಷಾಯಣಿ ಅವ್ವಾಜಿಯವರು ಹೇಳಿದರು.

ಇಲ್ಲಿನ ಹಳೇ ಭಾಲ್ಕಿಯ ಹಿರೇಮಠಕ್ಕೆ ಭೇಟಿ ನೀಡಿ, ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಆಶೀರ್ವಾದ ಪಡೆದು ಅವರು ಮಾತನಾಡಿದರು.

ಪಟ್ಟಣದ ಚನ್ನಬಸವಾಶ್ರಮದಲ್ಲಿ ಎ.20,21 ಮತ್ತು 22 ರಂದು ನಡೆಯುವ ವಿಶ್ವಗುರು ಬಸವಣ್ಣನವರ ಜಯಂತಿ, ವಚನ ಜಾತ್ರೆ–2026, ಡಾ.ಚನ್ನಬಸವ ಪಟ್ಟದ್ದೇವರ 27ನೆಯ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಅತ್ಯಂತ ವಿಜೃಂಭಣೆಯಿಂದ ಜರಗುತ್ತಿರುವುದು ಅತ್ಯಂತ ಖುಷಿಯ ಸಂಗತಿಯಾಗಿದೆ. ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಗಡಿ ಭಾಗದಲ್ಲಿ ಧಾರ್ಮಿಕ, ಆಧ್ಯಾತ್ಮೀಕ ,ಶೈಕ್ಷಣಿಕ ಕ್ರಾಂತಿಗೈದು ಕ–ಕ ಭಾಗದ ಬಡ ರೈತಾಪಿ ಕುಟುಂಬದ ಮಕ್ಕಳಿಗೆ ಸಂಸ್ಕಾರಭರಿತ ಗುಣಮಟ್ಟದ ಶಿಕ್ಷಣ ನೀಡಿ ಸಾವಿರಾರು ಮಕ್ಕಳಿಗೆ ಡಾಕ್ಟರ್, ಇಂಜಿನೀಯರ ಆಗುವ ಭಾಗ್ಯ ಕಲ್ಪಿಸಿದ್ದಾರೆ. ಡಾ.ಚನ್ನಬಸವ ಪಟ್ಟದ್ದೇವರ ಸಂಕಲ್ಪದಂತೆ ಬಸವ ತತ್ವದ ಪ್ರಚಾರ, ಪ್ರಸಾರ ನೆರೆ ರಾಜ್ಯಗಳಾದ ತೆಲಂಗಾಣ, ಆಂದ್ರ, ಮಹಾರಾಷ್ಟ್ರದಲ್ಲಿ ಮಾಡುತ್ತಿರುವ ಕಾರ್ಯ ಶ್ಲಾಘನೀಯವಾಗಿದೆ.

ಅದೇ ರೀತಿ ಪ್ರಸ್ತುತ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ನಾನಾ ವಿಧಾಯಕ ಕಾರ್ಯಗಳ ಮೂಲಕ ಭಾಲ್ಕಿ ಹಿರೇಮಠದ ಕೀರ್ತಿ ರಾಷ್ಟ್ರದ್ದಕ್ಕೂ ಪಸರಿಸುತ್ತಿರುವುದು ಹೆಮ್ಮೆಯ ಸಂಗತಿಯಾಗಿದೆ. ಹಿರೇಮಠದಿಂದ ನಡೆಯುವ ಎಲ್ಲ ಕಾರ್ಯಗಳಿಗೆ ಸಕಲ ಸದ್ಭಕ್ತರು ತನು, ಮನ, ಧನದ ಸೇವೆಗೆ ಸದಾ ಸಿದ್ಧರಾಗಿರಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು, ಶ್ರೀ ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ, ಸ್ತ್ರೀರೋಗತಜ್ಞೆ ಡಾ.ಉಮಾ ದೇಶಮುಖ ,ಸಮಿತಿ ಅಧ್ಯಕ್ಷ ಯೋಗೇಶ ಅಷ್ಟೂರೆ, ಪ್ರಮುಖರಾದ ಜೈರಾಜ ಪಾತ್ರೆ, ಅನೀಲ ಲೋಖಂಡೆ, ಅಶೋಕ ರಾಜೋಳೆ, ಮಹಾಂತೇಶ ದಶಮುಖೆ, ಟಿಂಕು ರಾಜಭವನ, ರಮೇಶ ಪಟ್ನೆ ಸೇರಿದಂತೆ ಅನೇಕರಿದ್ದರು.

# ಏ. 21 ಕ್ಕೆ ನ್ಯಾಷನಲ್ ಅಪ್ರೆಂಟಿಸ್ ಮೇಳ ಆಯೋಜನೆ

• **ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ**

ಡಿಜಿಇಟಿ ಕೌಶಲ್ಯ ಅಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ ಭಾರತ ಸರ್ಕಾರ ನವದೆಹಲಿ ವತಿಯಿಂದ ಪಿ.ಎಮ್. ನ್ಯಾಶನಲ್ ಅಪ್ರೆಂಟಿಸ್ (ಶಿಶಿಕ್ಷು) ಕಾಯ್ದೆ 1961ರ ಪ್ರಕಾರ ಇದೇ ಏಪ್ರಿಲ್ 21 ರಂದು ಬೆಳಿಗ್ಗೆ 10 ಗಂಟೆಗೆ ಆಳಂದ ಹಳೆಯ ತಹಶೀಲ್ದಾರರ ಕಚೇರಿ ಆವರಣದಲ್ಲಿರುವ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ತಾಲೂಕುಮಟ್ಟದ ಪಿ.ಎಮ್. ನ್ಯಾಷನಲ್ ಅಪ್ರೆಂಟಿಸ್ (ಶಿಶಿಕ್ಷು) ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದು ಆಳಂದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು ತಿಳಿಸಿದ್ದಾರೆ.

ಈ ಶಿಶಿಕ್ಷು ಮೇಳದಲ್ಲಿ ಟೊಯೋಟಾ ಕಿರ್ಲೋಸ್ಕರ್, ಹೋಂಡಾ ಮೋಟಾರ್ಸ್ ಲಿಮಿಟೆಡ್ ಮೈಸೂರು, ಟೊಯೋಟಾ ಇಂಜಿನ್ಸ್ ಲಿಮಿಟೆಡ್ ಬೆಂಗಳೂರು, ಎಂಆರ್‌ಎಫ್ ಟೈರ್ಸ್ ಹೈದ್ರಾಬಾದ್, ಗ್ರಾಮ್‌ವಿಕಾಸ್, ಡಾನ್‌ಬಾಸ್ಕೋ ಟೆಕ್ ಸೊಸೈಟಿ ಬೆಂಗಳೂರು, ಎಲಿಕಾ ಬೆಂಗಳೂರು, ಟಾಟಾ–ಪವರ್ ಸೋಲಾರ್ ಬೆಂಗಳೂರು, ಬಿ.ಇ.ಎಮ್.ಎಲ್., ಇನ್‌ಬ್ರೂ ಕಲಬುರಗಿ, ಸಾಯಿಲೈಫ್ ಸೈನ್ಸ್ ಕಲಬುರಗಿ, ಶ್ರೀ ಸಿಮೆಂಟ್ ಲಿಮಿಟೆಡ್, ಮಹೀಂದ್ರಾ ಮತ್ತು ಮಹೀಂದ್ರಾ, ತೋಷಿಬಾ, ಜೆಎಸ್‌ಡಬ್ಲ್ಯೂ ಸ್ಟೀಲ್ ಲಿಮಿಟೆಡ್, ಅಲ್ಟ್ರಾಟೆಕ್ ಸೇಡಂ, ಲೈಟಿಂಗ್ ಟೆಕ್ನಾಲಜಿ, ಸ್ನೈಡರ್ ಬೆಂಗಳೂರು ಸೇರಿದಂತೆ ಪ್ರತಿಷ್ಠಿತ ಕಂಪನಿಗಳು ಭಾಗವಹಿಸಲಿವೆ.

ಕಲಬುರಗಿ ಜಿಲ್ಲೆಯ ಹಾಗೂ ತಾಲೂಕು ವಿವಿಧ ವೃತ್ತಿಗಳಲ್ಲಿ, ಐಟಿಐ ಪಾಸಾದ ತರಬೇತಿದಾರರಿಗೆ ಅಪ್ರೆಂಟಿಸ್ ಮೇಳದಲ್ಲಿ ಭಾಗವಹಿಸಬಹುದಾಗಿದೆ. ಐಟಿಐ ಪಾಸಾದ ಅಭ್ಯರ್ಥಿಗಳು ತಮ್ಮ ಎಸ್‌ಎಸ್‌ಎಲ್‌ಸಿ ಮತ್ತು ಐಟಿಐ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿ, ಆಧಾರ್ ಕಾರ್ಡ್ ಮತ್ತು ಇತ್ತೀಚಿನ ಭಾವಚಿತ್ರ ಹಾಗೂ ಇನ್ನಿತರ ದಾಖಲಾತಿಗಳೊಂದಿಗೆ ಮೇಲ್ಕಂಡ ದಿನದಂದು ನಡೆಯುವ ಅಪ್ರೆಂಟಿಸ್ ಮೇಳದಲ್ಲಿ ಭಾಗವಹಿಸಬಹುದಾಗಿದೆ.

ಆಸಕ್ತಿಯುಳ್ಳ ಅರ್ಹ ಅಭ್ಯರ್ಥಿಗಳು ಆಳಂದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗೆ ಭೇಟಿ ನೀಡಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಸಿಬ್ಬಂದಿಗಳ ದೂರವಾಣಿ ಸಂಖ್ಯೆ 9945691953/ 8277379441/ 9686571818/ 9886253173/ 7019634886/ 9980243372 ಗಳಿಗೆ ಸಂಪರ್ಕಿಸಲು ಕೋರಲಾಗಿದೆ.

# ಸಂವಿಧಾನದಿಂದ ಸರ್ವರಿಗೂ ಸಮಪಾಲು ಸಮಬಾಳು: ಚವ್ಹಾಣ



> "ನ್ಯೂಭೀಮನಗರ ಬಡಾವಣೆಯ ಡಾ. ಬಿ.ಆರ್. ಅಂಬೇಡ್ಕರ್ ಭವನದ ಕಾಮಗಾರಿಯನ್ನು ಪೂರ್ಣಗೊಳಿಸಲು ಈಗಾಗಲೇ 50 ಲಕ್ಷ ರೂ. ಅನುದಾನ ಮಂಜೂರು ಮಾಡಲಾಗಿದೆ. ಅಧಿಕಾರಿಗಳು ಮತ್ತು ಗುತ್ತಿಗೆದಾರರು ಶೀಘ್ರವೇ ಕೆಲಸ ಮುಗಿಸಬೇಕು. ಇದನ್ನು ಒಂದು ಮಾದರಿ ಸಮುದಾಯ ಭವನವನ್ನಾಗಿ ರೂಪಿಸಲಾಗುವುದು.
>
> **ಪ್ರಭು ಬಿ. ಚವ್ಹಾಣ್, ಶಾಸಕರು,**

• **ಮಲ್ಲಮ್ಮ ನುಡಿ ವಾರ್ತೆ, ಕಮಲನಗರ**

ಭಾರತವು ವಿವಿಧ ಸಂಸ್ಕೃತಿಗಳ ಸಂಗಮವಾಗಿದ್ದು, ಸರ್ವರಿಗೂ ಸಮಬಾಳು ಮತ್ತು ಸಮಪಾಲು ನೀಡುವ ತತ್ವದಡಿ ಎಲ್ಲ ಸಮುದಾಯಗಳ ಏಳಿಗೆಗಾಗಿ ಡಾ.ಬಿ.ಆರ್.ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ಶಕ್ತಿಯನ್ನು ತುಂಬಿದ್ದಾರೆ, ಎಂದು ಶಾಸಕ ಪ್ರಭು ಚವಾಣ್ ತಿಳಿಸಿದರು.

ಪಟ್ಟಣದಲ್ಲಿ ಆಯೋಜಿಸಲಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತೋತ್ಸವ ಅಂಗವಾಗಿ ಹಮ್ಮಿಕೊಂಡಿದ್ದ ಮೆರವಣಿಗೆ ಮತ್ತು ವೇದಿಕೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡುತ್ತಿದ್ದರು. ಕಾರ್ಯಕ್ರಮದ ಆರಂಭದಲ್ಲಿ ಗೌತಮ ಬುದ್ಧನ ಪ್ರತಿಮೆಗೆ ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಲ್ಲಿಸಲಾಯಿತು.

ಅಂಬೇಡ್ಕರ್ ಅವರು ಕೇವಲ ಒಬ್ಬ ವ್ಯಕ್ತಿಯಾಗಿರದೆ, ಶೋಷಿತರ ಧ್ವನಿಯಾಗಿ ಮತ್ತು ಬದಲಾವಣೆಯ ಶಕ್ತಿಯಾಗಿ ಹೊರಹೊಮ್ಮಿದರು ಹಾಗೂ ಸಮಾನತೆಯನ್ನು ಸಾಧಿಸಲು ಶಿಕ್ಷಣವೇ ಅಂತಿಮ ಅಸ್ತ್ರವೆಂದು ಅಂಬೇಡ್ಕರ್ ನಂಬಿದ್ದರು. ಅವರ ವಿಚಾರಗಳು ಇಂದಿನ ಸಮಾಜ ನಿರ್ಮಾಣಕ್ಕೆ ದಾರಿದೀಪವಾಗಿವೆ ಎಂದು ಚವಾಣ್ ಒತ್ತಿ ಹೇಳಿದರು.

ಈ ವೈಭವದ ಮೆರವಣಿಗೆಯಲ್ಲಿ ಜಯಂತೋತ್ಸವ ಸಮಿತಿಯ ಪದಾಧಿಕಾರಿಗಳು, ಪ್ರಮುಖ ಗಣ್ಯರು, ಮಹಿಳೆಯರು, ಯುವಕರು ಹಾಗೂ ಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದರು.

# ರಾಗಿ ಖರೀದಿ ಕೇಂದ್ರದಲ್ಲಿ ಇಬ್ಬಂತಿ ನೀತಿ: ರೈತರಿಂದ ತರಾಟೆ

• **ಮಲ್ಲಮ್ಮ ನುಡಿ ವಾರ್ತೆ, ಪಿರಿಯಾಪಟ್ಟಣ**



ರಾಗಿ ಖರೀದಿ ಕೇಂದ್ರದಲ್ಲಿ ಇಬ್ಬಂತಿ ನೀತಿಯಿಂದ ಮಧ್ಯಾಹ್ನ 12 ಗಂಟೆ ವರೆವಿಗೂ ಖರೀದಿ ಚಟುವಟಿಕೆ ಆರಂಭಿಸದೆ ಇದ್ದ ಪರಿಣಾಮ ರೈತರು ತರಾಟೆ ತೆ–ಗೆದುಕೊಂಡ ಘಟನೆ ನಡೆಯಿತು.

ತಾಲೂಕಿನ ಹೋಬಳಿ ಕೇಂದ್ರವಾದ ಬೆಟ್ಟದಪುರ ಗ್ರಾಮದ ಎಪಿಎಂಸಿ ಆವರಣದಲ್ಲಿ ನಡೆಯುತ್ತಿರುವ ರಾಗಿ ಕರದಿ ಕೇಂದ್ರದಲ್ಲಿ ಗುರುವಾರದ ಹಿಂದಿನ ದಿನದಿಂದ ಬಂದ ರೈತರಿಗೆ 25 ರವರವಿಗೆ ಸರದಿ ಚೀಟಿಗಳನ್ನು ನೀಡಿ ರಾಗಿ ಪರಿಶೀಲನೆ ನೆಪದಲ್ಲಿ ವಿಳಂಬ ಮಾಡುತ್ತಿದ್ದರಿಂದ ಸುಡುವ ಬಿಸಿಲಿನಲ್ಲಿ

ನಿಲ್ಲಿಸಿರುವದರಿಂದ ಸಿಬ್ಬಂದಿಗಳ ವಿರುದ್ಧ ರೈತರು ಆಕ್ರೋಶ ವ್ಯಕ್ತಪಡಿಸಿದರು.

ಇಲ್ಲಿನ ರಾಗಿ ಖರೀದಿಗಾಗಿ ನೇಮಕ ಮಾಡಿರುವ ಚಂದ್ರ ಎಂಬ ಸಿಬ್ಬಂದಿ 25 ಮಂದಿಗೆ ಸರದಿ ಚೀಟಿ ನೀಡಿ ಉಳಿದವರಿಗೆ ನೀಡದೆ ಆವರಣದಲ್ಲಿ ರಾಗಿ ಮೂಟೆ ಖಾಲಿಯಾಗಿಲ್ಲ ಎಂದು ನೆಪ ಹೇಳಿ ಕಾಲಿ ಜಾಗ ಇದ್ದರೂ ಸಹ ಸತಾಯಿಸುತ್ತಿದ್ದರು.

ರಾಗಿ ಪರಿಶೀಲನೆ ಮಾಡುವ ನೇಮಕ ದಾರಾ ನಾದ ಮಧು ಎಂಬ ವ್ಯಕ್ತಿ ನಾಲ್ಕೈದು ಟ್ರ್ಯಾಕ್ಟರ್ ಗಳ ರೈತರನ್ನು ಮಾತ್ರ ಪರಿಶೀಲಿಸಿ ಉಳಿದವನ್ನು ಲೆಕ್ಕಿಸದೆ

ತನಗೆ ಸಂಬಂಧವೇ ಇಲ್ಲದಂತೆ ಕುಳಿತಿದ್ದನು.

ಇದರಿಂದ ಬೇಸತ್ತ ರೈತ ಮುಖಂಡ ನಾಗರಾಜ್ ಸೇರಿದಂತೆ ಹಲವಾರು ಒಂದು ಮೂಟೆಗೆ ನಾಲ್ಕು ಕೆಜಿ ಎಂತೆ ಕಳೆಯುತ್ತಿದ್ದು ಒಂದು ಟ್ರ್ಯಾಕ್ಟರ್ ಗೆ 2ರಿಂದ 2ವರೆ ಸಾವಿರ ರೂ ಗಳನ್ನು ರೈತರಿಂದ ಅಕ್ರಮವಾಗಿ ಪಡೆಯುತ್ತಿದ್ದು ಆದರೂ ಸಹ ಈ ರೀತಿ ಮಾಡುತ್ತಿರುವುದು ಸರಿಯಲ್ಲ ಎಂದು ಆರೋಪಿಸಿದರು.

ಈ ಬಗ್ಗೆ ಸಿಬ್ಬಂದಿಗಳ ಅನ್ಯಾಯವನ್ನು ಪ್ರಶ್ನಿಸುತ್ತಿದ್ದ ತಾಲೂಕು ಕೃಷಿ ಸಮಾಜದ ಪ್ರಧಾನ ಕಾರ್ಯದರ್ಶಿ ಎಚ್ ಡಿ ರಮೇಶ್ ಕೂಡಲೆ ಖರೀದಿ ಪ್ರಕ್ರಿಯೆ ಆರಂಭಿಸುವಂತೆ ಅಧಿಕಾರಿಗಳಿಗೆ ಒತ್ತಾಯಿಸುತ್ತಿದ್ದರು.


ಅಷ್ಟರಲ್ಲಿ ಮಾಜಿ ಶಾಸಕ ಕೆ ಮಹದೇವ್ ಮಧ್ಯೆ ಪ್ರವೇಶ ಮಾಡಿ ರೈತರಿಗೆ ಅನ್ಯಾಯವಾಗದಂತೆ

ಎಚ್ಚರ ವಹಿಸಬೇಕು ಮತ್ತು ನಡೆಯುತ್ತಿರುವ ಭ್ರಷ್ಟಾಚಾರವನ್ನು ನಿಲ್ಲಿಸಿ ಸುಲಿಗೆ ಕಡಿವಾಣ ಹಾಕಬೇಕೆಂದು ತಾಕಿತು ಮಾಡಿದರು.

ಅಲ್ಲದೆ ಖರೀದಿ ಅಧಿಕಾರಿಯಾದ ಮಂಜುನಾಥರವರಿಗೆ ಫೋನ್ ಕರೆ ಮಾಡಿ ಇಲ್ಲಿನ ಸಿಬ್ಬಂದಿಗಳಿಂದ ಆಗಿರುವ ಅವ್ಯವಸ್ಥೆಯ ಬಗ್ಗೆ ವಿವರಿಸಿದ ಅವರು ಇದರಿಂದ ರೈತರು ತಂದರಾಗಿ ಖರೀದಿಯಲ್ಲಿ ತೊಂದರೆಯಾಗುತ್ತಿದೆ

ಸರಿ ಪಡಿಸುವಂತೆ ಸೂಚನೆ ನೀಡಿದರು. ಈ ಸಂದರ್ಭದಲ್ಲಿ ಗಿರಿ ಗೌಡ. ಪ್ರಸನ್ನ. ನಾಗೇಶ್. ಮೈಲಾರಿ ಗೌಡ. ಗಗನ್. ಉದಯ್ ಸೇರಿದಂತೆ ಮತ್ತಿತರರಿದ್ದರು.

# ಸಮಾಜ ನಿರ್ಮಾಣಕ್ಕೆ ಯುವ ಜನಾಂಗ ಮುಂದಾಗಬೇಕು



• ಮಲ್ಲಮ್ಮ ನುಡಿ ವಾರ್ತೆ ಹುಮನಾಬಾದ

ಸಮಾಜದಲ್ಲಿಶೋಷಣೆಗೊಳಗಾದವರಿಗೆ ಸಹಾಯ ಮಾಡುವ ಗುಣ ಬೆಳೆಸಿಕೊಂಡು,ಸುಂದರ ಸಮಾಜ ನಿರ್ಮಾಣಕ್ಕೆ ಯುವ ಜನಾಂಗ ಮುಂದಾಗಬೇಕು ಎಂದು ಪಟ್ಟಣದಲ್ಲಿ ಭರತೀಯ ದಲಿತ ಫ್ಯಾಂಥರ ತಾಲ್ಲೂಕಾಧ್ಯಕ್ಷ ಗಣಪತಿ ಅಷ್ಟೂರೆ ರವರ ಹುಟ್ಟುಹಬ್ಬದ ಅಂಗವಾಗಿ ಕೇಕ್ ಕತ್ತರಿಸುವ ಮೂಲಕ ಮಾತನಾಡುತ್ತಾ ನುಡಿದರು. ಸಂಕುಚಿತ ವಿಚಾರಗಳಿಂದ ವ್ಯಕ್ತಿತ್ವ ಕ್ಷೀಣಿಸುತ್ತದೆ.

ವಿಶಾಲ ಮನೋಭಾವನೆಯಿಂದ ಮಾಡಿದ ಕಾರ್ಯಕ್ಕೆ ಸದಾ ಯಶಸ್ಸು ಹಾಗೂ ಜನಮನ್ನಣೆ ಸಿಗುತ್ತದೆ. ಸಮಾಜ ಸೇವೆ ಜೀವನದ ಅಷ್ಟೂರೆರವರ ಹಾಗೆ ಉಸಿರಾಗಬೇಕು ಎಂದರು. ಮನುಷ್ಯನ ಹುಟ್ಟು ಮತ್ತು ಸಾವು ಸಹಜ. ಆದರೆ, ಇವರೆಡರ ಮಧ್ಯೆ ಹೇಗೆ ಬದುಕಬೇಕೆಂಬುದೇ ಜೀವನವಾಗಿದ್ದು,

ಸ್ವಾರ್ಥಕ್ಕಾಗಿ ಬದುಕದೇ ಸಮಾಜ ಸೇವೆಗೆ ಮೀಸಲಾಗಿಡಬೇಕು. ಇದ-ರಿಂದ ಬದುಕು ಸಾರ್ಥಕತೆಯ ಜತೆಗೆ ಸಮಾಧಾನವು ಇರುತ್ತದೆ ಎಂದರು.ರಾಹುಲ್ ಪ್ರಸಾದ, ದಿಲಿಪಕುಮಾರ ಬೋಲಾ, ಸಿದ್ಧಾರ್ಥ ಜನವೀರ, ಆಕಾಶ ಮೇಟಿ, ದಶರಥ ದಾಂಡೇಕರ್, ಕೈಲಾಸ ಮೇಟಿ,

ವಿಠಲ ಶಿವನಾಯಕ, ಪರಮೇಶ್ವರ ಮೋರೆ, ಅನೀಲ ದೊಡ್ಡಿ, ಲೋಕೇಶ್ ಮೇತ್ರೆ, ಮನೋಜ ಜಾನವೀರ್, ಬಾಬಾ ಪಟೇಲ್, ಆಕಾಶ ಜಾನವೀರ, ಪಪ್ಪುರಾಜ್ ಚತುರೆ, ಸಂಜು ವಾಡೇಕರ್, ಬಸ್ಸು ಶಿಂಧೆ, ಯುವರಾಜ ಐಹೊಳೆ, ಯುರಾಜ ಘಂಟೆ, ರಾಹುಲ್ ಮೇಟಿ, ತುಕಾರಾಮ್

ಮಹಾಜನ್, ಸುಶೀಲ ಶರದೂಲ ಹಾಗೂ ಅನೇಕರಿದ್ದರು. ಕಾರ್ಯಕ್ರಮದ ಮೊದಲು ಬೈಕ್ ರ್ಯಾಲಿ ಅಂಬೇಡ್ಕರ್ ವೃತ್ತದಿಂದ ಪ್ರವಾಸಿಮಂದಿರದವರೆಗೆ ಜರುಗಿತು. ಹಾಗೂ ಸಾರ್ವಜನಿಕ ಆಸ್ಪತ್ರೆಯಲ್ಲಿ ಅಷ್ಟೂರೆ ರವರ ಅಭಿಮಾನಿಗಳು ರೋಗಿಗಳಿಗೆ ಹಣ್ಣು ಹಂಪಲ್ ವಿತರಿಸಿದರು.

# ಅರ್ಥಪೂರ್ಣ ಶ್ರೀ ಭಗೀರಥ ಜಯಂತಿ ಆಚರಣೆ: ಶಿವಾನಂದ



• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ರಾಯಚೂರಿನ ಜಿಲ್ಲಾಡಳಿತದಿಂದ ಏ.23ರಂದು ಅರ್ಥಪೂರ್ಣವಾಗಿ ಶ್ರೀ ಭಗೀರಥ ಜಯಂತಿಯನ್ನು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂಧಿರದಲ್ಲಿ ಆಚರಣೆ ಮಾಡಲಾಗುತ್ತಿದ್ದು, ಅಗತ್ಯ ಸಿದ್ಧತೆ ಕೈಗೊಳ್ಳಬೇಕೆಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಇತ್ತೀಚೆಗೆ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಭಗೀರಥ ಜಯಂತಿ ಆಚರಣೆ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಯಂತಿಯನ್ನು ಅರ್ಥಪೂರ್ಣವಾಗಿ ಹಾಗೂ ಶ್ರೀ ಭಗೀರಥ ಮಹರ್ಷಿಗಳ ಸಂದೇಶಗಳನ್ನು ಸಮಾಜಕ್ಕೆ ಸಾರಲು, ಅವರ ಜೀವನ ಮೌಲ್ಯಗಳನ್ನು ಸಮಾಜಕ್ಕೆ ನೀಡುವ ಸಲುವಾಗಿ ಜಯಂತಿ ಆಚರಣೆ ಮಾಡಲಾಗುತ್ತಿದೆ ಎಂದರು.ಶ್ರೀ ಭಗೀರಥ ಜಯಂತಿಯನ್ನು ಏಪ್ರಿಲ್ 23ರ ಬೆಳಿಗ್ಗೆ 9ಗಂಟೆಗೆ ನಗರದ ಲಕ್ಷಿ [illegible] ವೆಂಕಟೇಶ ದೇವಸ್ಥಾನದಿಂದ ಮೆರವಣಿಗೆ ಹಮ್ಮಿಕೊಳ್ಳಲಾಗಿದೆ. ನಂತರ ಬೆಳಿಗ್ಗೆ 11ಗಂಟೆಗೆ ನಗರದ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದೆ. ಸಮುದಾಯದ ಮುಖಂಡರ ಸಲಹೆಯಂತೆ ದಿವ್ಯ ಸಾನಿಧ್ಯ ಹಾಗೂ ವಿಶೇಷ ಉಪನ್ಯಾಸ ನೀಡಲು ಸಂಪನ್ಮೂಲ ವ್ಯಕ್ತಿಯನ್ನು ಆಹ್ವಾನಿಸಲಾಗುವುದು ಎಂದರು.

ಜಯಂತಿ ಆಚರಣೆ ಕೇವಲ ಒಂದು ಸಮುದಾಯಕ್ಕೆ ಸೀಮಿತವಲ್ಲ. ಎಲ್ಲಾ ಸಮುದಾಯದವರು ಸೇರಿ ಜಯಂತಿ ಆಚರಣೆ ಮಾಡಬೇಕು. ಜಯಂತಿ ಆಚರಣೆಯ ಉದ್ದೇಶ ಮಹನೀಯರ ಆದರ್ಶಗಳನ್ನು ಪಾಲನೆ ಮಾಡುವುದು ಆಗಿದೆ. ಮಹನೀಯರ ತತ್ವ ಆದರ್ಶಗಳನ್ನು ಗುಣಗಳನ್ನು ನಾವೆಲ್ಲರೂ ಅಳವಡಿಸಿಕೊಳ್ಳಬೇಕು ಎಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ–ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಉತ್ತರಾದೇವಿ, ಸಮಾಜದ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು ಹಾಗೂ ಮುಖಂಡರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಜಿಲ್ಲಾಡಳಿತದಿಂದ ಬಸವ ಜಯಂತಿ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗಳ ಸಂಯುಕ್ತಾಶ್ರಯದಲ್ಲಿ ಬಸವ ಜಯಂತಿ ಕಾರ್ಯಕ್ರಮವು ನಗರದ ಪಂಡಿತ ಸಿದ್ಧರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಏಪ್ರಿಲ್ 20ರ ಬೆಳಿಗ್ಗೆ 11ಕ್ಕೆ ಹಮ್ಮಿಕೊಳ್ಳಲಾಗಿದೆ. ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಉದ್ಘಾಟನೆ ನೆರವೇರಿಸುವರು.ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಅವರು ಘನ ಉಪಸ್ಥಿತಿ ವಹಿಸುವರು. ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ.ಎಸ್.ಶಿವರಾಜ ಪಾಟೀಲ್ ಅವರು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರ್ವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ಹಟ್ಟಿ ಚಿನ್ನದ ಗಣಿ ನಿಯಮಿತದ ಅಧ್ಯಕ್ಷರು ಆಗಿರುವ ಬೀಳಗಿ ಕ್ಷೇತ್ರದ ಶಾಸಕರಾದ ಜೆ.ಟಿ.ಪಾಟೀಲ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಕೊಪ್ಪಳ ಲೋಕಸಭಾ ಸಂಸದರಾದ ಕೆ.ರಾಜಶೇಖರ ಹಿಟ್ನಾಳ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಲಿಂಗಸಗೂರು ಕ್ಷೇತ್ರದ ಶಾಸಕರಾದ ಮಾನಪ್ಪ ಡಿ.ವಜ್ಜಲ್, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ.ನಾಯಕ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಷಿ, ವಿಧಾನ ಪರಿಷತ್ ಶಾಸಕರಾದ ಚಂದ್ರಶೇಖರ್ ಬಿ.ಪಾಟೀಲ್, ವಿಧಾನ ಪರಿಷತ್ ಶಾಸಕರಾದ ಶರಣಗೌಡ ಪಾಟೀಲ ಬಯ್ಯಾಪುರ, ಎ.ವಸಂತಕುಮಾರ, ಬಸನಗೌಡ ಬಾದರ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಆರ್ಥಿಕ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಿತೇಶಕುಮಾರ ಸಿಂಗ್, ಕಲಬುರಗಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಹೀರಾ ನಸೀಮ್, ಬಾಗಿಯಾಗಲಿದ್ದಾರೆ.

# ಬಸವ ಜಯಂತಿ ಉತ್ಸವ ಪ್ರಚಾರದ ವಾಹನಕ್ಕೆ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ, ಬೀದರ್

ಸಾಂಸ್ಕೃತಿಕ ನಾಯಕ ಬಸವಣ್ಣನವರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸ ಬೇಕಾಗಿರುವುದು ನಮ್ಮೆಲ್ಲರ ಆದ್ಯ ಕರ್ತವ್ಯ.ತತ್ವ ಎಷ್ಟೇ ದೊಡ್ಡಾಗಿದ್ದರೂ ಅನುಯಾಯಿಗಳ ಕೊರತೆಯಾಗ ಬಾರದೆಂಬ ಹಿತದೃಷ್ಟಿಯಿಂದ ಪ್ರಚಾರ ಕೈಗೊಳ್ಳಲಾಗುತ್ತಿದೆ

ಎಂದು ಬಸವ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷರಾದ ಡಾ.ರಜನೀಶ ವಾಲಿ ನುಡಿದರು.

ನಗರದ ಉದಗಿರ ರಸ್ತೆಯಲ್ಲಿರುವ ಬಸವ ಜಯಂತಿ ಉತ್ಸವ ಸಮಿತಿಯ ಕಛೇರಿಯಿಂದ ಅಲಂಕೃತ ಎರಡು ಪ್ರಚಾರ ವಾಹನಗಳಿಗೆ ಚಾಲನೆ ನೀಡಿ ಮಾತನಾಡಿದ ಅವರು, ಬಸವ ಜಯಂತಿ ಉತ್ಸವ ಪ್ರಚಾರ ವಾಹನಗಳು ನಗರದ ಪ್ರತಿ ಬಡಾವಣೆಯಲ್ಲಿ ಪ್ರಸಾರ/ ಪ್ರಚಾರ ಮಾಡಲು ಸಿದ್ಧಗೊಂಡಿದ್ದು ಅವುಗಳಿಗೆ ಚಾಲನೆ ನೀಡಲಾಗುತ್ತಿದೆ ಎಂದರು.

ಸಮಿತಿಯ ಕೋಶಾಧ್ಯಕ್ಷರಾದ ಸಿದ್ರಾಮಯ್ಯ ಸ್ವಾಮಿ ಮಾತನಾಡಿ, ನಗರದ ಪ್ರತಿಯೊಂದು ಬಡಾವಣೆಗೆ ಈ ವಾಹನ ಬೇಟಿ ನೀಡಿ ಅಲ್ಲಿಯ ಪ್ರಮುಖರನ್ನು ಸಂಪರ್ಕಿಸಿ ಕರ ಪತ್ರ ನೀಡಿ ಬಸವ ಜಯಂತಿ ಕಾರ್ಯಕ್ರಮಕ್ಕೆ ಬರಲು

ಆಮಂತ್ರಿಸುವ ಪರಂಪರೆಗೆ ನಾಂದಿ ಹಾಡಲಿದೆ ಎಂದರು. ಸಮಿತಿಯ ಪ್ರಧಾನ ಕಾರ್ಯದರ್ಶಿ ಶಶಿಧರ ಹೊಸಳ್ಳಿ ಮಾತನಾಡಿ, ಬಸವಣ್ಣ ಸರ್ವ ಜನಾಂಗದ ಮಂತ್ರ ಪುರುಷ. ಮೂರು ದಿವಸಗಳ ವಿವಿಧ ಕಾರ್ಯಕ್ರಮದ

ಪ್ರಚಾರ ಮಾಡಿ ಎಲ್ಲ ಸಮಾಜ ಬಾಂಧವರನ್ನು ಕೈ ಮಾಡಿ ಕರೆಯುವುದೇ ಮುಖ್ಯ ಉದ್ದೇಶ ಎಂದರು.

ಪ್ರಚಾರ ವಾಹನ ಚಾಲನೆ ಸಮಾರಂಭದಲ್ಲಿ ಉತ್ಸವ ಸಮಿತಿಯ ಇತರ ಪ್ರಮುಖರಾದ ವಿಕ್ರಮ ಮುದಾಳೆ, ರಾಜೇಂದ್ರಕುಮಾರ ಗಂದಗೆ, ಸುರೇಶ ಚನ್ನಶೆಟ್ಟಿ, ಧನರಾಜ ಹಂಗರಗಿ, ಅಶೋಕ ಕರಂಜಿ, ವೀರುಪಾಕ್ಷ ಗಾದಗಿ, ಆದೀಶ ವಾಲಿ, ಬಾಬುರಾವ ದಾನಿ, ಮಾಣಿಕೇಶ ಪಾಟೀಲ ಹಾಗೂ ಇತರರು ಹಾಜರಿದ್ದರು.

# ಪರೀಕ್ಷೆ ಸುಸೂತ್ರವಾಗಿ ನಡೆಯುವಂತೆ ನೋಡಿಕೊಳ್ಳಲು ಸೂಚನೆ

• ಮಲ್ಲಮ್ಮ ನುಡಿ ವಾರ್ತೆ, ಯಾದಗಿರಿ

ಇಂಜಿನೀಯರಿಂಗ್ ಹಾಗೂ ಬಿಎಸ್ಸಿ ಅಗ್ರಿ ಪ್ರವೇಶಕ್ಕಾಗಿ ಸಾಮಾನ್ಯ ಪ್ರವೇಶ ಪರೀಕ್ಷೆಗಳು ಇದೇ ದಿನಾಂಕ: 23.04.2026 ಮತ್ತು 24.04.2026 ರಂದು ರಾಜ್ಯದಾದ್ಯಂತ ನಡೆಯಲಿದ್ದು, ಜಿಲ್ಲೆಯಲ್ಲಿಯೂ ಈ ಪರೀಕ್ಷೆ ಗಳು ನಕಲುಮುಕ್ತ ಹಾಗೂ ವ್ಯವಸ್ಥಿತವಾಗಿ ನಡೆಯುವಂತೆ ನೋಡಿಕೊಳ್ಳಲು ಅಪರ ಜಿಲ್ಲಾಧಿಕಾರಿ ಶ್ರೀ ರಮೇಶ್ ಕೋಲಾರ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ಸಾಮಾನ್ಯ ಪ್ರವೇಶ ಪರೀಕ್ಷೆ ಗಳು ಸುಸೂತ್ರವಾಗಿ ನಡೆಸುವ ಕುರಿತಂತೆ ನಡೆಸಿದ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಈ ಪರೀಕ್ಷೆಯು ಬೆಳಿಗ್ಗೆ ಮತ್ತು ಮದ್ಯಾಹ್ನ 02 ಅವಧಿಗಳಲ್ಲಿ ನಡೆಯಲಿವೆ. ಯಾದಗಿರಿ ಜಿಲ್ಲೆಗೆ ಸಂಬಂಧಿಸಿದಂತೆ ಸಾಮಾನ್ಯ ಪ್ರವೇಶ ಪರೀಕ್ಷೆಗೆ 09 ಪರೀಕ್ಷಾ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ಮಹಾತ್ಮಗಾಂಧಿ ಪ ಪೂ ಕಾಲೇಜು ಯಾದಗಿರಿ –, ಸರಕಾರಿ ಪ ಪೂ ಕಾಲೇಜು (ಪ್ರೌಢ ಶಾಲೆ ವಿಭಾಗ) ಯಾದಗಿರಿ, ಸಭಾ ಪ ಪೂ ಕಾಲೇಜು, ಎಲ್. ಕೆ ಇ .ಟಿ. ಪ .ಪೂ ಕಾಲೇಜು ಯಾದಗಿರಿ,ಜವಹಾರ ಪ .ಪೂ. ಕಾಲೇಜು ಯಾದಗಿರಿ, ಸ ಪ ಪೂ ಕಾಲೇಜು, ಬಾಲಕೀಯರ ಸ ಪ ಪೂ ಕಾಲೇಜು ಯಾದಗಿರಿ ಸರಕಾರಿ ಪ್ರಥಮ ದರ್ಜೆ ಕಾಲೇಜು (ಬಾಲಕೀಯರ) ಯಾದಗಿರಿ ,

ಆರ್ ವಿ. ಪ .ಪೂ. ಕಾಲೇಜು ಯಾದಗಿರಿ – ಹೀಗೆ ಈ 09 ಪರೀಕ್ಷೆ ಕೇಂದ್ರಗಳಲ್ಲಿ ಒಟ್ಟು 4049 ಅಭ್ಯರ್ಥಿಗಳು ಈ ಪರೀಕ್ಷೆಗೆ ಹಾಜರಾಗಲಿದ್ದಾರೆ.



ಈ ಪರೀಕ್ಷಾ ಕೇಂದ್ರಗಳ ಉಪ ಮುಖ್ಯಅಧೀಕ್ಷಕರು ಮತ್ತು ಪ್ರಶ್ನೆ ಪತ್ರಿಕೆ ಪಾಲಕರು ತಮ್ಮ ಕೇಂದ್ರದಲ್ಲಿ ಪೂರ್ವ ಸಿದ್ಧತೆಗಳನ್ನು ಕೈಗೊಂಡು (ಆಸನ ವ್ಯವಸ್ಥೆ, ನೀರು, ಇತ್ಯಾದಿ) ವ್ಯವಸ್ಥೆ ಮಾಡುವಂತೆ ಅವರು ಸೂಚಿಸಿದರು. ಪರೀಕ್ಷೆ ಕೇಂದ್ರದ ಸುತ್ತಲ್ಲೂ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಲು ಮಾನ್ಯ ಜಿಲ್ಲಾಧಿಕಾರಿಗಳನ್ನು ಕೋರಲಾಗಿದೆ ಎಂದು ಅವರು ತಿಳಿಸಿದರು.

ಕೊಠಡಿ ಮೇಲ್ವಿಚಾರಕರ ತರಬೇತಿಯನ್ನು ಆಯಾ ಕೇಂದ್ರದಲ್ಲಿ ದಿನಾಂಕ: 22.04.2026 ರೊಳಗೆ ಕೈಗೊಳ್ಳುವಂತೆ ಕೇಂದ್ರದ ಉಪಮುಖ್ಯ ಅಧೀಕ್ಷಕರಿಗೆ ತಿಳಿಸಿದ ಅವರು ಗೌಪ್ಯ ಸಾಮಗ್ರಿಗಳನ್ನು ನೀಡುವಾಗ ಮತ್ತು ಪಡೆಯುವಾಗ ಪರೀಕ್ಷೆ ಕೇಂದ್ರದ ಉಪ ಮುಖ್ಯ ಅದೀಕ್ಷಕರು ಜಾಗ್ರತೆಯಿಂದ ಕಾರ್ಯ ನಿರ್ವಹಿಸಲು ಸೂಚಿಸಿದರು.

ಮಾನ್ಯ ಜಿಲ್ಲಾಧಿಕಾರಿಗಳಿಂದ ನೇಮಿಸಲ್ಪಟ್ಟ ಗ್ರೂಪ್ ಬೆಲ್ ಟೈಮಿಂಗ್ಸನ್ ಮಾಹಿತಿಗಳನ್ನು ಕೊಠಡಿ ಮೇಲ್ವಿಚಾರಕರಿಗೆ ತರಬೇತಿಯಲ್ಲಿ ವಿಶೇಷವಾಗಿ ತಿಳಿಸಿಕೊಡಬೇಕು. ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರದಲ್ಲಿ ಯಾವುದೇ ತರಹದ ಕೈ ಗಡಿಯಾರಗಳನ್ನು ಧರಿಸದಂತೆ ಮತ್ತು ಯಾವುದೇ ಕ್ಯಾಲ್ಕುಲೇಟರ್‌ಗಳನ್ನು ಉಪಯೋಗಿಸುವುದನ್ನು ನಿಷೇದಿಸಿದೆ ಎಂದು ಅವರು ತಿಳಿಸಿದರು.

ಮಾಹಿತಿ ಕೈಪಿಡಿಯಲ್ಲಿನ ಅಂಶಗಳಂತೆ, ಪರೀಕ್ಷೆಗಳನ್ನು ಸುಸೂತ್ರವಾಗಿ ಕೈಗೊಳ್ಳಬೇಕು. ಪ್ರತಿ ಕೊಣೆಯಲ್ಲಿ 24 ವಿದ್ಯಾರ್ಥಿಗಳಿಗೆ ನೇಮಿಸಿಕೊಳ್ಳಬೇಕು.ಪರೀಕ್ಷೆ ನಡೆಯುವ ವೇಳೆಯಲ್ಲಿ ಯಾವುದೇ ಅವ್ಯವಹಾರಗಳು ನಡೆಯದಂತೆ ಸೂಕ್ಷ್ಮವಾಗಿ ತಡೆಗಟ್ಟುವುದು ,ಕೊಠಡಿ ಮೇಲ್ವಿಚಾರಕ ಜವಾಬ್ದಾರಿಯಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಯ ಪ್ರವೇಶ ಪತ್ರ ಮತ್ತು ಗುರುತಿನ ಚೀಟಿಯನ್ನು ಪರಿಶೀಲಿಸಿ ಹಾಜರಾಗಿರುವ ಅಭ್ಯರ್ಥಿಯನ್ನು ತಾಳೆ ಮಾಡಿಕೊಳ್ಳಲು ಕೊಠಡಿ ಮೇಲ್ವಿಚಾರಕರಿಗೆ ನಿರ್ದೇಶನ ನೀಡುವಂತೆ ಅವರು ಸೂಚಿಸಿದರು.

. ಅಭ್ಯರ್ಥಿಗಳು ನಿಗದಿತ ಆಸನದಲ್ಲಿಯೇ ಕುಳಿತು ಪರೀಕ್ಷೆ ಬರೆಯುತ್ತಿರುವ ಬಗ್ಗೆ ತಾಳೆ ಮಾಡಿಕೊಳ್ಳಲು ಕೊಠಡಿ ಮೇಲ್ವಿಚಾರಕರಿಗೆ ನಿರ್ದೇಶನ ನೀಡಬೇಕು. ಓಎಂಆರ್ ಉತ್ತರ ಪತ್ರಿಕೆಗಳನ್ನು ಮತ್ತು ಪ್ರಶ್ನೆ ಪತ್ರಿಕೆಗಳನ್ನು ನಿಗದಿತ ರೀತಿಯಲ್ಲಿ ಅಭ್ಯರ್ಥಿಗಳಿಗೆ ವಿತರಿಸುವುದು ಹಾಗೂ ಕೋಠಡಿ ಮೇಲ್ವಿಚಾರಕರು ಓಎಂಆರ್ ಉತ್ತರ ಪತ್ರಿಕೆಯಲ್ಲಿ ನಿಗದಿತ ಜಾಗದಲ್ಲಿ ತಪ್ಪದೆ ಸಹಿ ಹಾಕಲು ಕೊಠಡಿ ಮೇಲ್ವಿಚಾರಕರಿಗೆ ನಿರ್ದೇಶನ ನೀಡಬೇಕು, ಸದರಿ ಪರೀಕ್ಷೆಗೆ ಗೈರುಹಾಜರಾಗುವ ವಿದ್ಯಾರ್ಥಿಗಳ ವಿವರವನ್ನು ಆನ್ – ದಾಖಲಿಸಲು ಕ್ರಮಕೈಗೊಳ್ಳಬೇಕು ಎಂದು ಸೂಚಿಸಿದರು.

ಒಂದು ಬಾರಿ ಓಎಂಆರ್ ಉತ್ತರ ಪತ್ರಿಕೆಯನ್ನು ಅಭ್ಯರ್ಥಿಗಳಿಗೆ ವಿತರಿಸಿದ ನಂತರ ಹಿಂಪಡೆಯಬಾರದು ಎಂದು ಹಲವು ಬಾರಿ ಸೂಚಿಸಿಸಲಾಗಿದೆ. ಆದಾಗ್ಯೂ ಕೆಲವು ಬಾರಿ ಕೊಠಡಿ ಮೇಲ್ವಿಚಾರಕರು ವಿವಿಧ ಕಾರಣಗಳಿಂದಾಗಿ ಸಂಪೂರ್ಣವಾಗಿ ಮಾಹಿತಿಯನ್ನು ಪಡೆದುಕೊಳ್ಳದೆ ಉತ್ತರ ಪ್ರತಿಕೆಗಳನ್ನು ಬದಲಾಯಿಸಿ ಕೊಟ್ಟಿರುವುದು ಕಛೇರಿಗೂ ಮತ್ತು ಪ್ರಾಧಿಕಾರದ ಗಮನಕ್ಕೆ ಬಂದಿರುತ್ತದೆ. ಈ ತಪ್ಪನ್ನು ಮರುಕಳಿಸದಂತೆ ಎಚ್ಚರ ವಹಿಸಬೇಕು. ಯಾವುದೇ ತರಹದ ಎಲೆಕ್ಟ್ರಾನಿಕ್ ವಸ್ತುಗಳು ,ಮೊಬೈಲ್, ಪೆನ್ ಡ್ರೈವ್‌ಗಳು, ಇಯರ್ ಟೂಥ್ ಬ್ಲೂ ಫೋನಗಳು,

ಮೈಕ್ರೋಫೋನಗಳೂ, ಕೈಗಡಿಯಾರಗಳನ್ನು ಪರೀಕ್ಷಾಕೊಠಡಿಯೊಳಗೆ ಅನುಮತಿಸಲಾಗುವುದಿಲ್ಲ. ಈ ಪರೀಕ್ಷೆಯ ರಹಸ್ಯಬಂಡಲಗಳನ್ನು ಕೇಂದ್ರಗಳಿಗೆ ಸಾಗಿಸಲು ತ್ರಿ ಸದಸ್ಯ ಸಮಿತಿಯನ್ನು ರಚಿಸಲಾಗಿದ್ದು ಸದರಿ ಅಧಿಕಾರಿಗಳು ತಮಗೆ ವಹಿಸಿದ ಪರೀಕ್ಷಾ ಕೇಂದ್ರಗಳಿಗೆ ನಿಗದಿತ ಅವಧಿಯೊಳಗೆ ತಲುಪಿಸುವ ಮತ್ತು ಹಿಂಪಡೆಯುವ ಕ್ರಮದ ಜವಾಬ್ದಾರರಾಗಿರುತ್ತಾರೆ. ಎಂದು ತಿಳಿಸಿದರು .

ಪರೀಕ್ಷೆ ಕೇಂದ್ರದ ಹೊರಗೆ ಬಂದೊಬಸ್ತಗಾಗಿ ಪೋಲಿಸ್ ಸಿಬ್ಬಂದಿಗಳನ್ನು ಹತ್ತಿರದ ಠಾಣೆಗಳಿಂದ ಕೇಂದ್ರದ ಉಪ ಮುಖ್ಯ ಅಧೀಕ್ಷಕರನ್ನು ಪಡೆದು ಕೊಳ್ಳಬೇಕು. ಉಳಿದಂತೆ ಮಾನ್ಯ ಅಧ್ಯಕ್ಷರು ಸೂಚಿಸುವ ಕಾರ್ಯಗಳನ್ನು ಜಾರಿಗೊಳಿಸಬೇಕು ಎಂದು ಅವರು ಸೂಚಿಸಿದರು. ಸಭೆಯಲ್ಲಿ ಶಿಕ್ಷಣ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಲ್ಯಾಣ ಚಾಲುಕ್ಯರ ಕಾಲದ ಐತಿಹಾಸಿಕ ಎಲೇಶ್ವರ ದೇವಾಲಯ ಶಿಥಿಲಾ



• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್

ಗುರುಮಠಕಲ್ ತಾಲೂಕಿನ ಎಲ್ಹೇರಿ ಗ್ರಾಮದಲ್ಲಿ ಕಲ್ಯಾಣ ಚಾಲುಕ್ಯರ ಕಾಲದಲ್ಲಿ ನಿರ್ಮಾಣ ಗೊಂಡಿರುವ ದೇವಾಲಯಗಳು ಶಿಥಿಲಾವಸ್ಥೆಯಲ್ಲಿ ಕಾಣ ಸಿಗುತ್ತವೆ.

ಸುತ್ತಲೂ ಹಬ್ಬಿರುವ ಮುಳ್ಳಿನ ಪೊದೆಗಳು, ಚೆಲ್ಲಾಪಿಲ್ಲಿಯಾಗಿ ಹರಡಿಕೊಂಡು ಬಿದ್ದ ಕಲ್ಲಿನ ರಾಶಿ, ಆಕರ್ಷಕವಾದ ಕೆತ್ತನೆಗಳು, ಹೊಳ ಹೊಕ್ಕರೆ ಇತಿಹಾಸ ಹಾಗೂ ಶಿಲ್ಪಕಾರರ ಕಲಾ ಸಂಪತ್ತನ್ನು ವಿವರಿಸಲು ಕಾತುರದಲ್ಲಿರುವಂತೆ ಭಾಸವಾಗುವ ಕಲಾಕೃತಿಗಳು...

ಕಲ್ಯಾಣದ ಚಾಲುಕ್ಯರ ಸಮಯದಲ್ಲಿ ಅಥವಾ ಅದಕ್ಕೂ ಪೂರ್ವದಲ್ಲಿ ನಿರ್ಮಿಸಲ್ಪಟ್ಟ ಯಲ್ಲೇರಿ ಗ್ರಾಮದ ಯಲ್ಲೇಶ್ವರ ದೇವಸ್ಥಾನವು ಶಿಲ್ಪಕಲೆಯ ಮೇರು ಕೃತಿಯಾಗಿದ್ದು ಪ್ರಸ್ತುತ ಅವಸಾನದ ಹಂತಕ್ಕೆ ಬಂದು ತಲುಪಿದೆ.

ಅದ್ಭುತ ವಾಸ್ತುಕಲೆ ಕಲ್ಲಿನ ಗೋಡೆಯಲ್ಲಿ ನಿರ್ಮಾಣದ ಶಿಲೆಗಳು, ಮಾಹಿತಿ ಪ್ರಕಾರ ದೇಗುಲ ನಿರ್ಮಾಣದ ಸರಿ ಸುಮಾರು ಹನ್ನೊಂದು ಹನ್ನೆರಡನೇ ಶತಮಾನವಿರಬಹುದು ಎಂದು ಅಂದಾಜಿಸಲಾಗುತ್ತದೆ. ಇಂದಿಗೂ ಈ ದೇವಸ್ಥಾನದ ಕೆತ್ತನೆಗಳು ಮನಸ್ಸಿಗೆ ಮುದ ನೀಡುತ್ತಿರುವುದು ಕಲಾಕಾರನ ಕೌಶಲಕ್ಕೆ ಹಿಡಿದ ಕನ್ನಡಿಯಾಗಿದೆ.

ಸುಮಾರು ಆರು ಅಡಿಗಳಷ್ಟು ಎತ್ತರದ ವರೆಗೆ ನುಣುಪಾದ ಬಳಪದ ಕಲ್ಲಿನಿಂದ ಕಟ್ಟಿರುವುದು ಆಕರ್ಷಣೆ ಯನ್ನು ಹೆಚ್ಚಿಸಿದೆ. ಬಳಪದ ಕಲ್ಲಿನಿಂದ ಮೇಲಿನ ಭಾಗವು ಉತ್ಕೃಷ್ಟ ಮಟ್ಟದ ಕಪ್ಪಿಶಿಲೆಯಿಂದ ನಿರ್ಮಿಸಲಾಗಿದ್ದು, ಗೋಡೆಗಳಲ್ಲಿ ಸೂಕ್ಷ್ಮ ಕೆತ್ತನೆಗಳ ಮೂಲಕ ಆಕರ್ಷಿಸುತ್ತವೆ ಈ ದೇವಸ್ಥಾನ ಸ್ವಲ್ಪ ಮಟ್ಟಿಗೆ ಮಹಾ ಮಂಡಲೇಶ್ವರನಿಂದ ಚಿತಾಪುರ ತಾಲೂಕಿನ ಕಾಳಗಿಯ ಸೂರ್ಯನಾರಾಯಣ ದೇವಸ್ಥಾನ ಹೋಲುತ್ತದೆ.


ದೇವಸ್ಥಾನದಲ್ಲಿನ ಕಲ್ಲಿನ ಗೋಡೆಯ ಮೇಲೆ ನಾಟ್ಯ ಭಂಗಿಯ ಶಿಲಾ ಬಾಲಕಿಯರು, ಸಾಲಾಗಿ ಸಾಗುವಂತೆ ಬಾಸವಾಗುವ ಗಜಪಡೆ, ಸೂಕ್ಷ್ಮವಾದ ಕೆತ್ತನೆಯಿಂದ ಹೂವು, ಎಲೆ, ಬಳ್ಳಿಯ ನಿರ್ಮಿಸಿದ್ದು ಶಿಲ್ಪಕಲೆ ಯನ್ನು ಅಭ್ಯಸಿಸುವವರಿಗೆ ಉತ್ತಮ ಸ್ಥಳವಾಗಿದೆ.

ಕ್ರಿ.ಶ 1166 ಕಾಲದಲ್ಲಿ ಇದ್ದ ಮಹಾನ್ ಶಿವ ಭಕ್ತ ಕೇತಯ್ಯನವರಿಂದ ಪೂಜಿಸಲ್ಪಟ್ಟ ದೇವಾಲಯದ ಶಿವಲಿಂಗ ಯಲ್ಲೇಶ್ವರನೆಂದು ಹೇಳಲಾಗುತ್ತದೆ. ಢಾಂಬಿಕ ಭಕ್ತಿ, ತೋರಿಕೆಯ ಆಚಾರವನ್ನು ಕಟುಶಬ್ದಗಳಿಂದ ಟೀಕಿಸುತ್ತಿದ್ದ ಕೇತಯ್ಯನ ವರು 'ಏಲೇಶ್ವರ' ಎಂಬುದನ್ನು ತಮ್ಮ ವಚನಗಳ ಅಂಕಿತವಾಗಿಸಿದ್ದರು.


ಮಡದಿ ಸಾಯಿದೇವಮ್ಮ, ಮಕ್ಕಳಾದ ಶಿವಣ್ಣ ಮತ್ತು ಶಿವಕ್ಕ ರೊಂದಿಗೆ ಬೇಸಾಯವನ್ನೇ ಕಾಯಕ ಮಾಡಿಕೊಂಡು ದೇವರ ಇರುವಿಕೆಯನ್ನು ವ್ಯಕ್ತಿಯ ಅಂತರಂಗದ ಒಳ್ಳೆಯ ಮನಸ್ಸು ಮತ್ತು ಬಹಿರಂಗದ ಕ್ರಿಯೆಗಳಲ್ಲಿ ಕಾಣುತ್ತಿದ್ದರು, ಹೆಚ್ಚಾಗಿ ಸ್ತ್ರೀಯರಿಗೆ ಸಿಗಬೇಕಾದ ಸ್ಥಾನಮಾನಗಳಿಗಾಗಿ ಸೂಕ್ಷವಾಗಿ ವಚನಗಳ ಮೂಲಕ ನೇಮ,ವ್ರತ,ಆಚರಣೆ ಗಳ ಕುರಿತು, ಸುಮಾರು 200 ಕ್ಕೂ ಹೆಚ್ಚು ವಚನ ಬರೆದಿದ್ದಾರೆ, ಈಗಾ ಕೆಲವು ಸುಮಾರು 74 ವಚನಗಳು ಮಾತ್ರ ಸಿಕ್ಕಿವೆ, ಅಂತಹ ಮಹಾನ ಶಿವ ಭಕ್ತ ವಚನಕಾರರಿಂದ ಪ್ರತಿನಿತ್ಯ ಪೂಜೆ ಮಾಡುತ್ತಿದ್ದ ದೇವಾಲಯ ಇಂದು ಈ ಸ್ಥಿತಿಗೆ ತಲುಪಿದೆ.

ನಿಧಿಯಾಸೆಗೆ ಬಲಿಯಾದ ಬೆಲೆಕಟ್ಟಲಾಗದ ಶಿಲ್ಪಕಲೆ ಪುರಾತನವಾದ ಈ ದೇಗುಲದಲ್ಲಿ ನಿಧಿ ಸಿಗುತ್ತದೆ ಎಂಬ ದುರಾಸೆಯಿಂದ ಎಲ್ಲೆಂದರಲ್ಲಿ ಅಗೆದಿದ್ದು, ದೇವಾಲಯ ಸಂಪೂರ್ಣ ಶಿಥಿಲಗೊಂಡಿದೆ. ಸಂಬಂಧ ಪಟ್ಟ ಯಾವುದೇ ಇಲಾಖೆ, ಅಧಿಕಾರಿ, ಚುನಾಯಿತ ಜನ ಪ್ರತಿನಿಧಿಗಳು ಮತ್ತು ಸ್ಥಳೀಯ ಸಾರ್ವಜನಿಕರಿಂದಲೂ ನಿರ್ಲಕ್ಷ್ಯಕ್ಕೊಳಗಾ ಅಭಿಪ್ರಾಯ ದೇವಾಲಯವು ಸಂಪೂರ್ಣ ಶಿಥಿಲಾವಸ್ಥೆಗೆ ತಲುಪಿದೆ.

ಈಗಲಾದರೂ ಸಾರ್ವಜನಿಕರು ಹಾಗೂ ಜನಪ್ರತಿನಿಧಿಗಳು ಈ ಅಮೂಲ್ಯವಾದ ಕಲಾಕೃತಿಯನ್ನು ಸಂರಕ್ಷಿಸಬೇಕು ಮತ್ತು ಜಿಲ್ಲಾಡಳಿತ ಇತ್ತ ಗಮನಹರಿಸಿ ಇದನ್ನು ಅಭಿವೃದ್ಧಿಪಡಿಸಬೇಕು. ನಿರ್ಲಕ್ಷ್ಯಕ್ಕೆ ತುತ್ತಾಗಿ ಶಿಥಿಲಗೊಂಡ ಶಿಲ್ಪಕಲೆ ಇದರಿಂದ ಪುರಾತನವಾದ ಈ ಶಿಲ್ಪಕಲಾಕೃತಿಯನ್ನು ಮುಂದಿನ ಪೀಳಿಗೆಗೆ ತಲುಪಿಸಿದಂತಾಗುತ್ತದೆ ಎನ್ನುವುದು ಸ್ಥಳೀಯರಾದ ಅಭಿಪ್ರಾಯ.



# ಸರ್ಕಾರ ಜಾಗ ಕಲ್ಪಿಸಿ ಅನುದಾನ ನೀಡಿದ್ದಲ್ಲಿ ಸೇವೆ ಮಾಡಲು ಅನುಕೂಲ



• ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು

ವಿಜಯನಗರ ಜಿಲ್ಲೆಯ ಹೂವಿನಹಡಗಲಿ ಪಟ್ಟಣದ ಕೊಪ್ಪಳ ಗವಿಮಠದ ಶಾಖಾ ಮಠವಾದ ಡಾ. ಹಿರಿಶಾಂತವೀರ ಮಹಾಸ್ವಾಮಿಗಳು ಶ್ರೀಮಠದಲ್ಲಿ ಕಾರುಣ್ಯ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಹರೇಟನೂರು ಅವರನ್ನು ಗೌರವಿಸಿ ಸಹಾಯ ಸೌಜನ್ಯದ ಮೂಲಕ ಆಶೀರ್ವದಿಸಿದರು.

ಈ ಕ್ಷಣದಲ್ಲಿ ಶ್ರೀಗಳ ಮುಂದೆ ಆಶ್ರಮದ ಕಾರ್ಯಾಧ್ಯಕ್ಷರಾದ ಡಾ. ಚನ್ನಬಸವ ಸ್ವಾಮಿ ಹಿರೇಮಠ ಅವರು ತಮ್ಮ ಆಶೀರ್ವಾದ ಮತ್ತು ನಾಡಿನ ರಾಜಕೀಯ ಧುರೀಣರ ಮತ್ತು ರೈತರ ಮತ್ತು ವಿವಿಧ ಇಲಾಖೆಯ ಅಧಿಕಾರಿಗಳ ಸಾರ್ವಜನಿಕರ ಸಹಾಯ ಸಹಕಾರದೊಂದಿಗೆ ಆಶ್ರಮದ ನಿರ್ವಹಣೆ ನಡೆ- ಯುತ್ತಿದೆ. ಆದರೆ ಸರ್ಕಾರ ಸ್ವಂತ ಜಾಗ ಕಲ್ಪಿಸಿಕೊಟ್ಟು ಅನುದಾನ ನೀಡಿದರೆ ಇನ್ನು ಹೆಚ್ಚಿನ ಸೇವೆ ಮಾಡಲು ಅನುಕೂಲವಾಗುತ್ತದೆ.

ಇದರ ಜೊತೆಯಲ್ಲಿ ಅನೇಕ ಸಮಾಜ ಪರ ಜನಪರ ಕಾರ್ಯಗಳನ್ನು ಮಾಡುವ ಉದ್ದೇಶವನ್ನು ಇಟ್ಟುಕೊಂಡಿರುವ ಕಾರುಣ್ಯ ಸಂಸ್ಥೆಗೆ ಸರ್ಕಾರದ ಸೌಲಭ್ಯಗಳು ದೊರೆಯದಿರುವುದು ಬೇಸರದ ಸಂಗತಿಯಾಗಿದೆ ಎಂದು ಶ್ರೀಗಳ ಮುಂದೆ ಭಾವನಾತ್ಮಕವಾಗಿ ಅಳಲು ತೋಡಿಕೊಂಡರು.

ನಂತರ ಶ್ರೀಗಳು ಕಾರುಣ್ಯ ಕುಟುಂಬ ಮಾಡುತ್ತಿರುವ ಸತ್ಯ ಪ್ರಾಮಾಣಿಕ

ಸೇವೆಗೆ ಮುಂದಿನ ದಿನಮಾನಗಳಲ್ಲಿ ಖಂಡಿತವಾಗಿಯೂ ಸ್ವಂತ ಜಾಗ ಹಾಗೂ ಅನುದಾನ ದೊರೆಯುತ್ತದೆ ನಮ್ಮ ಹಾಗೂ ನಾಡಿನ ಹರಗುರು ಚರಮೂರ್ತಿಗಳ ಮತ್ತು ಶರಣ ಸಂಸಾರ ಬಸವಾದಿ ಶರಣರ ಆಶೀರ್ವಾದ ಸದಾವಕಾಲ ಕಾರುಣ್ಯ ಕುಟುಂಬದ ಮೇಲಿರುತ್ತದೆ.

ಜಂಗಮನ ಜೋಳಿಗೆಯು ಅನಾಥರ ಬಾಡಿಗೆ ಎನ್ನುವ ನಿಮ್ಮೆಲ್ಲರ ಸಂಕಲ್ಪ ಆದಷ್ಟು ಬೇಗನೆ ಈಡೇರುತ್ತದೆ ಎಂದು ಡಾ. ಹಿರಿಶಾಂತವೀರ ಮಹಾಸ್ವಾಮಿಗಳು ಡಾ. ಚನ್ನಬಸವ ಸ್ವಾಮಿ ಹಿರೇಮಠ

ಅವರಿಗೆ ಆಶೀರ್ವದಿಸಿ ಸಮಾಧಾನಪಡಿಸಿದರು. ಈ ಸಮಯದಲ್ಲಿ ಆಶ್ರಮದ ಸಿಬ್ಬಂದಿಗಳಾದ ಸಿದ್ದಯ್ಯ ಸ್ವಾಮಿ. ಬಸವ ಸ್ವಾಮಿ. ಹಾಗೂ ಶ್ರೀಮಠದ ಅಪಾರ ಭಕ್ತರು ಉಪಸ್ಥಿತರಿದ್ದರು.

# ಅಧಿಕ ಉಷ್ಣಾಂಶ :ಅಗತ್ಯ ಮುನ್ನೆಚ್ಚರಿಕೆಗೆ ಈಶ್ವರ ಕುಮಾರ ಸಲಹೆ

• ಮಲ್ಲಮ್ಮ ನುಡಿ ವಾರ್ತೆ, ರಾಯಚೂರು

ಭಾರತೀಯ ಹವಾಮಾನ ಇಲಾಖೆಯ ವರದಿಯ ಪ್ರಕಾರ ರಾಯಚೂರು ಜಿಲ್ಲೆಯಲ್ಲಿ ಮುಂದಿನ ದಿನಗಳಲ್ಲಿ ಅಧಿಕ ಉಷ್ಣಾಂಶ ದಾಖಲಾಗುವ ಸಾಧ್ಯತೆಯಿದ್ದು, ಬಿಸಿ ಗಾಳಿ (ಹೀಟ್ ವೇವ್) ಎಚ್ಚರಿಕೆ ನೀಡಲಾಗಿದೆ. ಹೀಟ್ ವೇವ್ ಸ್ಟ್ರೋಕ್ ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಭಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಕೋರಿದ್ದಾರೆ.

ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸಾರ್ವಜನಿಕರು ಏನು ಮಾಡಬೇಕು ಎಂಬುದರ ಕುರಿತು ಮಾಹಿತಿಯನ್ನು ನೀಡಿದ್ದಾರೆ.

ಸಾರ್ವಜನಿಕರು ರೇಡಿಯೋ,ಟಿವಿ, ದಿನ ಪತ್ರಿಕೆಗಳಲ್ಲಿ ಬಿಸಿಲಿನ ತಾಪಮಾನದ ಕುರಿತು ಮುನ್ಸೂಚನೆಗಳನ್ನು ಪಡೆದುಕೊಳ್ಳಬೇಕು. ಬಾಯಾರಿಕೆಯಿಲ್ಲದಿದ್ದರೂ ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯುವುದು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸುವುದು, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು.

ಬಿಸಿಲಿನಲ್ಲಿ ಹೊರಗೆ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಟೋಪಿ, ಬೂಟುಗಳು ಅಥವಾ ಚಪ್ಪಲಗಳನ್ನು ಬಳಸಿ. ದೂರದ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ, ಒಂದು ವೇಳೆ ಪ್ರಯಾಣ ಮಾಡುವ ಸಂದರ್ಭ ಬಂದರೆ ಪ್ರಯಾಣ ಮಾಡುವಾಗ ನಿಮ್ಮೊಂದಿಗೆ ನೀರನ್ನು



ತೆಗೆದುಕೊಂಡು ಹೋಗುವುದು. ನೀವು ಹೊರಗೆ ಕೆಲಸ ಮಾಡುತ್ತಿದ್ದರೆ, ಟೋಪಿ ಅಥವಾ ಛತ್ರಿಯನ್ನು ಬಳಸಿ ಮತ್ತು ನಿಮ್ಮ ತಲೆ, ಕುತ್ತಿಗೆ, ಮುಖ ಮತ್ತು ಕೈಕಾಲುಗಳ ಮೇಲೆ ಒದ್ದೆಯಾದ ಬಟ್ಟೆಯನ್ನು ಸಹ ಬಳಸಬೇಕು.

ಮನೆಯಲ್ಲಿ ತಯಾರಿಸಿದ ಪಾನೀಯಗಳಾದ ಲಸ್ಸಿ, ಶರಬತ್, ನಿಂಬೆ ನೀರು, ಮಜ್ಜಿಗೆ ಇತ್ಯಾದಿಗಳನ್ನು ಬಳಸಿ ಅದು ದೇಹವನ್ನು ಪುನಃ ತಂಪಾಗಿಡಲು ಸಹಾಯ ಮಾಡುತ್ತದೆ. ಪ್ರಾಣಿ/ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ನೀಡಿ. ಆದಷ್ಟು ಫ್ಯಾನಗಳನ್ನು ಬಳಸಿ, ಒದ್ದೆಯಾದ ಬಟ್ಟೆಗಳನ್ನು ಮತ್ತು ಆಗಾಗ್ಗೆ ತಣ್ಣೀರಿನಲ್ಲಿ ಸ್ನಾನ ಮಾಡಿ. ಕೆಲಸದ ಸಮಯವನ್ನು ಆದಷ್ಟು ತಂಪಾದ ಸಮಯದಲ್ಲಿ ಮಾಡುವುದು ಹಾಗೂ ಕೆಲಸದ ಸ್ಥಳದ ಬಳಿ ತಂಪಾದ ಕುಡಿಯುವ ನೀರನ್ನು ಒದಗಿಸಬೇಕು.

ಕೆಲಸ ನಿರ್ವಹಿಸುವ ಗರ್ಭಿಣಿ ಮಹಿಳೆಯರು ಮತ್ತು ಅನಾರೋಗ್ಯದಲ್ಲಿರುವ ಕಾರ್ಮಿಕರಿಗೆ ಹೆಚ್ಚಿನ ಗಮನ ನೀಡಬೇಕು. ಕಲ್ಲಂಗಡಿ, ಕರಬೂಜ, ಕಿತ್ತಳೆ ದ್ರಾಕ್ಷಿ, ಅನನಾಸ್, ಸೌತೆಕಾಯಿ, ಎಳನೀರನ್ನು ಹೆಚ್ಚಾಗಿ ಸೇವಿಸಬೇಕು. ನವಜಾತ ಶಿಶುಗಳು, ಹಿರಿಯ ನಾಗರಿಕರು ಹಾಗೂ ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ನಿರ್ವಹಿಸುವವರು, ಮಾನಸಿಕ ಸಮಸ್ಯೆಗಳಿಂದ ಬಳಲುತ್ತಿರುವವರು ಹಾಗೂ ಇತರ ಅರೋಗ್ಯ ಸಮಸ್ಯೆಗಳಿರುವವರು, ಅದರಲ್ಲೂ ವಿಶೇಷವಾಗಿ ಹೃದ್ರೋಗ ಹಾಗೂ ರಕ್ತದ ಒತ್ತಡದಿಂದ ಬಳಲುತ್ತಿರುವವರು ಹೆಚ್ಚು ಜಾಗರೂಕತೆ ವಹಿಸಬೇಕು.

ಸಾರ್ವಜನಿಕರು ಏನು ಮಾಡಬಾರದು: ಮಕ್ಕಳು ಅಥವಾ ಸಾಕುಪ್ರಾಣಿಗಳನ್ನು ಬಿಸಿಲಿನಲ್ಲಿ ನಿಲ್ಲಿಸಿದ ವಾಹನಗಳ ಹತ್ತಿರ ಬಿಡಬೇಡಿ.

ವಾಹನಗಳ ಒಳಾಂಗಣದಲ್ಲಿನ ಹೆಚ್ಚಿನ ತಾಪಮಾನವು ಅವರಿಗೆ ಹಾಗೂ ಅವುಗಳಿಗೆ ಅಪಾಯಕಾರಿಯಾಗಬಹುದು. ಕಪ್ಪು ಬಟ್ಟೆ ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸುವುದನ್ನು ತಪ್ಪಿಸಬೇಕು. ಹೊರಗಿನ ತಾಪಮಾನ ಹೆಚ್ಚಾದಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸಬೇಕು.

ಮಧ್ಯಾಹ್ನ 12 ರಿಂದ 3 ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ. ಬಿಸಿಲಿನ ಸಮಯದಲ್ಲಿ ಅಡುಗೆ ಮಾಡುವುದನ್ನು ತಪ್ಪಿಸಿ. ಅಡಿಗೆ ಪ್ರದೇಶವನ್ನು ಸಮರ್ಪಕವಾಗಿ ಗಾಳಿಯಾಡಲು ಬಾಗಿಲು ಮತ್ತು ಕಿಟಕಿಗಳನ್ನು ತೆರೆಬೇಕು. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಹಾನಿಕಾರಕ ಪಾನೀಯಗಳನ್ನು ಸೇವಿಸಬೇಡಿ. ಇವು ಹೊಟ್ಟೆ ನೋವನ್ನು ಉಂಟು ಮಾಡುತ್ತದೆ.

ಹಾನಿಕಾರಕವಾದ ಆಹಾರ ಮತ್ತು ಹಳಸಿದ ಆಹಾರವನ್ನು ಸೇವಿಸಬಾರದು. ಅಲ್ಲದೆ ಚಪ್ಪಲಿ ಧರಿಸದೆ ಹೊರಹೋಗುವ ಅಭ್ಯಾಸವನ್ನು ತಪ್ಪಿಸಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಆಗಿರುವ ಪ್ರಭಾರ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

# ಮನೆಗೊಂದು ಗ್ರಂಥಾಲಯ ಯೋಜನೆಗೆ ಉತ್ತಮ ಸ್ಪಂದನೆ



• ಮಲ್ಲಮ್ಮ ನುಡಿ ವಾರ್ತೆ ಹುಣಸಗಿ

ಕನ್ನಡ ಪುಸ್ತಕ ಪ್ರಾಧಿಕಾರ, ಬೆಂಗಳೂರು ವತಿಯಿಂದ "ಮನೆಗೊಂದು ಗ್ರಂಥಾಲಯ" ಯೋಜನೆಯಡಿ ಗ್ರಂಥಾಲಯ ಅನುಷ್ಠಾನ ಕಾರ್ಯಕ್ರಮವನ್ನು ಯಾದಗಿರಿ ಜಿಲ್ಲಾ ಜಾಗೃತಿ ಬಳಗದವರ ಸಹಯೋಗದಲ್ಲಿ ಹುಣಸಗಿ ಪಟ್ಟಣದಲ್ಲಿ ಮನೆ ಮನೆಗಳಲ್ಲಿ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದ ಭಾಗವಾಗಿ ಕನ್ನಡ ಪುಸ್ತಕ ಪ್ರಾಧಿಕಾರದ ಮಾನ್ಯ ಅಧ್ಯಕ್ಷರಾದ ಡಾ. ಮಾನಸ ಅವರು ವಿವಿಧ ಮನೆಗಳಿಗೆ ಭೇಟಿ ನೀಡಿ ಮನೆಗ್ರಂಥಾಲಯಗಳನ್ನು ವೀಕ್ಷಿಸಿ, ಪ್ರಾಧಿಕಾರದ ಪ್ರಮಾಣಪತ್ರಗಳನ್ನು ವಿತರಿಸಿದರು. ಕಾರ್ಯಕ್ರಮದ ನೇತೃತ್ವವನ್ನು ಯಾದಗಿರಿ ಜಿಲ್ಲಾ ಸಂಚಾಲಕರಾದ ಶ್ರೀ ಪ್ರಕಾಶ ಎಸ್. ಅಂಗಡಿ (ಕನ್ನೆಳ್ಳಿ) ಹಾಗೂ ನೀಲಕಂಠ ಹೊನಕಲ್ ವಹಿಸಿದ್ದರು.

ಈ ಕಾರ್ಯಕ್ರಮವನ್ನು ಮೊದಲಿಗೆ ಶಿಕ್ಷಕರಾದ ಶಿವಕುಮಾರ ಬಂಡೊಳ್ಳಿ ಅವರ ಮನೆಯಲ್ಲಿ ಉದ್ಘಾಟಿಸಲಾಯಿತು. ನಂತರ ಮಹೇಶ ಸ್ಥಾವರಮಠ, ನಾಗನಗೌಡ ಪಾಟೀಲ ಶಿಕ್ಷಕರು, ಶ್ರೀಮತಿ ನೀಲಾ ನಾಗರಬಟ್ ಶಿಕ್ಷಕರು, ವೆಂಕನಗೌಡ ಶಿಕ್ಷಕರು ಹಾಗೂ ಮಾಹಾಂತೇಶ ಮರೋಳ ಅವರ ಮನೆಯಲ್ಲಿ ಮನೆಗೊಂದು ಗ್ರಂಥಾಲಯಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಡಾ. ಮಾನಸ ಅವರು, "ಮನೆಗೊಂದು ಗ್ರಂಥಾಲಯ ಯೋಜನೆ ಮೂಲಕ ಪ್ರತಿಯೊಂದು ಕುಟುಂಬದಲ್ಲೂ ಓದುವ ಹವ್ಯಾಸ ಮತ್ತು ಸಾಹಿತ್ಯದ ಮೇಲಿನ ಆಸಕ್ತಿ ಹೆಚ್ಚಾಗುತ್ತದೆ. ಮಕ್ಕಳಲ್ಲಿ ಜ್ಞಾನ ವೃದ್ಧಿಗೆ ಇದು ಮಹತ್ವದ ಹೆಜ್ಜೆಯಾಗಿದೆ" ಎಂದು ಹೇಳಿದರು.

ಈ ಸಂದರ್ಭದಲ್ಲಿ ಬಸನಗೌಡ ಪಾಟೀಲ, ಆನಂದ ಬಾರಿಗಿಡ, ಪ್ರಶಾಂತ ಹಿರೇಮಠ, ಶರಣಗೌಡ ಬಾನಾಳ, ಪಂಚಾಯತ ಸದಸ್ಯೆ ನಿಕಿತಾ ಅಂಗಡಿ ಹಾಗೂ ಗುಂಡು ಅಂಗಡಿ ಉಪಸ್ಥಿತರಿದ್ದರು.

# ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ

• ಮಲ್ಲಮ್ಮ ನುಡಿ ವಾರ್ತೆ, ಬೆಂಗಳೂರು

ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿದ್ದು, ಈ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ.

ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಅವರು

ಲೋಕಾಯುಕ್ತ ನಿಯತಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್‌ಲೈನ್ ತನಿಖಾ ಮಾಡ್ಯೂಲ್‌ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು.

ಸಭಾ ಕಾರ್ಯಕ್ರಮದ ನಂತರ ಸಂಜೆ 4:30 ರಿಂದ 6:00 ರವರೆಗೆ ವಿಶೇಷ ವಿಚಾರಗೋಷ್ಠಿಗಳು ನಡೆಯಲಿದ್ದು, ನಂತರ ಭ್ರಷ್ಟಾಚಾರದ ವಿರುದ್ಧದ ಹೋರಾಟ ಕುರಿತು



ವಿವಿಧ ಗೋಷ್ಠಿಗಳು ನಡೆಯಲಿವೆ.

ಭ್ರಷ್ಟಾಚಾರ ಮತ್ತು ದುರಾಡಳಿತ ವಿರುದ್ಧ ಹೋರಾಟದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ವಿಷಯದ ಮೇಲೆ ನಿವೃತ್ತ ನ್ಯಾಯಮೂರ್ತಿಗಳಾದ ಕೆ.ಎನ್. ಫಣೀಂದ್ರ ಹಾಗೂ ಭ್ರಷ್ಟಾಚಾರ ತಡೆಗಟ್ಟುವುದು ಹೇಗೆ? ಎಂಬುದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ವಿಚಾರಗೋಷ್ಠಿ ನಡೆಲಿಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ತನ್ನ ಅರ್ಥಪೂರ್ಣ ಹಾಗೂ ಅವಿರತ ಸೇವೆಯ 40 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಸುದೀರ್ಘ ಅವಧಿಯಲ್ಲಿ ಸಂಸ್ಥೆಯು ಹಲವಾರು ಸವಾಲುಗಳನ್ನು ಎದುರಿಸಿದ್ದರೂ ಸಹ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ,

ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧದ ಹೋರಾಟದಲ್ಲಿ ಸದಾ ಸ್ಥಿತಪ್ರಜ್ಞನಾಗಿ ಕಾರ್ಯ ನಿರ್ವಹಿಸಿಕೊಂಡು ಬಂದಿದೆ.

ಸಮಾಜದಲ್ಲಿ ಭ್ರಷ್ಟಾಚಾರವು ಭಯಾನಕ ರೀತಿಯಲ್ಲಿ ಬೆಳೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ ಎಂಬ ಟೀಕೆಗಳಿದ್ದರೂ ಸಹ,

ಧನಾತ್ಮಕ ಚಿಂತನೆ ಹಾಗೂ ಪರಿಶ್ರಮದಿಂದ ಭಷ್ಟಾಚಾರವನ್ನು ಹತ್ತಿಕ್ಕಬಹುದು ಎಂಬ ವಿಶ್ವಾಸವನ್ನು ಸಂಸ್ಥೆಯು ಮೂಡಿಸಿದೆ. ಜೀವನದ ಹಾದಿಯಲ್ಲಿ ಬರುವ ಕಠಿಣ ಸವಾಲುಗಳನ್ನು ಧೈರ್ಯ ಮತ್ತು ತಾಳ್ಮೆಯಿಂದ ಎದುರಿಸಿದಾಗ ಮಾತ್ರ ಯಶಸ್ಸು ಸಾಧ್ಯ.

ಆಮಿಷಗಳಿಗೆ ಒಳಗಾಗದ, ಅಧಿಕಾರದ ಆಸೆಗೆ ಮಣಿಯದ ಮತ್ತು ದೃಢ ಸಂಕಲ್ಪವುಳ್ಳ ಪ್ರಾಮಾಣಿಕ ವ್ಯಕ್ತಿಗಳ ಅಗತ್ಯತೆ ಇಂದು ಹೆಚ್ಚಿದೆ.

ಸಾರ್ವಜನಿಕ ಹಿತಾಸಕ್ತಿಯೇ ಪರಮ ಗುರಿಯಾಗಿಸಿಕೊಂಡು ಕೆಲಸ ಮಾಡುವ ವ್ಯಕ್ತಿಗಳನ್ನು ನಾವು ಪ್ರೋತ್ಸಾಹಿಸಬೇಕಿದೆ. ಎಂತಹದೇ ನಿರಾಸೆ ಎದುರಾದರೂ ಶಾಂತ ಮತ್ತು ಸ್ಥಿರವಾದ ದೃಢತೆಯೊಂದಿಗೆ ಭ್ರಷ್ಟಾಚಾರದ ವಿರುದ್ಧದ ಹೋರಾಟ ಮುಂದುವರಿಯಬೇಕು.

ಒಟ್ಟಾರೆಯಾಗಿ, ಪ್ರಾಮಾಣಿಕ ವ್ಯಕ್ತಿಗಳನ್ನು ಬೆಳೆಸುವಲ್ಲಿ ನಾವು ವಿಫಲವಾದರೆ ಅನ್ಯಾಯವು ಗೆದ್ದು, ನ್ಯಾಯವು ಮರೆಯಾಗುವ ಅಪಾಯವಿದೆ

ಎಂದು ಸಂಸ್ಥೆಯು ಎಚ್ಚರಿಸಿದೆ. ಸವಾಲುಗಳೇ ವ್ಯಕ್ತಿಯನ್ನು ಪರಿಪೂರ್ಣಗೊಳಿಸುತ್ತವೆ ಎಂಬ ಧ್ಯೇಯವಾಕ್ಯದೊಂದಿಗೆ ಲೋಕಾಯುಕ್ತವು ನಾಲ್ಕು ದಶಕಗಳನ್ನು ದಾಟಿ ಮುಂದಿನ ಹೆಜ್ಜೆಯನ್ನು ಇಡುತ್ತಿದೆ.

# ಹೊಳಸಮುದ್ರದಲ್ಲಿ ಮೊಳಗಿದ ಹರಿನಾಮ: ಭಕ್ತಿ ಸಂಭ್ರಮದ ಗಾಥಾಪೂಜೆ



• ಮಲ್ಲಮ್ಮ ನುಡಿ ವಾರ್ತೆ, ಕಮಲನಗರ

ತಾಲೂಕಿನ ಐತಿಹಾಸಿಕ ಹಿನ್ನೆಲೆಯುಳ್ಳ ಹೊಳಸಮುದ್ರ ಗ್ರಾಮದಲ್ಲಿ ಸಪ್ತಾಹದ ಅಂಗವಾಗಿ ಜರುಗಿದ 'ಗಾಥಾಪೂಜೆ' ಮಹೋತ್ಸವವು ಗ್ರಾಮವನ್ನು ಭಕ್ತಿಯ ಸಾಗರದಲ್ಲಿ ತೇಲುವಂತೆ ಮಾಡಿತು.

ನೂರಾರು ವರ್ಷಗಳ ಪರಂಪರೆ

ಹೊಳಸಮುದ್ರ ಗ್ರಾಮವು ತನ್ನದೇ ಆದ ವಿಶಿಷ್ಟ ಇತಿಹಾಸವನ್ನು ಹೊಂದಿದ್ದು, ಇಲ್ಲಿ ನಡೆಯುವ ಅಖಂಡ ಹರಿನಾಮ ಹಾಗೂ ಜ್ಞಾನೇಶ್ವರಿ ಪಾರಾಯಣ ಸಪ್ತಾಹಕ್ಕೆ ನೂರಾರು ವರ್ಷಗಳ ಇತಿಹಾಸವಿದೆ. ಶ್ರೀ ಹರಿನಾಥ ಮಹಾರಾಜರ ಕೃಪಾಶೀರ್ವಾದ ಹಾಗೂ ಏಕನಾಥ ಮಹಾರಾಜ ಹಂಡೆ ಅವರ ಮಾರ್ಗದರ್ಶನದಲ್ಲಿ ಈ ಪರಂಪರೆಯನ್ನು ಇಂದಿಗೂ ಅತ್ಯಂತ ಶ್ರದ್ಧೆಯಿಂದ ಮುಂದುವರಿಸಿಕೊಂಡು ಬರಲಾಗುತ್ತಿದೆ.

> "ಗ್ರಾಮಸ್ಥರು ಸಹಕಾರ ಹಾಗೂ ಭಕ್ತರ ಶ್ರದ್ಧೆಯಿಂದ ಸತ್ಸಂಗ ಮತ್ತು ಹರಿನಾಮ ಸ್ಮರಣೆ ಇಂದಿಗೂ ಅವಿರತವಾಗಿ ಸಾಗುತ್ತಿದೆ. ಇಂತಹ ಕಾರ್ಯಕ್ರಮಗಳು ಮನಸ್ಸಿಗೆ ಶಾಂತಿ ನೀಡುವುದಲ್ಲದೆ, ಸಮಾಜದಲ್ಲಿ ಒಗ್ಗಟ್ಟನ್ನು ಮೂಡಿಸುತ್ತವೆ.
>
> **ಪ್ರವೀಣ ಮಹಾರಾಜರು,**
> **ಅರ್ಚಕರು, ಹರಿನಾಥ ಮಂದಿರ ಹೊಳಸಮುದ್ರ**

ಸತತ 7 ದಿನಗಳ ಕಾಲ ಗ್ರಾಮದಲ್ಲಿ ಹರಿನಾಮ ಸ್ಮರಣೆ, ಭಜನೆ, ಕೀರ್ತನೆ ಹಾಗೂ ಪ್ರವಚನಗಳ ಮೂಲಕ ಆಧ್ಯಾತ್ಮಿಕ ವಾತಾವರಣ ನಿರ್ಮಾಣವಾಗಿತ್ತು. ಸಪ್ತಾಹದ ಪ್ರಮುಖ ಘಟ್ಟವಾದ 'ಗಾಥಾಪೂಜೆ'ಯು ಮಧ್ಯಾಹ್ನ 12 ಗಂಟೆಗೆ ಅತ್ಯಂತ ವಿಜೃಂಭಣೆಯಿಂದ ಜರುಗಿತು.

**ಸೌಹಾರ್ದತೆಯ ಸಂದೇಶ:**

ಜಾತಿ-ಮತ ಭೇದ ಮರೆತು ಇಡೀ ಗ್ರಾಮದ ಜನರು ಒಂದಾಗಿ ಪಾಲ್ಗೊಳ್ಳುವ ಮೂಲಕ ಸಮಾಜಕ್ಕೆ ಭಾವೈಕ್ಯತೆಯ ಸಂದೇಶ ಸಾರಿದರು. ಪೂಜಾ ಕಾರ್ಯಕ್ರಮದ ನಂತರ ಸುತ್ತಮುತ್ತಲಿನ ಹಳ್ಳಿಗಳಿಂದ ಆಗಮಿಸಿದ ಸಾವಿರಾರು ಭಕ್ತಾದಿಗಳಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು.

# ಭೀಮಾಂಬಿಕ ದೇವಿಯ ನೂತನ ರಥೋತ್ಸವ :ಸಾಮೂಹಿಕ ವಿವಾಹ

• ಮಲ್ಲಮ್ಮ ನುಡಿ ವಾರ್ತೆ, ಕುಕನೂರ

ತಾಲೂಕಿನ ಭಟಪನಹಳ್ಳಿ ಗ್ರಾಮದಲ್ಲಿ ಭೀಮಾಂಬಿಕಾ ದೇವಿ ಜಾತ್ರಾ ಮಹೋತ್ಸವ, ನೂತನ ಪಂಚಕಳಸ ತೇರಿನ ಲೋಕಾರ್ಪಣೆ, ಸಾಮೂಹಿಕ ವಿವಾಹ ಹಾಗೂ ಪುರಾಣ ಮಹಾಮಂಗಲೋತ್ಸವ ಕಾರ್ಯಕ್ರಮಗಳು ಏಪ್ರಿಲ್ 17 ಮತ್ತು 18ರಂದು ಎರಡು ದಿನಗಳ ಕಾಲ ವೈಭವದಿಂದ ನಡೆಯಲಿವೆ ಎಂದು ಕೆಪಿಎಸ್ಸಿ ಮಾಜಿ ಸದಸ್ಯ ಡಾ. ಎಚ್.ವಿ. ಪಾಟೀಲ್ ಅವರು ತಿಳಿಸಿದ್ದಾರೆ.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಗುರುವಾರ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಕಳೆದ 29 ವರ್ಷಗಳಿಂದ

ಶಿವಶರಣೆ ತಾಯಿ ಭೀಮಾಂಬಿಕಾ ದೇವಿಯ ಪುರಾಣ ಕಾರ್ಯಕ್ರಮವನ್ನು ನಿರಂತರವಾಗಿ ನಡೆಸಿಕೊಂಡು ಬರಲಾಗುತ್ತಿದೆ. ಪ್ರತಿವರ್ಷ ಪುರಾಣ ಮಂಗಲ ದಿನದಂದು ಪೂಜ್ಯರ ದಿವ್ಯ ಸಾನಿಧ್ಯದಲ್ಲಿ ಸಾಮೂಹಿಕ ವಿವಾಹಗಳನ್ನು ಆಯೋಜಿಸಲಾಗುತ್ತಿದೆ.

ಭಕ್ತರ ಆಶಯದಂತೆ ಸುಮಾರು □25 ಲಕ್ಷ ವೆಚ್ಚದಲ್ಲಿ ನೂತನ ಪಂಚಕಳಸ ರಥ ನಿರ್ಮಿಸಲಾಗಿದ್ದು, ಏಪ್ರಿಲ್ 18ರಂದು ಲೋಕಾರ್ಪಣೆಗೊಳ್ಳಲಿದೆ



ಎಂದು ತಿಳಿಸಿದರು.

ಏ. 17ರಂದು ಸಂಜೆ 4 ಗಂಟೆಗೆ ಜಾತ್ರಾ ಮಹೋತ್ಸವ ಹಾಗೂ ಪಂಚಕಳಸ ತೇರಿನ ಲೋಕಾರ್ಪಣೆ ಕಾರ್ಯಕ್ರಮ ಉದ್ಘಾಟನೆಯಾಗಲಿದೆ.

ಕಾಗಿನೆಲೆ ಮಹಾಸಂಸ್ಥಾನದ ನಿರಂಜನಾನಂದಪುರಿ ಮಹಾಸ್ವಾಮಿಗಳು ಸಾನಿಧ್ಯ ವಹಿಸಲಿದ್ದು, ಇತರ ಮಠಾಧೀಶರೂ ಸಾನಿಧ್ಯ ವಹಿಸಲಿದ್ದಾರೆ. ಮಾಜಿ ಸಂಸದ

ಬಸವರಾಜ ಹಿಟ್ನಾಳ ಉದ್ಘಾಟಕರಾಗಿರುತ್ತಾರೆ. ಕೆ. ವಿರುಪಾಕ್ಷಪ್ಪ ಸುಕಾಲಪೇಟ ಅಧ್ಯಕ್ಷತೆ ವಹಿಸಲಿದ್ದು, ಶರಣು ತಳ್ಳಿಕೇರಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಸಂಜೆ 6 ಗಂಟೆಗೆ ಲಘು ರಥೋತ್ಸವ ನಡೆಯಲಿದೆ. ಅದೇ ದಿನ ಬೆಳಿಗ್ಗೆ ಸುಮಂಗಲೆಯರಿಂದ ಕುಂಭಮೇಳ ನೆರವೇರಲಿದೆ ಎಂದರು.

ಕಾರ್ಯಕ್ರಮದ ದಿವ್ಯಸಾನಿಧ್ಯವನ್ನು ಮುಂಡರಗಿ ಅನ್ನದಾನೇಶ್ವರ ಮಠದ ಡಾ. ನಾಡೋಜ ಅನ್ನದಾನೇಶ್ವರ ಮಹಾಶಿವಯೋಗಿಗಳು, ಶಿರಹಟ್ಟಿ ಸಂಸ್ಥಾನ ಮಠದ ಜಗದ್ಗುರು ಫಕೀರ ಸಿದ್ದರಾಮ ಸ್ವಾಮಿಗಳು, ಕೊಪ್ಪಳ ಗವಿಮಠ ಸಂಸ್ಥಾನದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮಿಗಳು, ಕಾಗಿನೆಲೆ ಮಹಾಸಂಸ್ಥಾನ ಕನಕಗುರು ಪೀಠದ ನಿರಂಜನಾನಂದಪುರಿ ಮಹಾಸ್ವಾಮಿಗಳು, ಶಿರಹಟ್ಟಿಯ ಫಕೀರ್ ದಿಂಗಾಲೇಶ್ವರ ಮಹಾಸ್ವಾಮಿಗಳು, ಕುಕುನೂರು ಅನ್ನದಾನೇಶ್ವರ ಶಾಖಾ ಮಠದ ಮಹಾದೇವ ಸ್ವಾಮೀಜಿ, ಮಂಗಳೂರಿನ ಸಿದ್ದಲಿಂಗ ಶಿವಾಚಾರ್ಯ

ಸ್ವಾಮಿಗಳು, ಗದಗ ತಾಲೂಕಿನ ಬಳಗಾನೂರು ಸುಕ್ಷೇತ್ರದ ಶಿವಶಾಂತವೀರ ಶರಣರು, ಹಾಲವರ್ತಿ□ಬಾದಿಮುನಾಳ ಕಾಗಿನೆಲೆ ಮಹಾಸಂಸ್ಥಾನ ಗುರುಪೀಠದ ಶಿವಸಿದ್ದೇಶ್ವರ ಮಹಾಸ್ವಾಮಿಗಳು ಹಾಗೂ ತುರಿವಿಹಾಳ ಅಮೋಘಸಿದ್ದೇಶ್ವರ ಮಠದ ಮಾದಯ್ಯ ಗುರುವಿನವರು ವಹಿಸಲಿದ್ದಾರೆ ಎಂದು ಹೇಳಿದರು.

ಏ. 18ರಂದು ಬೆಳಿಗ್ಗೆ 11 ಗಂಟೆಗೆ ವಿವಿಧ ಜಾತಿಯ 11 ಜೋಡಿಗಳ ಸಾಮೂಹಿಕ ವಿವಾಹ ಕಾರ್ಯಕ್ರಮ ನಡೆಯಲಿದೆ. ನಂತರ ಮಠಾಧೀಶರ ಆಶೀರ್ವಚನ ಕಾರ್ಯಕ್ರಮ ಜರುಗಲಿದೆ. ಯಲಬುರ್ಗಾ

ವಿಧಾನಸಭಾ ಕ್ಷೇತ್ರದ ಶಾಸಕ, ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರ ಬಸವರಾಜ ರಾಯರೆಡ್ಡಿ,

ಮಾಜಿ ಸಚಿವ ಹಾಲಪ್ಪ ಆಚಾರ, ಬಿಜೆಪಿ ಜಿಲ್ಲಾಧ್ಯಕ್ಷ ನವೀನಕುಮಾರ ಗುಳಗಣ್ಣವರ ಸೇರಿದಂತೆ ಗಣ್ಯರು ಭಾಗವಹಿಸಲಿದ್ದಾರೆ.

ಸಂಜೆ 6 ಗಂಟೆಗೆ ಪಂಚಕಳಸ ಮಹಾರಥೋತ್ಸವಕ್ಕೆ ಚಾಲನೆ ದೊರೆಯಲಿದೆ ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಭೀಮಾಂಬಿಕಾ ದೇವಿ ಸೇವಾ ಸಮಿತಿಯ ಅಧ್ಯಕ್ಷ ರಾಜಶೇಖರ್

ಕರಮೂಡಿ , ಮಲ್ಲಿಕಾರ್ಜುನ ಕರಮೂಡಿ, ಮಲ್ಲಪ್ಪ ಕಲಗೋಡಿ, ಶ್ರೀಧರ್ ಹೊಸಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಮಹಿಳಾ ಮೀಸಲು ಮಸೂದೆ ಸ್ವಾಗತಾರ್ಹ



ಬಳ್ಳಾರಿ,: ಕೇಂದ್ರ ಸರ್ಕಾರದ ಮಹಿಳಾ ಮೀಸಲು ಮಸೂದೆ ಸ್ವಾಗತಾರ್ಹವಾದುದು ಆದರೆ ಲೋಕಸಭಾಕ್ಷೇತ್ರಗಳಪುನರ್ವಿಂಗಡಣೆ ಮಾಡುವುದರಿಂದ ದಕ್ಷಿಣ ಭಾರತದ ರಾಜ್ಯಗಳಿಗೆ ಘೋರ ಅನ್ಯಾಯ ಆಗಲಿದೆ ಎಂದು ವೀರಶೈವ ಲಿಂಗಾಯತ ಯುವ ನಾಯಕಿ ನಾರಾ ವೈಜಯಂತಿ ರೆಡ್ಡಿ ಅಭಿಪ್ರಾಯ ಪಟ್ಟಿದ್ದಾರೆ. ಶುಕ್ರವಾರ ಈ ಕುರಿತು ಅವರು ಪತ್ರಿಕಾ ಹೇಳಿಕೆ ಬಿಡುಗಡೆ ಮಾಡಿದ್ದಾರೆ.

ರಾಜಕೀಯ ಪ್ರಾತಿನಿಧ್ಯಕ್ಕೆ ಸಂಬಂಧಿಸಿ ಮಹಿಳಾ ಮೀಸಲಾತಿ ವಿಷಯ ಹೊಸದೇನಲ್ಲ, ಒಂದೂವರೆ ದಶಕದ ಹಿಂದೆಯೇ ಮಾನ್ಯ ಸೋನಿಯಾ ಗಾಂಧಿಯವರ ಅವಿರತ ಶ್ರಮದ ಫಲವಾಗಿ ಮಹಿಳಾ ಮೀಸಲು ಮಸೂದೆ ಚರ್ಚೆಗೆ ಬಂತು ಎಂದು ಹೇಳಿರುವ ಅವರು, 2010ರಲ್ಲಿಯೇ ಆಗಿನ ಯುಪಿಎ ಅಧ್ಯಕ್ಷರಾಗಿದ್ದ ಸೋನಿಯಾ ಗಾಂಧಿಯವರು ಮಹಿಳೆಯರಿಗೆ ಶೇ.33ರಷ್ಟು ಮಸೂದೆಯನ್ನು ರಾಜ್ಯಸಭೆಯಲ್ಲಿ ಮಂಡಿಸಿದ್ದರು, ಆದರೆ ಲೋಕಸಭೆಯಲ್ಲಿ ಒಮ್ಮತದ ಕೊರತೆ ಹಾಗೂ ಕೆಲ ಪಕ್ಷಗಳ ವಿರೋಧದಿಂದಾಗಿ ಅಂತಿಮವಾಗಿ ರದ್ದಾಯಿತು ಎಂದಿದ್ದಾರೆ.

ಮಾನ್ಯ ಸೋನಿಯಾ ಗಾಂಧಿಯವರು ಒಂದೂವರೆ ದಶಕದ ಹಿಂದೆಯೇ ದೇಶದ ಎಲ್ಲ ಲೋಕಸಭೆ ಹಾಗೂ ವಿಧಾನಸಭೆಗಳಲ್ಲಿ ಶೇ.33ರಷ್ಟು ಮಹಿಳೆಯರಿಗೆ ಮೀಸಲು ತರುವ ಪ್ರಯತ್ನ ಮಾಡಿದ್ದರು, ಆದರೆ ಅವರಿಗೆ ದೇಶದ ಯಾವುದೇ ಭಾಗದ ಅಥವಾ ರಾಜ್ಯಗಳ ಪ್ರಾತಿನಿಧ್ಯ ಕಸಿಯುವ ಉದ್ದೇಶ ಇರಲಿಲ್ಲ, ಆದರೆ ಈಗ ಕ್ಷೇತ್ರ ಪುನರ್ವಿಂಗಡಣೆ ಮಾಡಲು ಹೊರಟಿರುವ ಕೇಂದ್ರ ಸರ್ಕಾರಕ್ಕೆ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡುವ ಉದ್ದೇಶ ಇದೆ ಎಂದಿದ್ದಾರೆ.

ಹಾಲಿ ಕ್ಷೇತ್ರ ಪುನರ್ವಿಂಗಡಣೆಯಿಂದ ಉತ್ತರ ಭಾರತದಲ್ಲಿ ಲೋಕಸಭಾ ಕ್ಷೇತ್ರಗಳ ಸಂಖ್ಯೆ ವಿಪರೀತ ಮತ್ತು ಅಸಹಜ ರೀತಿಯಲ್ಲಿ ಹೆಚ್ಚಲಿವೆ ಎಂದು ಅಭಿಪ್ರಾಯ ಪಟ್ಟಿರುವ ನಾರಾ ವೈಜಯಂತಿ ರೆಡ್ಡಿ, ಕ್ಷೇತ್ರ ಪುನರ್ವಿಂಗಡಣೆಯು ಜನಸಂಖ್ಯೆ ನಿಯಂತ್ರಣದಲ್ಲಿ ವಿಫಲ ಆಗಿರುವ ರಾಜ್ಯಗಳಿಗೆ ವರದಾನವಾದರೆ, ನಮ್ಮಂತಹ ಜನಸಂಖ್ಯೆ ನಿಯಂತ್ರಿಸಿರುವ ರಾಜ್ಯಗಳಿಗೆ ಮಾರಕ ಆಗಲಿದೆ ಎಂದಿದ್ದಾರೆ.

ಉತ್ತರ ಭಾರತದಲ್ಲಿಯೇ ಅತಿ ಹೆಚ್ಚು ಲೋಕಸಭಾ ಕ್ಷೇತ್ರಗಳಾದರೆ ಇದು ನಿರ್ದಿಷ್ಟ ಪಕ್ಷಕ್ಕೆ ಲಾಭ ತರುವ ಹುನ್ನಾರ ಆಗುವುದು ಸ್ಪಷ್ಟ, ಹೀಗಾಗಿ ಈ ಅವೈಜ್ಞಾನಿಕ ಕ್ಷೇತ್ರ ಪುನರ್ವಿಂಗಡಣೆಯನ್ನು ಕೈ ಬಿಡಬೇಕು, ವಿಪಕ್ಷಗಳ ಸಲಹೆ ಪಡೆದು, ತಜ್ಞರ ಅಭಿಪ್ರಾಯ ಪಡೆದು ಕ್ಷೇತ್ರ ಪುನರ್ವಿಂಗಡಣೆ ದೇಶದ ಎಲ್ಲ ರಾಜ್ಯಗಳಿಗೆ ಸಮನಾದ ಮತ್ತು ನ್ಯಾಯಯುತ ಪ್ರಾತಿನಿಧ್ಯ ನೀಡುವಂತಾಗಬೇಕೆಂದು ಅವರು ಹೇಳಿದ್ದಾರೆ.

ಮಹಿಳಾ ಮೀಸಲಾತಿ ದೇಶದ ಎಲ್ಲ ಮಹಿಳೆಯರಿಗೆ ಸಿಗಬೇಕು ನಿಜ, ಲೋಕಸಭಾ ಕ್ಷೇತ್ರಗಳ ಪುನರ್ವಿಂಗಡಣೆಯೂ ಆಗಬೇಕು, ಆದರೆ ದೇಶದ ಅಭಿವೃದ್ಧಿಯಲ್ಲಿ ಗುರುತರ ಕೊಡುಗೆ ನೀಡಿರುವ ದಕ್ಷಿಣದ ರಾಜ್ಯಗಳಿಗೆ ಅನ್ಯಾಯ ಮಾಡಿ, ಅಧಿಕಾರ ಹಿಡಿಯುವ ಏಕೈಕ ಉದ್ದೇಶಕ್ಕೆ ಸ್ವಾರ್ಥಪರ ಅಸ್ತ್ರವಾಗಿ ಬಳಕೆಯಾಗಬಾರದು ಎಂದು ವೀರಶೈವ ಲಿಂಗಾಯತ ಯುವ ನಾಯಕಿ ನಾರಾ ವೈಜಯಂತಿ ರೆಡ್ಡಿ ಅಭಿಪ್ರಾಯಪಟ್ಟಿದ್ದಾರೆ.

# ಕರ್ನಾಟಕ ಲೋಕಾಯುಕ್ತದ ನಾಲ್ಕು ದಶಕಗಳ ಸಾರ್ಥಕ ಪಯಣ: ಏ.18 ರಂದು ವಿಶೇಷ ಕಾರ್ಯಕ್ರಮ

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಭ್ರಷ್ಟಾಚಾರ ನಿರ್ಮೂಲನೆ ಮತ್ತು ಆಡಳಿತ ಸುಧಾರಣೆಯಲ್ಲಿ ಮಹತ್ತರ ಪಾತ್ರ ವಹಿಸಿರುವ 'ಕರ್ನಾಟಕ ಲೋಕಾಯುಕ್ತ' ಸಂಸ್ಥೆಯು ತನ್ನ ಯಶಸ್ವಿ ನಾಲ್ಕು ದಶಕಗಳ ಪಯಣವನ್ನು ಪೂರೈಸಿದ್ದು, ಈ ಅಂಗವಾಗಿ 2026ರ ಏಪ್ರಿಲ್ 18, ಶನಿವಾರದಂದು ಬೆಂಗಳೂರಿನ ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಮುಖ್ಯ ಅತಿಥಿಗಳಾಗಿ ಆಗಮಿಸಿ ಉದ್ಘಾಟನೆ ನೆರವೇರಿಸಲಿದ್ದಾರೆ. ಸುಪ್ರೀಂ ಕೋರ್ಟ್‌ನ ನ್ಯಾಯಮೂರ್ತಿಗಳಾದ ಅರವಿಂದ್ ಕುಮಾರ್ ಅವರು ಗೌರವ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ. ಕರ್ನಾಟಕದ ಲೋಕಾಯುಕ್ತರಾದ ಬಿ.ಎಸ್. ಪಾಟೀಲ್, ಉಪಲೋಕಾಯುಕ್ತರುಗಳಾದ ಕೆ.ಎನ್. ಫಣೀಂದ್ರ ಮತ್ತು ಬಿ. ವೀರಪ್ಪ ಅವರ ಘನ ಉಪಸ್ಥಿತಿಯಲ್ಲಿ ಈ ಕಾರ್ಯಕ್ರಮವು ಜರುಗಲಿದೆ.

ಈ ಸಂದರ್ಭದಲ್ಲಿ ಭಾರತದ ಮುಖ್ಯ ನ್ಯಾಯಮೂರ್ತಿಗಳಾದ ಸೂರ್ಯ ಕಾಂತ್ ಅವರು ಲೋಕಾಯುಕ್ತ ನಿಯತ

ಕಾಲಿಕೆಯನ್ನು ಬಿಡುಗಡೆ ಮಾಡುವ ಜೊತೆಗೆ ಚುನಾಯಿತ ಪ್ರತಿನಿಧಿಗಳ ಆಸ್ತಿ ಮತ್ತು ಹೊಣೆಗಾರಿಕೆಗಳ ಹೊಸ ಪೋರ್ಟಲ್ ಹಾಗೂ ಆನ್ ಲೈನ್ ತನಿಖಾ ಮಾಡ್ಯೂಲ್ ಗೆ ಚಾಲನೆ ನೀಡಲಿದ್ದಾರೆ. ಇದೇ ಸಂದರ್ಭದಲ್ಲಿ ಮಾಜಿ ಲೋಕಾಯುಕ್ತರು ಮತ್ತು ಉಪಲೋಕಾಯುಕ್ತರನ್ನು ಸನ್ಮಾನಿಸಲಾಗುವುದು.

ಸಭಾ ಕಾರ್ಯಕ್ರಮದ ನಂತರ ಸಂಜೆ 4:30 ರಿಂದ 6:00 ರವರೆಗೆ ವಿಶೇಷ ವಿಚಾರಗೋಷ್ಠಿಗಳು ನಡೆಯಲಿದ್ದು, ನಂತರ ಭ್ರಷ್ಟಾಚಾರದ ವಿರುದ್ಧದ ಹೋರಾಟ ಕುರಿತು ವಿವಿಧ ಗೋಷ್ಠಿಗಳು ನಡೆಯಲಿವೆ.

ಭ್ರಷ್ಟಾಚಾರ ಮತ್ತು ದುರಾಡಳಿತ ವಿರುದ್ಧ ಹೋರಾಟದ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ.ಎಸ್. ಪಾಟೀಲ್, ಲೋಕಾಯುಕ್ತ ಕಾಯ್ದೆಯಡಿ ಕುಂದುಕೊರತೆಗಳ ಪರಿಹಾರ ವಿಷಯದ ಮೇಲೆ ನಿವೃತ್ತ ನ್ಯಾಯಮೂರ್ತಿಗಳಾದ ಕೆ.ಎನ್. ಫಣೀಂದ್ರ ಹಾಗೂ ಭ್ರಷ್ಟಾಚಾರ ತಡೆಗಟ್ಟುವುದು ಹೇಗೆ? ಎಂಬುದರ ಬಗ್ಗೆ ನಿವೃತ್ತ ನ್ಯಾಯಮೂರ್ತಿಗಳಾದ ಬಿ. ವೀರಪ್ಪ ಅವರು ವಿಚಾರಗೋಷ್ಠಿ ನಡೆಸಲಿದ್ದಾರೆ.

ಕರ್ನಾಟಕ ಲೋಕಾಯುಕ್ತ ಸಂಸ್ಥೆಯು ತನ್ನ ಅರ್ಥಪೂರ್ಣ ಹಾಗೂ ಅವಿರತ ಸೇವೆಯ 40 ವರ್ಷಗಳನ್ನು ಯಶಸ್ವಿಯಾಗಿ ಪೂರೈಸಿದ್ದು, ಈ ಸುದೀರ್ಘ ಅವಧಿಯಲ್ಲಿ ಸಂಸ್ಥೆಯು ಹಲವಾರು ಸವಾಲುಗಳನ್ನು ಎದುರಿಸಿದ್ದರೂ ಸಹ, ಸಾರ್ವಜನಿಕ ಸೇವೆಯಲ್ಲಿನ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಆಡಳಿತ ದುರುಪಯೋಗದ ವಿರುದ್ಧದ ಹೋರಾಟದಲ್ಲಿ ಸದಾ ಸ್ಥಿತಪ್ರಜ್ಞವಾಗಿ ಕಾರ್ಯ ನಿರ್ವಹಿಸಿಕೊಂಡು ಬಂದಿದೆ.

ಸಮಾಜದಲ್ಲಿ ಭ್ರಷ್ಟಾಚಾರವು ಭಯಾನಕ ರೀತಿಯಲ್ಲಿ ಬೆಳೆಯುತ್ತಿರುವುದು ಕಳವಳಕಾರಿ ಸಂಗತಿಯಾಗಿದೆ. ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಸಾಧ್ಯವಿಲ್ಲ ಎಂಬ ಟೀಕೆಗಳಿದ್ದರೂ ಸಹ, ಧನಾತ್ಮಕ ಚಿಂತನೆ ಹಾಗೂ ಪರಿಶ್ರಮದಿಂದ ಭಷ್ಟಾಚಾರವನ್ನು ಹತ್ತಿಕ್ಕಬಹುದು ಎಂಬ ವಿಶ್ವಾಸವನ್ನು ಸಂಸ್ಥೆಯು ಮೂಡಿಸಿದೆ. ಜೀವನದ ಹಾದಿಯಲ್ಲಿ ಬರುವ ಕಠಿಣ ಸವಾಲುಗಳನ್ನು ಧೈರ್ಯ ಮತ್ತು ತಾಳ್ಮೆಯಿಂದ ಎದುರಿಸಿದಾಗ ಮಾತ್ರ ಯಶಸ್ಸು ಸಾಧ್ಯ.

ಆಮಿಷಗಳಿಗೆ ಒಳಗಾಗದ, ಅಧಿಕಾರದ ಆಸೆಗೆ ಮಣಿಯದ ಮತ್ತು ದೃಢ ಸಂಕಲ್ಪವುಳ್ಳ ಪ್ರಾಮಾಣಿಕ ವ್ಯಕ್ತಿಗಳ ಅಗತ್ಯತೆ ಇಂದು ಹೆಚ್ಚಿದೆ. ಸಾರ್ವಜನಿಕ ಹಿತಾಸಕ್ತಿಯೇ ಪರಮ ಗುರಿಯಾಗಿಸಿಕೊಂಡು ಕೆಲಸ ಮಾಡುವ ವ್ಯಕ್ತಿಗಳನ್ನು ನಾವು ಪ್ರೋತ್ಸಾಹಿಸಬೇಕಿದೆ. ಎಂತಹದೇ ನಿರಾಸೆ ಎದುರಾದರೂ ಶಾಂತ ಮತ್ತು ಸ್ಥಿರವಾದ ದೃಢತೆಯೊಂದಿಗೆ ಭ್ರಷ್ಟಾಚಾರದ ವಿರುದ್ಧದ ಹೋರಾಟ ಮುಂದುವರಿಯಬೇಕು.

ಒಟ್ಟಾರೆಯಾಗಿ, ಪ್ರಾಮಾಣಿಕ ವ್ಯಕ್ತಿಗಳನ್ನು ಬೆಳೆಸುವಲ್ಲಿ ನಾವು ವಿಫಲವಾದರೆ ಅನ್ಯಾಯವು ಗೆದ್ದು, ನ್ಯಾಯವು ಮರೆಯಾಗುವ ಅಪಾಯವಿದೆ ಎಂದು ಸಂಸ್ಥೆಯು ಎಚ್ಚರಿಸಿದೆ. ಸವಾಲುಗಳೇ ವ್ಯಕ್ತಿಯನ್ನು ಪರಿಪೂರ್ಣಗೊಳಿಸುತ್ತವೆ ಎಂಬ ಧ್ಯೇಯವಾಕ್ಯದೊಂದಿಗೆ ಲೋಕಾಯುಕ್ತವು ನಾಲ್ಕು ದಶಕಗಳನ್ನು ದಾಟಿ ಮುಂದಿನ ಹೆಜ್ಜೆಯನ್ನು ಇಡುತ್ತಿದೆ.

# ಸರ್ಕಾರಿ ಜಾಗ ಒತ್ತುವರಿ ತೆರವು ಜಿಲ್ಲಾಡಳಿತದಿಂದ ದಿಟ್ಟ ಕ್ರಮ



**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ವಿವಿಧೆಡೆ ಹಲವು ವರ್ಷಗಳಿಂದ ಅಕ್ರಮವಾಗಿ ಒತ್ತುವರಿಯಾಗಿದ್ದ ಸರ್ಕಾರಿ ಜಾಗವನ್ನು ಜಿಲ್ಲಾಡಳಿತವು ಕಾರ್ಯಾಚರಣೆಯ ಮೂಲಕ ಗುರುವಾರ ತೆರವುಗೊಳಿಸಿದೆ. ನಗರದ ಅವಂಭಾವಿಯ ದೇವಸ್ಥಾನದ ಹಿಂಭಾಗದಲ್ಲಿ ಒತ್ತುವರಿ ಮಾಡಿ ತಡೆಗೋಡೆ ನಿರ್ಮಿಸಿದ್ದ ರಸ್ತೆ ಸೇರಿದಂತೆ 22 ಸೆಂಟ್ಸ್ ವಿಸ್ತೀರ್ಣದ ಸರ್ಕಾರಿ ಜಾಗ ಅಧಿಕಾರಿಗಳು ವಶಕ್ಕೆ ಪಡೆಯಲಾಯಿತು. ತೆರವುಗೊಳಿಸಿದ ಜಾಗಕ್ಕೆ ಅಳವಡಿಸಿ 'ಸರ್ಕಾರಿ ಸ್ವತ್ತು' ಎಂಬ ನಾಮಫಲಕ ಹಾಕಲಾಯಿತು. ಮುಂಜಾನೆಯೇ ಸ್ಥಳಕ್ಕೆ ಆಗಮಿಸಿದ ಕಂದಾಯ ಇಲಾಖೆ ಅಧಿಕಾರಿಗಳು ಮತ್ತು ಪೊಲೀಸರು ಜೆಸಿಬಿ ಯಂತ್ರಗಳ ಮೂಲಕ ನೆಲಸಮ ಮಾಡಿದರು.

ಬಳಿಕ ನಲ್ಲಚೇರುವು ಪ್ರದೇಶದಲ್ಲಿ ಒತ್ತುವರಿಯಾಗಿದ್ದ 5.5 ಎಕರೆ ಜಮೀನು ಸರ್ಕಾರದ ಸ್ವತ್ತು ಎಂದು ನಾಮಫಲಕ ನೆಡಲಾಯಿತು. ನಂತರ ಭತ್ರಿ ಕಾಲೋನಿಯ ಈಶ್ವರ ದೇವಸ್ಥಾನದ ಬಳಿ ಸರ್ಕಾರಿ ಜಾಗದಲ್ಲಿ ಅನಧಿಕೃತವಾಗಿ ನಿರ್ಮಿಸಿದ್ದ ಶೆಡ್ ಮತ್ತು ಮನೆ ತೆರವು ಕಾರ್ಯಾಚರಣೆ ಮಾಡಲಾಯಿತು.

ಕಾರ್ಯಾಚರಣೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಝುಬೇರ್.ಎನ್., ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಬಳ್ಳಾರಿ ತಾಲ್ಲೂಕು ತಹಶೀಲ್ದಾರರಾದ ಟಿ.ರೇಖಾ ಸೇರಿದಂತೆ ಡಿಡಿಎಲ್ಆರ್, ಎಡಿಎಲ್ಆರ್ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಇತರರು ಪಾಲ್ಗೊಂಡಿದ್ದಾರೆ.

# ಬಿಸಿಲಿನ ತಾಪದಿಂದ ರಕ್ಷಣೆ ಪಡೆಯಲು ಜಾಗೃತಿ ವಹಿಸಿ: ಯಲ್ಲಾ ರಮೇಶ್

**ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ಜಿಲ್ಲೆಯಾದ್ಯಂತ ಬೇಸಿಗೆಯ ತಾಪಮಾನ ಗಣನೀಯವಾಗಿ ಏರಿಕೆಯಾಗುತ್ತಿರುವ ಹಿನ್ನೆಲೆಯಲ್ಲಿ, ಸಾರ್ವಜನಿಕರು ಬಿಸಿಲಿನ ಶಾಖಾಘಾತಕ್ಕೆ ಒಳಗಾಗದಂತೆ ಮುನ್ನೆಚ್ಚರಿಕೆ ವಹಿಸಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಸಿರುಗುಪ್ಪ ತಾಲ್ಲೂಕಿನ ಚಿಕ್ಕ ಬಳ್ಳಾರಿ ಗ್ರಾಮಕ್ಕೆ ಇತ್ತೀಚೆಗೆ ಭೇಟಿ ನೀಡಿ ಅವರು, ಗರ್ಭಿಣಿಯರು ಮತ್ತು ಮಕ್ಕಳ ಮನೆಗಳಿಗೆ ಖುದ್ದು ಭೇಟಿ ನೀಡಿ ಆರೋಗ್ಯ ತಪಾಸಣೆ ನಡೆಸಿದರು. ಈ ಸಂದರ್ಭದಲ್ಲಿ ಬಿಸಿಲಿನ ಪ್ರಖರತೆಯಿಂದ ತಪ್ಪಿಸಿಕೊಳ್ಳಲು ಅನುಸರಿಸಬೇಕಾದ ಕ್ರಮಗಳ ಕುರಿತು ಜಾಗೃತಿ ಮೂಡಿಸಿದರು.

**ಮಧ್ಯಾಹ್ನ ಹೊರಗೆ ಬರಬೇಡಿ:**

ತೀವ್ರ ಬಿಸಿಲಿರುವ ಹಿನ್ನಲೆಯಲ್ಲಿ ಮಧ್ಯಾಹ್ನ 12 ರಿಂದ ಸಂಜೆ 04 ಗಂಟೆಯವರೆಗೆ ತಾಯಂದಿರು, ವಯೋವೃದ್ಧರು ಮತ್ತು ಮಕ್ಕಳು ಅನಗತ್ಯವಾಗಿ ಮನೆಯಿಂದ ಹೊರಗೆ ಬರಬಾರದು. ಅನಿವಾರ್ಯ ಸಂದರ್ಭಗಳಲ್ಲಿ ಹೊರಬರುವಾಗ ಛತ್ರಿ ಬಳಸಬೇಕು ಹಾಗೂ ಕುಡಿಯುವ ನೀರನ್ನು ಜೊತೆಯಲ್ಲಿ ಇಟ್ಟುಕೊಳ್ಳಬೇಕು. ಮಕ್ಕಳನ್ನು ಕರೆದೊಯ್ಯುವಾಗ ಅವರ ತಲೆಯ ಮೇಲೆ ಒದ್ದೆಯಾದ ಬಟ್ಟೆಯನ್ನು ಹಾಕಿ ಬಿಸಿಲಿನ ತಾಪ ತಗುಲದಂತೆ ಜಾಗ್ರತೆ ವಹಿಸಬೇಕು ಎಂದು ತಿಳಿಸಿದರು.

**ಅಪಾಯದ ಲಕ್ಷಣಗಳು:**

ವಯಸ್ಕರಲ್ಲಿ ಅರೆಪ್ರಜ್ಞಾವಸ್ಥೆ, ಅತಿಯಾದ ತಲೆನೋವು, ತಲೆಸುತ್ತುವಿಕೆ, ಕೆಂಪಾದ ಒಣ ಚರ್ಮ, ಸ್ನಾಯುಗಳ ಸೆಳೆತ ಹಾಗೂ ವಾಂತಿ ಕಂಡುಬರಬಹುದು. ಮಕ್ಕಳು ಆಹಾರ ಸೇವಿಸಲು ನಿರಾಕರಿಸುವುದು, ಕಡಿಮೆ ಮೂತ್ರ ವಿಸರ್ಜನೆ, ಬಾಯಿ ಒಣಗುವಿಕೆ, ಆಲಸ್ಯ ಹಾಗೂ ದೇಹದ ಯಾವುದೇ ಭಾಗದಲ್ಲಿ ರಕ್ತಸ್ರಾವ ಕಾಣಬಹುದು ಎಂದು ಅವರು ತಿಳಿಸಿದರು.

ಹಾಗಾಗಿ ಯಾರಾದರೂ ಬಿಸಿಲಿನಿಂದ ಪ್ರಜ್ಞೆ ತಪ್ಪಿದರೆ ತಕ್ಷಣ ಅವರನ್ನು ನೆರಳಿರುವ ಜಾಗಕ್ಕೆ ಸ್ಥಳಾಂತರಿಸಿ, ಬಟ್ಟೆಗಳನ್ನು ಸಡಿಲಗೊಳಿಸಿ ಕಾಲುಗಳನ್ನು ಎತ್ತರಿಸಿ ಮಲಗಿಸಬೇಕು. ತಣ್ಣೀರಿನಿಂದ ದೇಹವನ್ನು ಒರೆಸಿ ತಕ್ಷಣ ಹತ್ತಿರದ ವೈದ್ಯರನ್ನು ಸಂಪರ್ಕಿಸಬೇಕು ಎಂದರು.

**ಮಾಡಬೇಕಾದ ಕಾರ್ಯ:**

ಬಾಯಾರಿಕೆ ಇಲ್ಲದಿದ್ದರೂ ಆಗಾಗ ನೀರು ಕುಡಿಯಿರಿ. ಮನೆಯಲ್ಲಿ ತಯಾರಿಸಿದ ಮಜ್ಜಿಗೆ, ಲಿಂಬೆ ಶರಬತ್ತು, ಎಳೆನೀರು ಹಾಗೂ ಹಣ್ಣಿನ ರಸಗಳನ್ನು ಸೇವಿಸಿ. ಕಲ್ಲಂಗಡಿ, ಕಿತ್ತಳೆ, ಸೌತೆಕಾಯಿಯಂತಹ ಹಣ್ಣುಗಳನ್ನು ಹೆಚ್ಚು ಬಳಸಿ. ತಿಳಿ ಬಣ್ಣದ ಸಡಿಲವಾದ ಹತ್ತಿ ಬಟ್ಟೆಗಳನ್ನು ಧರಿಸಿ. ಹೊರಾಂಗಣದ ಕೆಲಸಗಳನ್ನು ಬೆಳಿಗ್ಗೆ 11 ಗಂಟೆಯೊಳಗೆ ಪೂರ್ಣಗೊಳಿಸಬೇಕು ಎಂದು ಹೇಳಿದರು.

ಬಾಯಾರಿಕೆಯು ನಿರ್ಜಲೀಕರಣದ ಲಕ್ಷಣವಾಗಿದೆ. ಪ್ರಯಾಣ ಮಾಡುವ ಸಮಯದಲ್ಲಿ ಸಹ ಕುಡಿಯುವ ನೀರನ್ನು ಜೊತೆಗೆ ತೆಗೆದುಕೊಂಡು ಹೋಗುವುದು ಅಗತ್ಯ. ಓಆರ್ಎಸ್ ಜೀವಜಲ ಸೇವನೆ ಮಾಡಬೇಕು. ಮನೆಯಲ್ಲಿಯೇ ಸಿದ್ಧಪಡಿಸಿದ ನಿಂಬೆ ಹಣ್ಣಿನ ಶರಬತ್ತು, ಮಜ್ಜಿಗೆ, ಲಸ್ಸಿ, ಹಣ್ಣಿನ ಜ್ಯೂಸ್‌ಗಳನ್ನು ಒಂದು ಚಿಟಿಕೆ ಉಪ್ಪಿನೊಂದಿಗೆ ಸೇವಿಸುವುದು ಉತ್ತಮ. ಪ್ರಸ್ತುತ ಋತುಮಾನದ ಹಣ್ಣುಗಳಾದ ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನಾನಸ್ ಹಾಗೂ ಸೌತೆಕಾಯಿ, ಎಳೆನೀರು ಹೆಚ್ಚು ಸೇವಿಸಬೇಕು.

**ಮಾಡಬಾರದು:**

ಬಿರುಗಾಳಿನಲ್ಲಿ ಹೊರಗೆ ಹೋಗಬೇಡಿ. ಮದ್ಯಪಾನ, ಟೀ, ಕಾಫಿ ಹಾಗೂ ಅತಿಯಾದ ಸಕ್ಕರೆ ಅಂಶವಿರುವ ಪಾನೀಯಗಳನ್ನು ಸೇವಿಸಬೇಡಿ. ರಸ್ತೆ ಬದಿಯ ಕತ್ತರಿಸಿಟ್ಟ ಹಣ್ಣುಗಳನ್ನು ಮತ್ತು ಕಲುಷಿತ ನೀರನ್ನು ಕುಡಿಯಬೇಡಿ. ಮಧ್ಯಾಹ್ನದ ವೇಳೆ ಅಡುಗೆಮನೆಯಲ್ಲಿ ಕಿಟಕಿ–ಬಾಗಿಲುಗಳನ್ನು ಮುಚ್ಚಿ ಅಡುಗೆ ಮಾಡಬಾರದು.


ಗರ್ಭಿಣಿ ಮಹಿಳೆಯರು ಆರೋಗ್ಯ ಸಮಸ್ಯೆಯಿಂದ ಬಳಲುವವರು ಮತ್ತು ನಿಗಧಿತ ಸಮಸ್ಯೆಗಳಿಗೆ ಔಷಧಿಗಳನ್ನು ತೆಗೆದುಕೊಳ್ಳುವವರು ವೈದ್ಯರ ಸಲಹೆ ಮೇರೆಗೆ ಮನೆಯ ಹೊರಗಡೆ ಕೆಲಸ ಮಾಡಲು ಆದ್ಯತೆ ನೀಡಬೇಕು. ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ಧೀಕರಿಸದೇ ಇರುವ ಅಥವಾ ಕೆರೆ, ಕುಂಟೆಗಳ ನೀರನ್ನು ನೇರವಾಗಿ ಕುಡಿಯಬಾರದು ಎಂದು ತಿಳಿಸಿದರು.

ದೇಹದಲ್ಲಿ ನಿರ್ಜಲೀಕರಣ ತಡೆಗಟ್ಟಲು ಜಿಲ್ಲೆಯ ಎಲ್ಲಾ ಆರೋಗ್ಯ ಕೇಂದ್ರಗಳಲ್ಲಿ ಓ.ಆರ್.ಎಸ್ ಜೀವಜಲ ಪುಡಿ ಅಗತ್ಯವುಳ್ಳವರಿಗೆ ನೀಡುವ ವ್ಯವಸ್ಥೆ ಮಾಡಲಾಗಿದೆ.

ರೋಗಿಗಳ ಆರೈಕೆಗಾಗಿ, ಐವಿ ಫ್ಲೂಯಿಡ್ಸ್ ಮತ್ತು ಜೀವರಕ್ಷಕ ಔಷಧಗಳ ದಾಸ್ತಾನು ಇಟ್ಟುಕೊಳ್ಳಲಾಗಿದೆ. ಒಂದು ಲೀಟರ್ ನೀರಿಗೆ ಒಂದು ಪ್ಯಾಕೆಟ್ ಓ.ಆರ್.ಎಸ್ ಪುಡಿ ಬೆರೆಸಿ 24 ಗಂಟೆಯೊಳಗೆ ಸೇವಿಸುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮೇಲ್ವಿಚಾರಣಾಧಿಕಾರಿ ಟಿ.ವಿರೂಪಾಕ್ಷಿ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ.ರವಿಕುಮಾರ್, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿ ಎಲ್ಲಪ್ಪ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಲಿಂಗರಾಜ್, ರಾಚೋಟಯ್ಯ ಸ್ವಾಮಿ, ಪ್ರಾಥಮಿಕ ಸುರಕ್ಷಾ ಅಧಿಕಾರಿ ಮಹಾಲಕ್ಷಿ ಸೇರಿದಂತೆ ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಮಾನವ ಹಕ್ಕು ಆಯೋಗದಿಂದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ



- **ಮಲ್ಲಮ್ಮ ನುಡಿ ವಾರ್ತೆ, ವಿಜಯನಗರ**

ರಾಷ್ಟ್ರೀಯ ಮಾನವ ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯ ಆಯೋಗ ವತಿಯಿಂದ ಬಾಬಾ ಸಾಹೇಬ್ ಡಾ.ಬಿ.ಆರ್ ಅಂಬೇಡ್ಕರ್ ಅವರ 135ನೇ ಜಯಂತಿಯ ಕಾರ್ಯಕ್ರಮವನ್ನು ಮಂಗಳವಾರ ನಗರದ ಜಂಬುನಾಥ್ ರಸ್ತೆಯಲ್ಲಿರುವ ಕಚೇರಿಯಲ್ಲಿ ಜಿಲ್ಲಾಧ್ಯಕ್ಷರಾದ ಗುಲಾಮ ದಸ್ತಗಿರಿ ಅವರು ಡಾ.ಬಾಬಾ ಸಾಹೇಬ್ ಭೀಮರಾವ್ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಯಿತು.

ರಾಷ್ಟ್ರೀಯ ಮಾನವ ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯ ಆಯೋಗದ ಕೊಪ್ಪಳ ಜಿಲ್ಲಾ ಅಧ್ಯಕ್ಷ ಬಿ.ವೆಂಕಟರಮಣ, ರಾಜ್ಯ ಜಂಟಿ ಕಾರ್ಯದರ್ಶಿಗಳು, ಸಿ ಅಂಜಿನಪ್ಪ ಹನಸಿ ಹಾಗೂ ಸದಸ್ಯರು ಅತ್ಯಂತ ಶ್ರದ್ಧೆಯಿಂದ ಕಾರ್ಯಕ್ರಮವನ್ನು ಆಯೋಜಿಸಿದ್ದರು.

ಬಳ್ಳಾರಿ ಜಿಲ್ಲಾ ಅಧ್ಯಕ್ಷರು ಈರಮ್ಮ ಮಾತನಾಡಿ ಡಾ.ಅಂಬೇಡ್ಕರ್ ಜಯಂತಿ ಆಚರಣೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ವತಿಯಿಂದ ಆಚರಿಸುತ್ತಿರುವುದು ಖುಷಿಯಾಗುತ್ತದೆ ವಿದೇಶದಲ್ಲಿ ಉನ್ನತ ಮಟ್ಟದ ಪದವಿ ಪಡೆದುಕೊಂಡರು ಭಾರತ ವಿವಿಧ ಧರ್ಮ, ಜಾತಿಗಳನ್ನು ಹೊಂದಿರುವ ದೇಶ. ನಮ್ಮ ದೇಶದ ಘನತೆಗೆ ತಕ್ಕುದಾದ ಸಂವಿಧಾನವನ್ನು ಅಂಬೇಡ್ಕರ್ ನೀಡಿದ್ದಾರೆ. ಇಡೀ ಪ್ರಪಂಚವೇ ಮೆಚ್ಚಿದ ಏಕೈಕ ಸಂವಿಧಾನ ಎಂಬ ಹೆಗ್ಗಳಿಕೆಗೆ ಭಾರತ ಪಾತ್ರವಾಗಿದೆ ಎಂದು ಹೇಳಿದರು. ಅವರ ಕೊಡುಗೆ ಅಪಾರವಾಗಿದೆ ಎಲ್ಲರಿಗೂ ಸಮಾನತೆ ಕೊಟ್ಟಂತ ಮಹಾ ನಾಯಕ ಅಂಬೇಡ್ಕರ್ ಅವರು ಭಾರತ ದೇಶದಲ್ಲಿ ಪ್ರಧಾನಿಯಿಂದ ಹಿಡಿದು ಸರ್ಕಾರಿ ಅಧಿಕಾರಿ ಮಾಡುವಂತಹ ಕೆಲಸ ಹಾಗೂ ಮುಖ್ಯಮಂತ್ರಿ ಆದೇಶ ಹೊರಡಿಸಬೇಕೆಂದರೆ ಸಂವಿಧಾನ ಅಡಿಯಲ್ಲಿ ಹೊರಡಿಸಬೇಕು ಹೆಣ್ಣು ಮಕ್ಕಳಿಗೆ ಶಿಕ್ಷಣ ಇರಲಿಲ್ಲ ಆಗ ಬಾಬಾ ಸಾಹೇಬ್ ಸಮಾನತೆ ಹೊರಡಿಸಿದರು ದಲಿತರಿಗೂ ಅಷ್ಟೇ ಅಲ್ಲ ಸಮಾನತೆ ಕೊಟ್ಟಿದ್ದು ಎಲ್ಲಾ ಜನಾಂಗದವರಿಗೂ ಸಮಾನತೆ ಕೊಟ್ಟಿದ್ದಾರೆ ಎಂದು ಹೇಳಿದರು.

ಈ ಕಾರ್ಯಕ್ರಮವನ್ನು ಉದ್ದೇಶಿಸಿ ಸೋಮಶೇಖರಯ್ಯ ಹೀರೆಮಠ ಮಾತನಾಡಿ, ಡಾ, ಅಂಬೇಡ್ಕರ್ ಅವರ ಚಿಂತನೆಗಳನ್ನು ಪುಸ್ತಕಕ್ಕೆ ಸೀಮಿತಗೊಳಿಸದೇ ಪ್ರತಿಯೊಬ್ಬರೂ ಮೈಗೂಡಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು. ಸಮಾಜದಲ್ಲಿರುವ ಅಸಮಾನತೆಯನ್ನು ಹೋಗಲಾಡಿಸಿ. ಅನಿಷ್ಟ ಪದ್ಧತಿ ಅಸ್ಪೃಷ್ಯತೆ ಎತ್ತಿ ತೋರಿಸಿದವರಲ್ಲಿ ಪ್ರಮುಖರು. ಭಾರತದ ಸಂವಿಧಾನದಲ್ಲಿ ಮೂಲಭೂತ ಹಕ್ಕುಗಳನ್ನು ಪ್ರತಿಪಾದಿಸಿದ್ದಾರೆ ಎಂದು ಬಣ್ಣಿಸಿದರು. ಈ ಸಂದರ್ಭದಲ್ಲಿ ಶೇಕ್ ಬಾಬು ಕೊಪ್ಪಳ ಜಿಲ್ಲಾ ಉಪಾಧ್ಯಕ್ಷರು. ಮಲ್ಲಮ್ಮ ಗಂಗಾವತಿ ತಾಲೂಕು ಉಪಾಧ್ಯಕ್ಷರು ಗೌರಮ್ಮ ಸದಸ್ಯರು. ಮೆಹಬೂಬ್ ಹಿಜಾಜ್. ಮುನೀರ್ ಅಹ್ಮದ್ ಕುಷ್ಟಗಿ ತಾಲೂಕು ಅಧ್ಯಕ್ಷರು ನಾಗರತ್ನ ಅಬ್ದುಲ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಅವಂಬಾವಿ ದೇವಸ್ಥಾನದ ಹಿಂಭಾಗ 22 ಸೆಂಟ್ಸ್ ಸರ್ಕಾರಿ ನಿವೇಶನ ಒತ್ತುವರಿ ತೆರವು

- **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**



ನಗರದ ಸಿರುಗುಪ್ಪ ರಸ್ತೆಯ ಅವಂಬಾವಿಯ ದೇವಸ್ಥಾನದ ಹಿಂಭಾಗದಲ್ಲಿ ಒತ್ತುವರಿ ಮಾಡಿ ಕಾಂಪೌಂಡ್ ಕಟ್ಟಿದ್ದ ರಸ್ತೆ ಸೇರಿದಂತೆ ಸರ್ಕಾರದ 22 ಸೇಂಟ್ ನಿವೇಶನವನ್ನು ಇಂದು ಜಿಲ್ಲಾಡಳಿತ ತೆರವುಗೊಳಿಸಿದೆ.


ಎಡಿಸಿ ಮಹಮ್ಮದ್ ಝುಬೇರ್ ಮತ್ತು ಎಸಿ ರಾಜೇಶ್, ಎಡಿಎಲ್ ಆರ್ ಬಳ್ಳಾರಪ್ಪ ಮೊದಲಾದವರನ್ನು ಒಳಗೊಂಡ ತಂಡ ಇಂದು ಬೆಳಿಗ್ಗೆ ನಗರದ ಸರ್ವೆ ನಂ 266 ಎ/2 ಹಾಗು 274/1 ಗೆ ಸೇರಿದ 22 ಸೇಂಟ್ಸ್ ನಿವೇಶನ ತೆರವುಗೊಳಿಸಿ ಇದು ಸರ್ಕಾರ–ಕ್ಕೆ ಸೇರಿದ್ದು ಎಂದು ಫಲಕ ಹಾಕಲಾಯ್ತು.

ಈ ನಿವೇಶನಕ್ಕೆ ಸುತ್ತಲೂ ಎತ್ತರದ ಕಾಂಪೌಂಡ್ ಕಟ್ಟಿ ಗೇಟು ಅಳವಡಿಸಲಾಗಿತ್ತು. ಎರಡು ಜೆಸಿಬಿಗಳಿಂದ ಪೊಲೀಸ್ ಬಂದೋಬಸ್ತಿನಲ್ಲಿ ಡೆಮಾಲಿಶ್ ಮಾಡಲಾಯ್ತು. ಈ ವೇಳೆ ಯಾರೂ ಇದು ತಮಗೆ ಸೇರಿದ್ದು ಎಂದು ಬರಲಿಲ್ಲ.

ದೇವಸ್ಥಾನದ ಆಡಳಿತ ಮಂಡಳಿಯ ಕೆಲವರು ಇಲ್ಲಿ ಕಲ್ಯಾಣ ಮಂಟಪ ಕಟ್ಟಲು ಯೋಜನೆ ಇತ್ತು ಎಂದು ಎಡಿಸಿಯವರಿಗೆ ಹೇಳಿದರಂತೆ. ಆದರೆ ಆ ಬಗ್ಗೆ ಏನೂ ದಾಖಲೆ ನೀಡದ ಕಾರಣ ತೆರವುಗೊಳಿಸಲಾಯ್ತು. ಇದರ ಸುತ್ತಮುತ್ತ ಕಟ್ಟಿಕೊಂಡಿರುವ 56 ಮನೆಗಳು ಸಹ ಸರ್ಕಾರಿ ನಿವೇಶನ ಒತ್ತುವರಿ ಮಾಡಿಕೊಂಡು ಕಟ್ಟಿರುವುಗಳೇ ಆಗಿವೆ. ಆದರೆ ಅವು ನಿವಾಸಗಳಾಗಿರುವುದರಿಂದ ಅವರು ಬಿ ಖಾತಾದಲ್ಲಿ ಹಕ್ಕು ಪತ್ರ ಪಡೆಯುಬಹುದಾಗಿದೆ ಎನ್ನಲಾಗುತ್ತಿದೆ.

ಈಗ ವಶಪಡಿಸಿಕೊಂಡಿರುವ ಸ್ಥಳ ದೇವಸ್ಥಾನಕ್ಕೆ ಹೊಂದಿಕೊಂಡಂತೆ ಇರುವುದರಿಂದ ಸಾರ್ವಜನಿಕರ ಬಳಕೆಗೆ ಉದ್ಯಾನವನ ಇಲ್ಲವೇ ಇನ್ನಿತರೇ ಸೌಲಭ್ಯಗಳಿಗೆ ಬಳಸಿಕೊಳ್ಳಬಹುದಾಗಿದೆ..

# ಅಶೋಕ, ಶೇಯಾಂಶ ಕೃತಿ ಸಿದ್ಧರಾಮಯ್ಯ ಲೋಕಾರ್ಪಣೆ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,

ಜಿಲ್ಲೆಯ ಹುನಗುಂದ ತಾಲೂಕಿನ ಸೂಳೇಬಾವಿಯ ಲೇಖಕ ಅಶೋಕ ಬಳ್ಳಾ ಹಾಗೂ ಕಮತಗಿಯ ಶೇಯಾಂಶ ಕೋಲಾರ ಅವರ ಕೃತಿಗಳನ್ನು ಬೆಂಗಳೂರು ವಿಧಾನಸೌಧದ ಬ್ಯಾಂಕ್ವೆಟ್ ಹಾಲ್‌ನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಲೋಕಾರ್ಪಣೆಗೊಳಿಸಿದರು.

ಕನ್ನಡ ಅಭಿವೃದ್ಧಿ ಪ್ರಾಧಿಕಾರವು ಕನ್ನಡ ಬಹುಮುಖಿ ಪರಂಪರೆಯನ್ನು ಪ್ರತಿನಿಧಿಸುವ ಕನ್ನಡ ಸಾಮರಸ್ಯ ನೆಲೆಗಳು ಮಾಲಿಕೆಯಲ್ಲಿ ರಾಜ್ಯದ ವಿವಿಧ ಪ್ರದೇಶಗಳ ಸಾಮರಸ್ಯ, ಭ್ರಾತೃತ್ವ, ಸೌಹಾರ್ದತೆಯ ಬದುಕನ್ನು ಸಾರುವ 41 ಕೃತಿಗಳನ್ನು ಹೊರತಂದಿದ್ದು, ಅದರಲ್ಲಿ ಅಶೋಕ ಬಳ್ಳಾ ಅವರ ಅವಿಭಜಿತ ಹುನಗುಂದ ಪರಿಸರದ ಸಾಮರಸ್ಯದ ನೆಲೆಗಳು ಮತ್ತು ಶೇಯಾಂಶ ಕೋಲಾರ ಅವರ ಭಾವೈಕ್ಯದ ಬೆಳಗು ಬಾಗಲಕೋಟೆ ಎಂಬ ಕೃತಿಗಳು ಸೇರಿದ್ದವು.

ಜಿಲ್ಲೆಯ ಭಾವೈಕ್ಯತೆಯ ಬದುಕು, ಸಾಮಾಜಿಕ, ಧಾರ್ಮಿಕ ಸೌಹಾರ್ದತೆಯನ್ನು ಕಟ್ಟಿಕೊಡುವ ನಿಟ್ಟಿನಲ್ಲಿ ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಗಮನ ಸೆಳೆಯುವಲ್ಲಿ ಎರಡೂ ಕೃತಿಗಳು ಯಶಸ್ವಿಯಾಗಿ ಪ್ರಕಟಗೊಂಡಿವೆ. ಈ ವೇಳೆ ಇಬ್ಬರೂ ಲೇಖಕರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಸಚಿವ ಶಿವರಾಜ ತಂಗಡಗಿ ಗೌರವ ಪ್ರತಿಗಳನ್ನು ವಿತರಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಶಾಸಕ ರಿಜ್ವಾನ್ ಅರ್ಷದ್, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಡಾ. ಪುರುಷೋತ್ತಮ ಬಿಳಿಮಲೆ, ಸಾಹಿತಿ ಬರಗೂರು ರಾಮಚಂದ್ರಪ್ಪ, ಶಿಕ್ಷಣ ತಜ್ಞ ಡಾ. ವಿ ಪಿ ನಿರಂಜನಾರಾಧ್ಯ, ಕನ್ನಡ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಡಾ. ಸಂತೋಷ ಹಾನಗಲ್ಲ, ಸದಸ್ಯರು, ಸಂಪಾದಕರು, ಲೇಖಕರು, ಅಧಿಕಾರಿಗಳು ಉಪಸ್ಥಿತರಿದ್ದರು.

# ಮುಸ್ಲಿಂ, ಕುರುಬ ಸಮಾಜಕ್ಕೆ ಅವಮಾನ-ಖಂಡನೆ

ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ಉಪ ಚುನಾವಣೆ ಸಂದರ್ಭದಲ್ಲಿ ನರಗುಂದ ಶಾಸಕ ಸಿ.ಸಿ.ಪಾಟೀಲ ಕುರುಬ ಹಾಗೂ ಮುಸ್ಲಿಂ ಸಮುದಾಯದ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದರು ಎನ್ನುವುದನ್ನು ಅಹಿಂದ ಸಂಘಟನೆಗಳ ಒಕ್ಕೂಟ ಖಂಡಿಸಿದೆ.

ಶುಕ್ರವಾರ ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಒಕ್ಕೂಟದ ರಾಜ್ಯ ಸಂಘಟನಾ ಕಾರ್ಯದರ್ಶಿ ಹನಮಂತಪ್ಪ ಅಪ್ಪಣ್ಣನವರ, ಸಿ.ಸಿ.ಪಾಟೀಲರು ಮಾತನಾಡುವಾಗ ಜವಾಬ್ದಾರಿ ಅರಿತು ಮಾತನಾಡಬೇಕಿತ್ತು. ಇದನ್ನು ಸಂಘಟನೆ ತೀವ್ರವಾಗಿ ಖಂಡಿಸುತ್ತಿದ್ದು, ಎ.20 ರಂದು ನರಗುಂದದ ಶಾಸಕರ ನಿವಾಸದ ಮುಂದೆಯೇ ಬಸವ ಜಯಂತಿ ಆಚರಿಸುವ ಮೂಲಕ ಪ್ರತಿಭಟನೆ ವ್ಯಕ್ತಪಡಿಸುವುದಾಗಿ ತಿಳಿಸಿದರು.

ಎ.20 ಸಾಯಂಕಾಲ 4 ಗಂಟೆಗೆ ನರಗುಂದದಲ್ಲಿರುವ ಶಾಸಕರ ನಿವಾಸದ ಮುಂದೆಯೇ ಬಸವ ಜಯಂತಿ ಆಚರಣೆ ನಡೆಸಲಾಗುವುದು ಎಂದು ತಿಳಿಸಿದ ಹನಮಂತಪ್ಪ, ಸಿ.ಸಿ.ಪಾಟೀಲ ವಿಧಾನಸಭೆಯ ಕಲಾಪದ ವೇಳೆ ಅಶ್ಲೀಲ ವಿಡಿಯೋ ನೋಡಿ ನಗೆಪಾಟಲಿಗೆ ಈಡಾಗಿದ್ದರು. ಹೀಗಾಗಿ ಅವರ ಘನತೆ ಎಂತಹದ್ದು ಎನ್ನುವುದು ಇಡೀ ಸಮಾಜಕ್ಕೆ ತಿಳಿದಿದೆ ಎಂದರು.

ಯಲ್ಲಪ್ಪ ಹೆಗಡೆ ಮಾತನಾಡಿ, ವಿವಿಧತೆಯಿಂದ ಕೂಡಿದ ಭಾರತದ ಸಂಸ್ಕೃತಿಯನ್ನು ಗೌರವಿಸುವುದು ನಮ್ಮ ಧರ್ಮ. ಅದನ್ನು ಮರೆತು ಸಿ.ಸಿ.ಪಾಟೀಲ ಕುರುಬ ಹಾಗೂ ಮುಸ್ಲಿಂ ಸಮಾಜವನ್ನು ಅವಮಾನಿಸಿದ್ದಾರೆ. ಅವರೊಬ್ಬ ಜವಾಬ್ದಾರಿ ವ್ಯಕ್ತಿಯಾಗಿ ಈ ರೀತಿಯ ಹೇಳಿಕೆ ನೀಡುವುದು ಅಕ್ಷಮ್ಯ. ಅದಕ್ಕಾಗಿ ಎ.20 ರಂದು ಅವರ ನಿವಾಸದ ಮುಂದೆಯೇ ಬಸವ ಜಯಂತಿ ಕಾರ್ಯಕ್ರಮ ನಡೆಸಲಾಗುವುದು. ಕಾರ್ಯಕ್ರಮಕ್ಕೆ ಅವರನ್ನೇ ಮುಖ್ಯ ಅತಿಥಿಯಾಗಿ ಬರುವಂತೆ ಆಹ್ವಾನಿಸುತ್ತೇವೆ ಎಂದರು.

ರಾಜಾಭಕ್ಷ ಜಮಾದಾರ, ಶೇಖರ ಕಾಂಬಳೆ, ಧರ್ಮಣ್ಣ ಸುನಗದ, ಬಸಪ್ಪ ದಂಡಿನ ಮತ್ತಿತರರು ಇದ್ದರು.

# ಸ್ಕೌಟ್ಸ್, ಗೈಡ್ಸನಿಂದ ಆತ್ಮಬಲ ಹೆಚ್ಚಳ : ದಳವಾಯಿ



ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ,

ವಿದ್ಯಾರ್ಥಿಗಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಸಹ ಪಾಲ್ಗೊಳ್ಳಲು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಸಹಾಯಕಾರಿಯಾಗಿದೆ. ಪ್ರಸ್ತುತ ದಿನಮಾನಗಳಲ್ಲಿ ವಿದ್ಯಾರ್ಥಿನಿಯರಿಗೆ ಆತ್ಮಸ್ಥೈರ್ಯ ಬಹಳ ಅಗತ್ಯವಾಗಿದ್ದು ಸ್ಕೌಟ್ಸ್ ಮತ್ತು ಗೈಡ್ಸನಿಂದಾ ಆತ್ಮಬಲ ಹೆಚ್ಚಳವಾಗುತ್ತದೆ ಎಂದು ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಕಾರ್ಯದರ್ಶಿ ಎಸ್. ಎಸ್. ದಳವಾಯಿ ಹೇಳಿದರು.

ನಗರದ ಬಿ.ವಿ.ವಿ ಸಂಘದ ಅಕ್ಕಮಹಾದೇವಿ ಮಹಿಳಾ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಸ್ಕೌಟ್ಸ್ ಮತ್ತು ಗೈಡ್ಸ್ ಅಕ್ಕಮಹಾದೇವಿ ರೇಂಜರ್ ಘಟಕದಿಂದ ನಾಲ್ಕು ದಿನಗಳ ಬೇಸಿಗೆ ಶಿಬಿರ ಉದ್ಘಾಟಿಸಿ ಮಾತನಾಡಿದ ಅವರು, ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳಲ್ಲಿ ಸತತವಾಗಿ ಭಾಗವಹಿಸುವುದರಿಂದ ಅವರ ಆತ್ಮಬಲವನ್ನು ವೃದ್ಧಿಸಿಕೊಳ್ಳಲು ಸಹಾಯಕವಾಗುತ್ತದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಭಾರತ ಸ್ಕೌಟ್ಸ್ ಮತ್ತು ಗೈಡ್ಸ ಜಿಲ್ಲಾ ಸಂಘಟನಾ ಶಿಕ್ಷಕ ಎನ್.ಬಿ.ಎಳ್ಳಿಗುತ್ತಿ ಮಾತನಾಡಿ, ರೇಂಜರ್ ವಿದ್ಯಾರ್ಥಿನಿಯರು ಶಿಬಿರದಿಂದ ನಾಯಕತ್ವ, ಸ್ವಾವಲಂಬನೆ ಹಾಗೂ ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬಹುದು ಎಂದರು.

ಬಾಗಲಕೋಟೆ ಜಿಲ್ಲಾ ಭಾರತ ಸ್ಕೌಟ್ಸ್ ಮತ್ತು ಗೈಡ್ಸ ಜಿಲ್ಲಾ ಸಂಘಟಕ ಪಿ.ಕೆ.ಚೌಗುಲೆ ಮಾತನಾಡಿ, ಸೇವಾ ಮನೋಭಾವವನ್ನು ಬೆಳೆಸುವ ಈ ಸಂಸ್ಥೆಯ ಸದುಪಯೋಗವನ್ನು ವಿದ್ಯಾರ್ಥಿಗಳು ಪಡೆದುಕೊಂಡು ತಮ್ಮ ಕೈಲಾದಷ್ಟು ದೇಶಸೇವೆ ಸಲ್ಲಿಸಿ ದೇಶದ ಋಣ ತೀರಿಸಬೇಕು ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯೆ ಎಸ್.ಜೆ.ಒಡೆಯರ್ ಮಾತನಾಡಿ, ಕಲಿಕೆಯಲ್ಲಿ ಸಂಪೂರ್ಣ ತೊಡಗಿಸಿಕೊಂಡಾಗ ಮಾತ್ರ ಅದು ಪರಿಪೂರ್ಣವಾಗುತ್ತದೆ. ಶಿಬಿರದಲ್ಲಿ ಶಿಸ್ತು ಮತ್ತು ಸ್ಕೌಟ್ಸ್ ಹಾಗೂ ಗೈಡ್ಸ್ನ ನಿಯಮಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಈ ಶಿಬಿರದಲ್ಲಿ ಕಲಿತ ಪಾಠಗಳು ನಿಮ್ಮ ಜೀವನ ಶೈಲಿಯಲ್ಲಿ ಸಕಾರಾತ್ಮಕ ಬದಲಾವಣೆ ತರಬೇಕು. ವಿದ್ಯಾರ್ಥಿನಿಯರು ಮನೆ, ಸಮಾಜ ಹಾಗೂ ದೇಶಕ್ಕೆ ಕೀರ್ತಿ ತರುವಂತಾಗಬೇಕು ಎಂದು ಹೇಳಿದರು.

ಸ್ಕೌಟ್ ಗೈಡ್ ಘಟಕದ ರೇಂಜರ್ ಲೀಡರ್ ವಂದನಾ ಸತ್ತಿಗೇರಿ ಹಾಗೂ ಐಕ್ಯೂಎಸಿ ಸಂಯೋಜಕ ಪಿ. ಕೆ. ಚೌಗುಲಾ ಉಪಸ್ಥಿತರಿದ್ದರು.

ರೇಂಜರ್ ವಿದ್ಯಾರ್ಥಿನಿ ಕೀರ್ತಿ ಪಾಟೀಲ ನಿರೂಪಿಸಿದರು. ಉಮಾ ಸಾಲಿಮಠ ವಂದಿಸಿದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಪ್ರಾಧ್ಯಾಪಕರು ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ವಿದ್ಯಾರ್ಥಿನಿಯರು

# ಮಹಾನ್ ಚೇತನ ಜನಿಸಿದ ಪುಣ್ಯದ ದಿನವಿದು:ಡಾ ಹನಸಿ



ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ

: ನಮ್ಮ ನಾಡಿನಲ್ಲಿ ಅನೇಕ ಮಹನೀಯರು ಜನ್ಮ ತಾಳಿದ್ದು ಅದರಲ್ಲಿ ನಮ್ಮೆಲ್ಲರ ಬಾಳಿಗೆ ಬೆಳಕಾಗಿ ಬಂದವರು ಹಾಗೂ ಸಂವಿಧಾನವನ್ನು ನೀಡಿದವರು ಡಾ.ಬಾಬಾ ಸಾಹೇಬ ಅಂಬೇಡ್ಕರ್ ಅವರು ಎಂದು ಪ್ರಾಂಶುಪಾಲರಾದ ಡಾ.ಬಸವರಾಜ ಹನಸಿ ಹೇಳಿದರು.

ನಗರದ ಗದಗ ರಸ್ತೆಯಲ್ಲಿರುವ ಶಿವಪ್ರೀಯಾ ಕಾನೂನು ಮಹಾವಿದ್ಯಾಲಯದಲ್ಲಿ ಜರುಗಿದ ಡಾ.ಬಿ,ಆರ್,ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಆಚರಿಸಿ ಅವರು ಮಾತನಾಡಿದರು.

ಅಂಬೇಡ್ಕರ್ ಕೇವಲ ಒಂದು ಜಾತಿಗೆ ಸಿಮಿತವಾದವರಲ್ಲಾ ಸರ್ವ ಜನಾಂಗಕ್ಕೂ ಮಿಸಲಾತಿಯನ್ನು ಹಕ್ಕುಗಳನ್ನ ಕಲ್ಪಿಸಿದವರು ಅವರು ನಮ್ಮ ದೇಶ ಅಷ್ಟೇ ಅಲ್ಲದೆ ವಿಶ್ವವೇ ಮೆಚ್ಚುವಂತಹ ಜ್ಞಾನ ಭಂಡಾರವನ್ನು ಹೊಂದಿದವರು ಹಾಗೂ ತಮ್ಮ ಜೀವನದಲ್ಲಿ ಅನೇಕ ಕಷ್ಟ ನೋವು ಅವಮಾನವನ್ನು ಅನುಭವಿಸಿದರು ತಮ್ಮ ಛಲ ಬಿಡದೆ ತಾವು ಅಂದುಕೊಂಡಿದ್ದನ್ನ ಸಾಧಿಸಿ ನೊಂದವರ, ಬಡವರ, ಹಿಂದುಳಿದವರ, ಮಹಿಳೆಯರ ಪಾಲಿನ ದೇವರಾದವರು ಎಂದರು.

ಈ ಸಂದರ್ಭದಲ್ಲಿ ಉಪನ್ಯಾಸಕರಾದ ರಜೀಯಾಬೇಗಂ ಕಾನೂನು ವಿದ್ಯಾರ್ಥಿಗಳಾದ ನರೇಂದ್ರ, ರಾಘವೇಂದ್ರ, ಶಿವಕುಮಾರ್, ನಿರುಪಾದಿ, ಬಸವರಾಜ, ಮಧು, ಸುದಾ ಸೇರಿದಂತೆ ಇನ್ನಿತರರು ಹಾಜರಿದ್ದರು.

# ಗ್ರೇಡಿಂಗ್ ಪ್ರಶ್ನಿಸಿದ್ದ ಅರ್ಜಿ ವಜಾ: ಕರವೇ ಜಿಲ್ಲಾಧ್ಯಕ್ಷ ಶಿವರಾಜ ಉಳ್ಳಾಗಡ್ಡಿ ಸ್ವಾಗತ

ಮಲ್ಲಮ್ಮ ನುಡಿವಾರ್ತೆ
ಕೊಪ್ಪಳ

ಎಸ್ ಎಸ್ ಎಲ್ ಸಿ ಪರೀಕ್ಷೆಯಲ್ಲಿ ಹಿಂದಿ ಸೇರಿ ತೃತೀಯ ಭಾಷೆಗೆ ಅಂಕಗಳ ಬದಲಿಗೆ ಗ್ರೇಡಿಂಗ್ ನೀಡಲು ಮುಂದಾಗಿರುವ ಸರ್ಕಾರದ ಪ್ರಸ್ತಾವನೆ ಪ್ರಶ್ನಿಸಿದ್ದ ಅರ್ಜಿ ವಜಾಗೊಳಿಸಿ ಉಚ್ಚ ನ್ಯಾಯಾಲಯವು ಅರ್ಜಿದಾರರಿಗೆ ಒಂದು ಲಕ್ಷ ರೂಪಾಯಿ ದಂಡ ವಿಧಿಸಿರುವ ತೀರ್ಪನ್ನು ಹೆಚ್. ಕರ್ನಾಟಕ ರಕ್ಷಣಾ ವೇದಿಕೆ ಸ್ವಾಗತಿಸುತ್ತದೆ ಎಂದು ಕರವೇ ಜಿಲ್ಲಾಧ್ಯಕ್ಷ ಶಿವರಾಜ ಉಳ್ಳಾಗಡ್ಡಿ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಹಿಂದಿ ಹೇರಿಕೆ ಪರವಾಗಿ ವಾದ ಮಾಡುತ್ತಿದ್ದವರಿಗೆ ಉಚ್ಚ ನ್ಯಾಯಾಲಯ ನೇರವಾಗಿ ಛೀಮಾರಿ ಹಾಕಿದೆ. ಮಾಧ್ಯಮಗಳಲ್ಲಿ ಸಂಪೂರ್ಣ ಹಿಂದಿಯನ್ನು ಕಡೆಗಣಿಸಲಾಗಿದೆ ಎಂಬ ಹೇಳಿಕೆ ಎಲ್ಲೂ ಪ್ರಕಟವಾಗಿಲ್ಲ. ಹೀಗಿದ್ದರೂ ಪೂರ್ವಾಗ್ರಹ ಪೀಡಿತರಾಗಿ ನ್ಯಾಯಾಲಯದಲ್ಲಿ ಅರ್ಜಿದಾರ ಅರ್ಜಿ ಸಲ್ಲಿಸಲಾಗಿದೆ ಎಂದು ಮುಖ್ಯ ನ್ಯಾಯಮೂರ್ತಿ ನೇತೃತ್ವದ ವಿಭಾಗೀಯ ಪೀಠ ಕಿಡಿ ಕಾರಿದ್ದಾರೆ. ಪತ್ರಿಕಾ ಹೇಳಿಕೆ ನೋಡಿ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದೀರಾ? ಎಂದು ಅರ್ಜಿದಾರರನ್ನು ಪ್ರಶ್ನೆ ಮಾಡಿರುವುದು ಸಮಂಜಸವಾಗಿದೆ ಎಂದು ಶಿವರಾಜ ಉಳ್ಳಾಗಡ್ಡಿ ಹೇಳಿದ್ದಾರೆ.

ತೃತೀಯ ಭಾಷೆ ಗ್ರೇಡಿಂಗ್ ವ್ಯವಸ್ಥೆಯನ್ನು ಹಲವು ಪಟ್ಟಭದ್ರ ಹಿತಾಸಕ್ತಿಗಳು ತಮ್ಮ ಮನಸ್ಸಿಗೆ ಬಂದಂತೆ ವ್ಯಾಖ್ಯಾನಿಸಿ ಗೊಂದಲ ಉಂಟು ಮಾಡಿದ್ದರು. ಹಿಂದಿ ಭಾಷೆಯೂ ಸೇರಿ ಮೂರನೆಯ ಭಾಷೆ ಕಲಿಕೆಯನ್ನು ರಾಜ್ಯ ಸರ್ಕಾರ ಹಿಂದೆ ಪಡೆದಿರಲಿಲ್ಲ. ಆದರೆ ಅದನ್ನೇ ತಪ್ಪಾಗಿ ಬಿಂಬಿಸಲಾಗಿತ್ತು ಮತ್ತು ಈ ವಿಷಯವನ್ನು ಉಚ್ಚ ನ್ಯಾಯಾಲಯದವರೆಗೂ ತೆ-



ಗೆದುಕೊಂಡು ಹೋಗಲಾಗಿತ್ತು. ಅರ್ಜಿದಾರರಿಗೆ ಮೊದಲು 50 ಸಾವಿರ ರೂಪಾಯಿಯ ದಂಡ ವಿಧಿಸಿದ್ದ ನ್ಯಾಯಾಲಯ ನಂತರ ಅದನ್ನು 1 ಲಕ್ಷ ರೂಪಾಯಿಗೆ ಏರಿಸಲಾಯಿತು. ಸರ್ಕಾರ ಈ ಕೂಡಲೇ ನಿಯಮಾನುಸಾರ ನಿಯಮಾವಳಿಗಳನ್ನು ರೂಪಿಸಿ ಗ್ರೇಡಿಂಗ್ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ತಿಳಿಸಿದ್ದಾರೆ.

ಒಟ್ಟಿನಲ್ಲಿ, ಹಿಂದಿ ಸಾಮ್ರಾಜ್ಯ ಶಾಹಿಗಳ ಹುನ್ನಾರಗಳಿಗೆ ಕರ್ನಾಟಕ ಸರ್ಕಾರ ಮಣೆ ಹಾಕಬಾರದು. ಕರುನಾಡಿನ ಮಕ್ಕಳ ಹಿತಾಸಕ್ತಿ ಕಾಪಾಡಬೇಕು ಎಂದು ಕೊಪ್ಪಳ ಜಿಲ್ಲೆಯ ಕರವೇ ಜಿಲ್ಲಾಧ್ಯಕ್ಷರಾದ ಶಿವರಾಜ ಉಳ್ಳಾಗಡ್ಡಿ ಅವರು ಸರ್ಕಾರಕ್ಕೆ ಮನವಿ ಮಾಡಿದ್ದಾರೆ.

# ಸಾರಸ್ವತ ಲೋಕಕ್ಕೆ ಮಧುರ ಚೆನ್ನರ ಕೊಡುಗೆ ಅನನ್ಯ : ಗಣೇಶ

ಮಲ್ಲಮ್ಮ ನುಡಿ ವಾರ್ತೆ
ಬಾಗಲಕೋಟೆ

ಆಧುನಿಕ ಸಾಹಿತ್ಯದಲ್ಲಿ ಮಧುರ ಚೆನ್ನರಿಗಿಂತ ಶ್ರೇಷ್ಠ ಸಾಹಿತ್ಯ ಕೃಷಿ ಮಾಡಿದವರು ಬೇರೆ ಯಾರೂ ಇಲ್ಲ. ಕನ್ನಡ ಸಾಹಿತ್ಯದಲ್ಲಿ ಅನುಭಾವದ ಮಧುರತೆಕೇಳಿಬಂದಿದ್ದು ಮಧುರಚೆನ್ನರ ಕಾವ್ಯದಲ್ಲಿ ಎಂದು ರಂಗಕರ್ಮಿ ಗಣೇಶ ಅಮೀನಗಡ ಹೇಳಿದರು.



ಕವಿತಾ ಕಲಾ ತಂಡ ಮೈಸೂರು ಹಾಗೂ ಬಸವೇಶ್ವರ ಕಲಾ ಮಹಾವಿದ್ಯಾಲಯದ ಸಹಯೋಗದಲ್ಲಿ ಬಿ.ವಿ.ವಿ. ಸಂಘದ ನೂತನ ಸಭಾ ಭವನದಲ್ಲಿ ಗುರುವಾರ ಹಮ್ಮಿಕೊಂಡ ಮಧುರಚೆನ್ನ ಅನುಭಾವಿಯೊಂದಿಗೆ ಅನುಸಂಧಾನ ಏಕವ್ಯಕ್ತಿ ನಾಟಕ ಪ್ರದರ್ಶನ ಸಮಾರಂಭದಲ್ಲಿ ಮಾತನಾಡಿದ ಅವರು, ಆಧುನಿಕ ಸಾಹಿತ್ಯದಲ್ಲಿ ಮಧುರಚೆನ್ನರಿಗಿಂತ ಶ್ರೇಷ್ಠ ಸಾಹಿತ್ಯ ಕೃಷಿ ಮಾಡಿದವರು ಬೇರೆ ಯಾರೂ ಇಲ್ಲ ಎಂದರು.

ಕನ್ನಡ ಸಾಹಿತ್ಯದಲ್ಲಿ ಅನುಭಾವದ ಮಧುರತೆಕೇಳಿಬಂದಿದ್ದು ಮಧುರಚೆನ್ನರ ಕಾವ್ಯದಲ್ಲಿ, ಲಿಪಿಶಾಸ್ತ್ರ, ಶಾಸನಶಾಸ್ತ್ರ, ಭಾಷಾ ಶಾಸ್ತ್ರ, ವ್ಯಾಕರಣ ಶಾಸ್ತ್ರ, ಜ್ಯೋತಿಷ್ಯ ಶಾಸ್ತ್ರವನ್ನು ವೈಜ್ಞಾನಿಕ ನೆಲೆಗಟ್ಟಿನಲ್ಲಿ ಅರ್ಥೈಸಿಕೊಂಡು ರಚಿಸಿದ ಕೀರ್ತಿ ಮಧುರಚೆನ್ನರಿಗೆ ಸಲ್ಲುತ್ತದೆ, ಇಪ್ಪತ್ತನೆ ಶತಮಾನದ ಸಾಹಿತ್ಯ ಲೋಕ ಕಂಡ ಮಹಾನ್ ಅಧ್ಯಾತ್ಮಿಕ ಕವಿ, ಮಧುರ ಚೆನ್ನರು ಕೇವಲ 50 ವರ್ಷ ಬದುಕಿದ್ದರೂ ವಿಶ್ವಶ್ರೇಷ್ಠ ಅನುಭಾವ ಸಾಹಿತಿಯಾಗಿ ಅಲೌಕಿಕ ವ್ಯಕ್ತಿಯಾಗಿದ್ದರು, ಆತ್ಮಕಥೆಗೆ ಕಾದಂಬರಿಯ ರೂಪ ಕೊಟ್ಟ ಶ್ರೇಯಸ್ಸು ಮಧುರಚೆನ್ನರಿಗೆ ಸಲ್ಲುತ್ತದೆ. ಸಾರಸ್ವತ ಲೋಕಕ್ಕೆ ಮಧುರಚೆನ್ನರು ನೀಡಿದ ಕೊಡುಗೆ ಅನುಪಮ. ಅನೇಕ ಪ್ರಕಾರಗಳಲ್ಲಿ ಸಾಹಿತ್ಯ ಮಾಡಿದ ಮಧುರಚೆನ್ನರು ಒಬ್ಬ ಶ್ರೇಷ್ಠ ಅನುಭಾವಿ. ಕಾದಂಬರಿ ರೂಪದಲ್ಲಿ ಮೂಡಿ ಬಂದಿರುವ ಅವರ ಆತ್ಮಕಥೆ ಇದಕ್ಕೆ ಉತ್ತಮ ನಿದರ್ಶನವಾಗಿದೆ ಎಂದು ಗಣೇಶ ಹೇಳಿದರು. ಬಿವಿವಿ ಸಂಘದ ಆಡಳಿತಾಧಿಕಾರಿ ಡಾ.ವಿಜಯಕುಮಾರ ಕಟಗಿಹಳ್ಳಿಮಠ ಮಾತನಾಡಿ, ಮಧುರ ಚೆನ್ನರ ಬದುಕಿನ ಇನ್ನೊಂದು ಆಯಾಮವೆಂದರೆ ಅವರ ಆಧ್ಯಾತ್ಮಿಕ ಸಾಧನೆ. ತಮ್ಮ ಹನ್ನೆರಡನೆಯ ವಯಸ್ಸಿನ ಸುಮಾರಿಗೆ ದೇವರನ್ನು ಕಾಣುವ ಹಂಬಲವುಳ್ಳವರಾದರು. ಹದಿನಾಲ್ಕು ವರ್ಷಗಳ ಸಾಧನೆಯಲ್ಲಿ ಹೋರಾಡಿ ಅವನನ್ನು ಅರಿತುಕೊಂಡರು. ಅವರ ಆಧ್ಯಾತ್ಮಿಕ ಸಾಧನೆಯ ಕಥನ ಅವರ ಗದ್ಯಕೃತಿಗಳಾದ 'ಪೂರ್ವರಂಗ', 'ಕಾಳರಾತ್ರಿ', 'ಬೆಳಗು' ಮತ್ತು 'ಆತ್ಮಸಂಶೋಧನೆ' ಇವುಗಳಲ್ಲಿ ಮನೋಜ್ಞವಾಗಿ ಪ್ರಕಟಗೊಂಡಿದೆ ಎಂದರು. ಬಿ.ಆರ್ ಬನಸೋಡೆ ಅವರು ತಮ್ಮ ಸಾಂಧರ್ಬಿಕ ಹಾಡುಗಳನ್ನು ಹಾಡುವ ಮೂಲಕ ಏಕವ್ಯಕ್ತಿ ನಾಟಕ ಪ್ರದರ್ಶನಕ್ಕೆ ಜೀವ ತುಂಬಿದರು. ಬಿ.ವಿ.ವಿ.ಸಂಘದ ಆಡಳಿತಾಧಿಕಾರಿ ವಿ.ಆರ್.ಶಿರೋಳ, ಪ್ರಸಾರ ರಂಗದ ವಿಭಾಗದ ನಿರ್ದೇಶಕ ಪಿ.ಎನ್.ಶಿಂಪಿ, ಕಾಲೇಜಿನ ಪ್ರಾಚಾರ್ಯ ಎಸ್. ಆರ್.ಮೂಗನೂರಮಠ ಸೇರಿದಂತೆ ಅನೇಕರು ಇದ್ದರು.

# ಹೊಸಪೇಟೆ | ಪಡಿತರ ಅಕ್ಕಿ ಅಕ್ರಮ ಸಾಗಾಟ : 13 ಕ್ವಿಂಟಾಲ್ ಅಕ್ಕಿ ವಶ



ಮಲ್ಲಮ್ಮ ನುಡಿ ವಾರ್ತೆ ವಿಜಯನಗರ (ಹೊಸಪೇಟೆ)

ರಾಜ್ಯದಲ್ಲಿ ಅನ್ನಭಾಗ್ಯ ಅಕ್ಕಿಯ ಕಾಳಸಂತೆಯ ಮಾರಾಟ ಹೆಚ್ಚಾಗಿದ್ದು, ಈ ಅಕ್ರಮವು ವಿಜಯನಗರ ಜಿಲ್ಲೆಯಲ್ಲೂ ಮುಂದುವರೆದಿದ್ದು ಆಹಾರ ನಿರೀಕ್ಷಕರು ತಾಲೂಕು ಕಛೇರಿ ಹೊಸಪೇಟೆ ರವರು ಏಪ್ರಿಲ್ 14 ರಂದು ನೀಡಿದ ದೂರಿನ ಮೇರೆಗೆ, ಸಂಡೂರು ರಸ್ತೆ ಎಲ್. ಎಫ್.ಎಸ್.ಶಾಲೆಯ ಪಕ್ಕದ ಸಾರ್ವಜನಿಕ ಸ್ಥಳದಲ್ಲಿ, ಯಾರೋ ಅಕ್ರಮವಾಗಿ ಪಡಿತರ 36 ಅಕ್ಕಿ ಚೀಲಗಳಲ್ಲಿ ಸಂಗ್ರಹಿಸಿದ್ದ ಒಟ್ಟು 1.368 ಕೆ.ಜಿ ಪಡಿತರ ಅಕ್ಕಿ (ಅಂದಾಜು ಮೊತ್ತ ರೂ. 30944/-) ಅಕ್ರಮವಾಗಿ ಸಾಗಿಸುತ್ತಿದ್ದ ಅಕ್ಕಿಯನ್ನು ವಶ ಪಡಿಸಿಕೊಳ್ಳಲಾಗಿದೆ. ಇದರೊಂದಿಗೆ ಈ ಅಕ್ಕಿಯನ್ನು ಸಾಗಿಸಲು ಬಳಸುತ್ತಿದ್ದ ವಾಹನಗಳನ್ನು ಸಹ ಜಪ್ತಿ ಮಾಡಲಾಗಿದ್ದು, ಆಹಾರ ಇಲಾಖೆ ಅಧಿಕಾರಿಗಳು ಹಾಗೂ ಬಡಾವಣೆ ಪೊಲೀಸರು ವಶಪಡಿಸಿಕೊಂಡು ಅಗತ್ಯ ವಸ್ತುಗಳ ಕಾಯ್ದೆ ಪ್ರಕರಣ ದಾಖಲಾಗಿದೆ ಮುಂದಿನ ತನಿಖೆ ಕೈಗೊಂಡಿರುತ್ತದೆ.

# ಗುಣಾತ್ಮಕ ಶಿಕ್ಷಣ ನೀಡುವಂತೆ ಆಗ್ರಹಿಸಿ ಅಹೋರಾತ್ರಿ ಧರಣಿ ಸತ್ಯಾಗ್ರಹ

ಮಲ್ಲಮ್ಮ ನುಡಿವಾರ್ತೆ ವಿಜಯನಗರ (ಹೊಸಪೇಟೆ)

ಗುಣಾತ್ಮಕ ಶಿಕ್ಷಣ ನೀಡುವಂತೆ ಆಗ್ರಹಿಸಿ ಅಂಬೇಡ್ಕರ್ ಜಯಂತಿ ದಿನದಂದೇ ಮಂಗಳವಾರ ಸರಕಾರಿ ಶಾಲಾ ಅಭಿವೃದ್ಧಿ ವೇದಿಕೆಯಿಂದ ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಿ, ಬುಧವಾರ ಜಿಲ್ಲಾಧಿಕಾರಿಗೆ ಮನವಿ ಪತ್ರ ಸಲ್ಲಿಸಲಾಯಿತು

ನಗರದ ಜಿಲ್ಲಾಧಿಕಾರಿ ಕಚೇರಿ ಮುಂಭಾಗದ ಆವರಣದಲ್ಲಿ ಧರಣಿ ಆರಂಭಿಸಿದ ಪ್ರತಿಭಟನಾಕಾರರು, ಧರಣಿ ನಡೆದಿದ್ದರು. ವಯಸ್ಸಾದ ಮಹಿಳೆಯರು ಕೂಡ ಧರಣಿಯಲ್ಲಿ ಪಾಲ್ಗೊಂಡು, ತಮ್ಮ ಬೇಡಿಕೆ ಈಡೇರಿಸುವಂತೆ ಆಗ್ರಹಿಸಿದರು.

ಜಿಲ್ಲಾಧಿಕಾರಿ ಕವಿತಾ ಎಸ್ ಮನ್ನಿಕೇರಿ ಮೂಲಕ ಮುಖ್ಯಮಂತ್ರಿಗೆ ಸಲ್ಲಿಸಿದ ಮನವಿಯಲ್ಲಿ, ಬಾಬಾಸಾಹೇಬ್ ಅಂಬೇಡ್ಕರ್ ಅವರ ಶಿಕ್ಷಣ, ಸಂಘಟನೆ, ಹೋರಾಟ ಆಶಯದಂತೆ ಪ್ರತಿಯೊಬ್ಬರಿಗೂ ಶಿಕ್ಷಣ ಸಿಗಬೇಕು. ಆದರೆ ನಮ್ಮ ರಾಜ್ಯದಲ್ಲಿ ಅದು ಸಾಧ್ಯವಾಗದ ಕಾರಣ ಶಿಕ್ಷಣ ಹಕ್ಕು ಕಾಯಿದೆ ಪ್ರಕಾರ ಗುಣಾತ್ಮಕ ಶಿಕ್ಷಣಕ್ಕಾಗಿ ಅಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಗಿದೆ.

ನಮ್ಮ ದೇಶದಲ್ಲಿ ಶಿಕ್ಷಣದ ಹಕ್ಕು ಕಾಯಿದೆ ಜಾರಿಯಾಗಿ 17 ವರ್ಷಗಳಾಯಿತು. ಆದರೂ ಸಹ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗುತ್ತಿಲ್ಲ. ನಮ್ಮ ವೇದಿಕೆಯು ಕಳೆದ 10 ವರ್ಷಗಳಿಂದ ಸತತವಾಗಿ ಹೋರಾಟಗಳನ್ನು ಮಾಡುತ್ತಲೇ ಬರುತ್ತಿದ್ದರೂ ಸಹ ಸರ್ಕಾರ ಇದರ ಬಗ್ಗೆ ತುಂಬಾ ನಿಷ್ಕಾಳಜಿ ವಹಿಸುತ್ತಿದೆ.



ಇದರಿಂದಾಗಿ ಸರ್ಕಾರಿ ಶಾಲೆಗಳಲ್ಲಿ ಮಕ್ಕಳ ಸಂಖ್ಯೆ ಕಡಿಮೆಯಾಗುತ್ತಿದೆ. ಕೇವಲ ಬಡವರು, ದಲಿತ ಮತ್ತು ಬಡ ಕುಟುಂಬಗಳ ಹೆಣ್ಣುಮಕ್ಕಳು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಶಾಲೆಗಳಲ್ಲಿ ಓದುತ್ತಿದ್ದಾರೆ. ಇಂತಹ ಮಕ್ಕಳ ಭವಿಷ್ಯದ ಬಗ್ಗೆ ಸರ್ಕಾರದ ಧೋರಣೆ ಸರಿಯಿಲ್ಲ ಎಂದು ಆಕ್ರೋಶ ಹೊರಹಾಕಲಾಗಿದೆ

ಇಡೀ ರಾಜ್ಯದಲ್ಲಿ ಸುಮಾರು 62,420 ಸಾವಿರಕ್ಕಿಂತ ಹೆಚ್ಚು ಶಿಕ್ಷಕರ ಹುದ್ದೆಗಳು ಖಾಲಿ ಇವೆ. ಶಿಕ್ಷಣ ಹಕ್ಕು ಕಾಯಿದೆ ಪ್ರಕಾರ 1 ರಿಂದ 5ನೆ ತರಗತಿಯವರೆಗೆ ನೆರೆ ಹೊರೆ ಶಾಲೆ ಇರಬೇಕು ಎಂಬ ನಿಯಮವಿದೆ. 6 ರಿಂದ 8ನೇ ತರಗತಿಯವರೆಗೆ 3 ಕಿ.ಮೀ ಒಳಗಡೆ ಶಾಲೆಯಿರಬೇಕು ಎಂಬ ನಿಯಮವಿದೆ. ಸರ್ಕಾರ ಈ ನಿಯಮವನ್ನು ಉಲ್ಲಂಘನೆ ಮಾಡದೇ ಕಡ್ಡಾಯವಾಗಿ ಪಾಲಿಸಬೇಕು ಎಂದು ಒತ್ತಾಯಿಸಲಾಗಿದೆ

ಶಿಕ್ಷಣ ಹಕ್ಕು ಕಾಯಿದೆ ಜಾರಿಯಾಗಿ 17 ವರ್ಷಗಳಾಯಿತು. ನಮ್ಮ ಶಾಲೆಗಳಲ್ಲಿ ಇಂದಿಗೂ ಸಹ ಕುಡಿಯುವ ನೀರು, ಶೌಚಾಲಯ ಹಾಗೂ ಆಟದ ಮೈದಾನ ಇತ್ಯಾದಿ ಮೂಲಭೂತ ಸೌಲಭ್ಯಗಳ ಕೊರತೆ ತುಂಬಾ ಎದ್ದು ಕಾಣುತ್ತಿದೆ. ಎಸೆಸ್ಸೆಲ್ಸಿ ಪರೀಕ್ಷೆ ಫಲಿತಾಂಶ ಹೆಚ್ಚಿಸಲು ಅಂಕಗಳನ್ನು ಕಡಿಮೆ ಮಾಡಿ ಶೇ.13 ರಷ್ಟು ಅಂಕಗಳ ನಿರ್ದೇಶನ ಮಾಡುವುದು ಸರಿಯಲ್ಲ ಎಂದು ತಿಳಿಸಲಾಗಿದೆ. ಈ ಸಂದರ್ಭದಲ್ಲಿ ಸಿ. ನಿಂಗಮ್ಮ ಸಿ.ಸುಧಾ. ಜಿ.ನೀಲಮ್ಮ, ಜಿ ಯಶೋಧ, ನೂರ್ ಜಾನ್, ಅಕ್ಕಮಹಾದೇವಿ, ಎ.ರತ್ನಮ್ಮ, ಬಿ.ನಾಗಮ್ಮ, ಬಿ.ಉಷಾ, ಯಂಕಮ್ಮ ಲಕ್ಷ್ಮಿ ನಿರ್ಮಲ, ಅನಿತಾ, ಜ್ಯೋತಿ ನಸ್ರೀನ್, ಉಪಸ್ಥಿತರಿದ್ದರು.

# ಎಥೆನಾಲ್ ಸಾಗಿಸುತ್ತಿದ್ದ ಟ್ಯಾಂಕರ್ ಮುಗುಚಿ ಬಿದ್ದು ಬೆಂಕಿಯಲ್ಲಿ ಭಸ್ಮ

ಅಂಕೋಲಾ :ಎಥೆನಾಲ್ ಸಾಗಿಸುತ್ತಿದ್ದ ಟ್ಯಾಂಕರ್ ಲಾರಿಯ ಚಾಲಕನ ನಿಯಂತ್ರಣ ತಪ್ಪಿ ರಸ್ತೆಯಲ್ಲಿ ಪಲ್ಟಿಯಾದ ಪರಿಣಾಮ ಟ್ಯಾಂಕರ್ ಸ್ಫೋಟಿಸಿ ಬೆಂಕಿ ಹತ್ತಿ ಉರಿದಿದ್ದ ಘಟನೆ ತಾಲೂಕಿನ ಕಂಚಿನಬಾಗಿಲ ಬಳಿ ನಡೆದಿದೆ. ಬಾಗಲಕೋಟೆ ಮೂಲದ ಉದ್ಯಮಿಯೊಬ್ಬರಿಗೆ ಸಂಬಂಧಿಸಿದ ಲಾರಿ ಎಂದು ತಿಳಿದು ಬಂದಿದೆ. ಯಲ್ಲಾಪುರ ಮಾರ್ಗವಾಗಿ ಅಂಕೋಲಾ ಕಡೆಗೆ ಬರುತ್ತಿದ್ದ ಸಂದರ್ಭದಲ್ಲಿ ಈ ಅವಘಡ ನಡೆದಿದೆ. ಘಟನೆಯಲ್ಲಿ ಲಾರಿಯ ಚಾಲಕನಿಗೆ



ಗಂಭೀರ ಗಾಯವಾಗಿದ್ದು, ಸರ್ಕಾರಿ ಆಸ್ಪತ್ರೆಗೆ ಸಾಗಿಸಲಾಗಿದೆ. ಅಲ್ಲಿಂದ ಹೆಚ್ಚಿನ ಚಿಕಿತ್ಸೆಗಾಗಿ ಕಾರವಾರಕ್ಕೆ ಸಾಗಿಸಲಾಗಿದೆ.

ಅರ್ಧಗಂಟೆಗೂ

ಹೆಚ್ಚು ಕಾಲ ಎಥೇನಾಲ್ ತುಂಬಿದ ಲಾರಿ ಹೊತ್ತಿ ಉರಿಯುತ್ತಿದ್ದು, ಅಗ್ನಿಶಾಮಕ ದಳದವರು ಬೆಂಕಿ ನಂದಿಸುವ ಕಾರ್ಯ-ಕ್ಕೆ ಮುಂದಾಗಿದ್ದರು. ತಾತ್ಕಾಲಿಕವಾಗಿ ರಾಷ್ಟ್ರೀಯ ಹೆದ್ದಾರಿಯ ಅಂಕೋಲಾ ಯಲ್ಲಾಪುರ ಮಾರ್ಗದ ರಸ್ತೆ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ರಾಷ್ಟ್ರೀಯ ಹೆದ್ದಾರಿಯ ಅಂಚಿನಲ್ಲಿರುವ ಅರಣ್ಯ ಪ್ರದೇಶಕ್ಕೂ ಬೆಂಕಿ ಆವರಿಸಿದೆ.

ಡಿವೈಎಸ್ಪಿ ಗಿರೀಶ ಎಸ್.ವಿ., ತಹಸೀಲ್ದಾಡಿ ನಿಶ್ಚಲ್ ನರೋನ, ತಾಪಂ.ಇಒ ರಾಮು ಗುನಗಿ, ಪಿಎಸ್ಐ ಗುರುನಾಥ ಹಾದಿಮನಿ, ಲಲಿತಾ ರಜಪೂತ್, ಎಎಸ್ಐ ಜ್ಞಾನೇಶ್ವರ ಹರಿಕಂತ್ರ, ಪೊಲೀಸ್ ಮತ್ತು ಕಂದಾಯ ಇಲಾಖೆಯ ಸಿಬ್ಬಂದಿಗಳು ಕಾರ್ಯಾಚರಣೆಯಲ್ಲಿ ಪಾಲ್ಗೊಂಡಿದ್ದರು.



ಅಂತಾರಾಷ್ಟ್ರೀಯ ಪ್ರಮಾಣಪತ್ರ ಪಡೆದ ದೇಶದ ಪ್ರಥಮ ಜಲಮಂಡಳಿ ಎನ್ನುವ ಹೆಗ್ಗಳಿಕೆಗೆ ಪಾತ್ರವಾಗಿರುವ ಬೆಂಗಳೂರು ಜಲಮಂಡಳಿಯ ಅಧ್ಯಕ್ಷ ಡಾ. ವಿ. ರಾಮ್ ಪ್ರಸಾತ್ ಮನೋಹರ್ ನೇತೃತ್ವದ ತಂಡ ಡಿಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಕುಮಾರಪಾರ್ಕ್ ನ ಸರಕಾರಿ ನಿವಾಸದಲ್ಲಿ ಶುಕ್ರವಾರ ಭೇಟಿಯಾಗಿ ಪ್ರಮಾಣಪತ್ರ ಹಸ್ತಾಂತರ ಮಾಡಿ, ಧನ್ಯವಾದ ಸಮರ್ಪಿಸಿತು. ಜಲಮಂಡಳಿಯ ಮುಖ್ಯ ಆಡಳಿತಾಧಿಕಾರಿ ಮದನ್ ಮೋಹನ್, ಪ್ರಧಾನ ಮುಖ್ಯ ಅಭಿಯಂತರ ಬಿ.ಎಸ್. ದಲಾಯತ್, ಮುಖ್ಯ ಅಭಿಯಂತರ ಡಾ. ರಾಜೀವ್, ರಾಜಶೇಖರ್ ಮತ್ತಿತರರು ಇದ್ದರು.

## ಸಂಘಟಿತ ಲವ್ ಜಿಹಾದ್ ಪ್ರಕರಣ

**ಬೆಂಗಳೂರು:** ಮಹಾರಾಷ್ಟ್ರದ ನಾಸಿಕ್‌ನ ಟಿಸಿಎಸ್‌ನಲ್ಲಿ ನಡೆದ ಸಂಘಟಿತ ಲವ್ ಜಿಹಾದ್ ಪ್ರಕರಣ ಬೆಳಕಿಗೆ ಬಂದ ನಂತರ ಇಂತಹ ಸಂಘಟಿತ ಲವ್ ಜಿಹಾದ್ ಜಾಲ ಕರ್ನಾಟಕದ ಕಾರ್ಪೋರೇಟ್ ಕಂಪನಿಗಳಲ್ಲೂ ವಿಸ್ತರಿಸಿರುವ ಸಾಧ್ಯತೆ ಇದೆ. ಆದ್ದರಿಂದ ಇಲ್ಲೂ ಒಂದು ಎಸ್‌ಐಟಿ ರಚಿಸಿ ತನಿಖೆಯಾಗಬೇಕು ಎಂದು ಬಿಜೆಪಿ ಮಾಜಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಹಾಗೂ ವಿಧಾನ ಪರಿಷತ್ ಸದಸ್ಯ ಸಿ.ಟಿ.ರವಿ ಅವರು ಆಗ್ರಹಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ನಾಸಿಕ್ ಪ್ರಕರಣ ಬಹಳ ಗಂಭೀರವಾಗಿದ್ದು, ಕರ್ನಾಟಕದಲ್ಲೂ ಟಿಸಿಎಸ್ ರೀತಿಯ ಅನೇಕ ಬಹುರಾಷ್ಟ್ರೀಯ ಕಂಪೆನಿಗಳಿವೆ. ಉದ್ಯೋಗಕ್ಕಾಗಿ ಬರುವ ಅಸಹಾಯಕ ಹೆಣ್ಣು ಮಕ್ಕಳ ಶೋಷಣೆ, ಲವ್ ಜಿಹಾದ್‌ನಂತಹ ಮತಾಂತರದ ಜಾಲ ಇಲ್ಲೂ ಇರುವ ಸಾಧ್ಯತೆ ಇದೆ. ಆದ್ದರಿಂದ ಇವುಗಳ ಕುರಿತು ಸಮಗ್ರ ತನಿಖೆ ಆಗಬೇಕು ಎಂದರು.

ಹಾಲಿ ಅಥವಾ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ಎಸ್‌ಐಟಿ ರಚಿಸಿ ಸಮಗ್ರ ತನಿಖೆ ಮಾಡಬೇಕು. ಆಗ ಸತ್ಯಾಸತ್ಯತೆ ಹೊರಬರಲಿದೆ. ಮತಾಂತರ ಮತ್ತು ಮತಾಂತರದ ನಂತರ ಇಡೀ ದೇಶವನ್ನೇ ದುರ್ಬಲಗೊಳಿಸುವ ಸಂಚು ತಿಳಿಯಲಿದೆ. ಮುಖ್ಯಮಂತ್ರಿಗಳು ಈ ಬಗ್ಗೆ ಗಂಭೀರವಾಗಿ ಪರಿಗಣಿಸಬೇಕು ಎಂದು ಆಗ್ರಹಪೂರ್ವಕ ಮನವಿ ಮಾಡಿದರು. ನಾಸಿಕ್ ಪೊಲೀಸರು ಒಳ್ಳೆಯ ಕೆಲಸ ಮಾಡಿದ್ದಾರೆ. ಪ್ರಕರಣವನ್ನು ಲಘುವಾಗಿ ಪರಿಗಣಿಸದೆ ವಿಶೇಷ ಕಾರ್ಯಪಡೆ ಮಾಡಿ ಉದ್ಯೋಗಿಗಳಾಗಿ ಸೇರಿ ವ್ಯವಸ್ಥಿತ ಜಾಲವನ್ನು ಬಯಲಿಗೆಳೆದರು. ಈ ರೀತಿ ಸಂಘಟಿತ ಜಾಲ ವಿದೇಶಿ ನೆಟ್‌ವರ್ಕ್ ಹೊಂದಿದೆ ಎಂಬ ಪ್ರಾಥಮಿಕ ವರದಿ ಇದೆ. ಇದು ನಾಸಿಕ್‌ಗೆ ಮಾತ್ರ ಸೀಮಿತವೇ ಅಥವಾ ದೇಶದ ಉದ್ದಗಲಕ್ಕೂ ಹರಡಿದೆಯೇ ಎಂಬ ಬಗ್ಗೆ ತನಿಖೆಯ ಅವಶ್ಯಕತೆ ಇದೆ ಎಂದರು. ಸರ್ಕಾರ ಈ ನಿಟ್ಟಿನಲ್ಲಿ ಕೈ ಕಟ್ಟಿ ಕೂರಬಾರದು. ಏಕೆಂದರೆ ಸರ್ಕಾರಕ್ಕೆ ಜವಾಬ್ದಾರಿ ಇದೆ. ಈ ಲವ್ ಜಿಹಾದ್ ಪ್ರಕರಣ ಕೇವಲ ನಾಸಿಕ್ ಮತ್ತು ಟಿಸಿಎಸ್ ಗೆ ಸೀಮಿತವಾಗಿದೆ ಎಂದು ಭಾವಿಸಬಾರದು. ಕರ್ನಾಟಕದ ಕಂಪನಿಗಳಲ್ಲಿ ರಾತ್ರಿ, ಹಗಲು ಕೆಲಸ ಮಾಡುವ ಹೆಣ್ಣು ಮಕ್ಕಳು ಇದ್ದಾರೆ. ಉದ್ಯೋಗದ ಅನಿವಾರ್ಯತೆ ನಡುವೆ ಇಂತಹ ಜಾಲದಲ್ಲಿ ಸಿಕ್ಕಿ ಬೀಳುವ ಅಸಹಾಯಕತೆ ಇದೆ ಎಂದರು. ಕರ್ನಾಟಕದಲ್ಲಿ ಮೂರು ವರ್ಷದಲ್ಲಿ 44,826 ವಯಸ್ಕ ಮಹಿಳೆಯರು, 6894 ಬಾಲಕಿಯರು ನಾಪತ್ತೆಯಾಗಿದ್ದಾರೆ. ಬೆಂಗಳೂರಿನಲ್ಲಿ 2290 ಹೆಣ್ಣು ಮಕ್ಕಳು ಕಾಣೆಯಾಗಿದ್ದಾರೆ. ಲವ್ ಜಿಹಾದ್ ಎಂಬುದು ವ್ಯಕ್ತಿ ವ್ಯಕ್ತಿಗಳ ನಡುವಿನ ಸಮಸ್ಯೆಯಾಗಿ ಈಗ ಉಳಿದಿಲ್ಲ. ಈ ವ್ಯವಸ್ಥಿತ ಜಾಲಕ್ಕೆ ತರಬೇತಿ, ಹಣ ಪೂರೈಕೆ, ಬಲೆಗೆ ಬಿದ್ದವರ ಮತಾಂತರಗೊಳಿಸುವುದು ಎಲ್ಲವೂ ಹಲವು ಪ್ರಕರಣದಲ್ಲಿ ಬೆಳಕಿಗೆ ಬಂದಿದೆ ಎಂದು ವಿವರಿಸಿದರು. ಸಂಘಟಿತ ಅಪರಾಧವನ್ನು ನ್ಯಾಯಾಲಯಗಳೂ ಗಂಭೀರವಾಗಿ ಪರಿಗಣಿಸಬೇಕು. ಏಕೆಂದರೆ ಇಂತಹ ಕೃತ್ಯಗಳ ಹಿಂದೆ ಕುತಂತ್ರ ಇದೆ. ಮತಾಂತರದ ಷಡ್ಯಂತ್ರ ಇದೆ. ಹಿಂದೂ ಹೆಣ್ಣು ಮಕ್ಕಳನ್ನೇ ಗುರಿಯಾಗಿಸುವ ಜಾಲ ಇದೆ. ವಿದೇಶಿ ಮತೀಯ ಶಕ್ತಿಗಳ ಜೊತೆಗೂ ಕೈ ಜೋಡಿಸಿದ್ದಾರೆ ಅನ್ನೋದನ್ನು ಹಗುರವಾಗಿ ಪರಿಗಣಿಸಬಾರದು ಎಂದರು.

## ದ್ವಿತೀಯ ಪಿಯುಸಿಯಲ್ಲಿ ಪ್ರಶಾಂತ್ ಪ್ರಥಮ ದರ್ಜೆಯಲ್ಲಿ ತೇರ್ಗಡೆ



**ಹುಣಸೂರು:** ನಗರದ ಚಿಕ್ಕಹುಣಸೂರು ಬಾಚಳ್ಳಿ ರಸ್ತೆಯ ಡಾ. ಬಿ.ಆರ್. ಅಂಬೇಡ್ಕರ್ ನಗರದ ವಾಸಿಗಳಾದ ಅಲೆಮಾರಿ ದೊಂಬರ ಸಮಾಜದ ಶೇಖರ, ವಸಂತ ದಂಪತಿಗಳ ಮಗನಾದ ಪ್ರಶಾಂತ್ ಎಂಬುವನು ದ್ವಿತೀಯ ಪಿಯುಸಿಯಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿರುವುದಕ್ಕೆ ಹುಣಸೂರು ಶಾಸಕರಾದ ಜಿ.ಡಿ. ಹರೀಶ್ಗೌಡ ರವರು ದಿನಾಂಕ: 16-04-2026ರ ಗುರುವಾರ ಶಾಸಕರ ಕಛೇರಿಯ ಎದುರು ಅಭಿನಂದಿಸಿ ಮಾತನಾಡಿ ಅಲೆಮಾರಿ ಸಮುದಾಯಗಳು ಶಿಕ್ಷಣದಿಂದ ವಂಚಿತರಾಗುತ್ತಿರುವ ಈ ಸಂದರ್ಭದಲ್ಲಿ ಅಂಬೇಡ್ಕರ್ ನಗರದ ಪ್ರಶಾಂತ್ ಎಂಬ ವಿದ್ಯಾರ್ಥಿಯು ದ್ವಿತೀಯ ಪಿಯುಸಿಯಲ್ಲಿ ಪಿ.ಸಿ.ಎಂ.ಬಿ ವಿಷಯದಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾಗಿರುವುದನ್ನು ನಾನು ಅಭಿನಂದಿಸುತ್ತೇನೆ. ಈ ವಿದ್ಯಾರ್ಥಿಯು ನೀಟ್ ಕೋಚಿಂಗ್ ಪಡೆದು ಎಂ.ಬಿ.ಬಿ.ಎಸ್ ಓದಿ ವೈದ್ಯರಾಗಿ ಬಡ ಜನರಿಗೆ ಸೇವೆ ಸಲ್ಲಿಸುವ ಆಸಕ್ತಿ ಇರುವುದರಿಂದ ಈ ವಿದ್ಯಾರ್ಥಿಯು ನೀಟ್ ಕೋಚಿಂಗ್ ಪಡೆಯಲು ಹಣಕಾಸಿನ ನೆರವನ್ನು ನಾನು ವೈಯಕ್ತಿಕವಾಗಿ ಮಾಡುತ್ತೇನೆ ಎಂದು ಹೇಳಿ ಈತನ ವಿದ್ಯಾಭ್ಯಾಸಕ್ಕೆ ಬೆನ್ನೆಲುಬಾಗಿ ಸಹಕಾರ ಮಾಡಿಕೊಂಡು ಬರುತ್ತಿರುವ ದಸಂಸದ ನಿಂಗರಾಜ್ ಮಲ್ಲಾಡಿ ಹಾಗೂ ಅವರ ಸ್ನೇಹಿತರಿಗೆ ಮತ್ತು ಪ್ರಶಾಂತನ ತಂದೆ ತಾಯಿಯರಿಗೆ ನನ್ನ ಧನ್ಯವಾದ ಸಲ್ಲಬೇಕು ಎಂದರು. ದಸಂಸದ ರಾಜ್ಯ ಸಂಘಟನಾ ಸಂಚಾಲಕರಾದ ನಿಂಗರಾಜ್ ಮಲ್ಲಾಡಿ ರವರು ಮಾತನಾಡಿ ಹುಟ್ಟು ಸಾವುಗಳಿಗೆ ದಾಖಲೆಗಳೇ ಇಲ್ಲದೆ ಮರದ ಕೆಳಗೆ, ಪಾಳುಮಂಟಪಗಳಲ್ಲಿ ನೆಲೆಯಿಲ್ಲದೆ ಮಲಗುತ್ತಾ ಅವಮಾನ ಹಂಗಿನ ಜೀವನ ಸಾಗಿಸುತ್ತಾ ಶಿಕ್ಷಣದಿಂದ ವಂಚಿತರಾಗಿದ್ದ ಪರಿಶಿಷ್ಟ ದೊಂಬರ ಅಲೆಮಾರಿ ಸಮುದಾಯಗಳಿಗೆ ದಸಂಸ ವು ಬೆನ್ನೆಲುಬಾಗಿ ನಿಂತು ಇವರ ಹಕ್ಕು ಬಾಧ್ಯತೆಗಳಿಗೆ ಹೋರಾಟ ಮಾಡುತ್ತಾ ಸಮಾಜದ ಮುಖ್ಯವಾಹಿನಿಗೆ ತಂದು ಘನತೆ ಮತ್ತು ಗೌರವದಿಂದ ಬದುಕಲು ಶ್ರಮಿಸುತ್ತಿದೆ ಎಂದರು. ಈ ಸಂದರ್ಭದಲ್ಲಿ ದಸಂಸ ದ ಬಲ್ಲೇನಹಳ್ಳಿ ಕೆಂಪರಾಜು, ಕಿರಿಜಾಜಿ ಗಜೇಂದ್ರ, ಪೌರಕಾರ್ಮಿಕ ಸಂಘದ ಮುರುಗೇಶ, ಪ್ರಶಾಂತನ ತಂದೆ ಶೇಖರ ಮುಂತಾದವರು ಹಾಜರಿದ್ದರು.

# ರಾಜಕೀಯ ಲಾಭಕ್ಕಾಗಿ ಕೇಂದ್ರದಿಂದ ಕ್ಷೇತ್ರ ಮರುವಿಂಗಡಣೆ

• **ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು**

"ಸಿದ್ದರಾಮಯ್ಯ ಮತ್ತು ನಾನು ಒಟ್ಟಿಗೇ ಇದ್ದೇವೆ. ಪ್ರತಿದಿನ ಜತೆಯಲ್ಲೇ ಕೂರುತ್ತೇವೆ, ಚರ್ಚಿಸುತ್ತೇವೆ. ಎಲ್ಲಿದೆ ನಮ್ಮಲ್ಲಿ ಗುಂಪು ಎಂಬುದು? ಎಲ್ಲರೂ ನಮ್ಮ ಶಾಸಕರೇ. ಮಾಧ್ಯಮಗಳೇ ನಮ್ಮನ್ನು ಇಬ್ಭಾಗ ಮಾಡುತ್ತಿವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಸಿದ್ದರಾಮಯ್ಯ ಅವರೊಟ್ಟಿಗೆ ಒಂದೇ ವಿಮಾನದಲ್ಲಿ ಬಹಳ ದಿನಗಳ ನಂತರ ಪ್ರಯಾಣ ಮಾಡುತ್ತಿದ್ದೀರಲ್ಲಾ ಎಂಬ ಮಾಧ್ಯಮದವರ ಪ್ರಶ್ನೆಗೆ ಸಿಟ್ಟಾದ ಡಿ ಕೆ ಶಿವಕುಮಾರ್ ಅವರು, "ನಿಮಗೆ ತಲೆ ಕೆಟ್ಟಿದೆ ಎನಿಸುತ್ತಿದೆ. ಎಲ್ಲಿದೆ ನನ್ನ ಮತ್ತು ಸಿದ್ದರಾಮಯ್ಯ ಗುಂಪು. ನೀವೇ ಗುಂಪು ಸೃಷ್ಟಿ ಮಾಡುತ್ತಿದ್ದೀರಿ. ದೆಹಲಿಯಲ್ಲಿ ಸಿದ್ದರಾಮಯ್ಯ ಅವರ ಗುಂಪು ಎಂದು ಹೇಳಿದ್ದೀರಿ. ಅವರೇನೂ ಸಿದ್ದರಾಮಯ್ಯ ಗುಂಪು ಎಂದು ಬೋರ್ಡ್ ಹಾಕಿಕೊಂಡಿದ್ದಾರೆಯೇ? ಅಥವಾ ನನ್ನ ಗುಂಪು ಎಂದು ನಾನು ಬೋರ್ಡ್ ಹಾಕಿಕೊಂಡಿದ್ದೇನೆಯೇ? ಎಲ್ಲ 139 ಶಾಸಕರು ನನ್ನ ಹಾಗೂ ಸಿದ್ದರಾಮಯ್ಯ ಅವರ ಶಾಸಕರೇ ಆಗಿದ್ದಾರೆ. ಯಾವ ಗುಂಪೂ ಇಲ್ಲ, ಬೋರ್ಡೂ ಇಲ್ಲ. ನಿಮಗೆ ಗೊತ್ತಿದೆಯೇ ಯಾರ್ಯಾರ ಗುಂಪು ಏನಿದೆ ಅಂತ? ನಿಮಗೆ ಹೆಂಗೆ ಬೇಕೋ ಹಂಗೆ ಚಟಕ್ಕೆ ಬರೆಯುತ್ತಾ ಇದ್ದೀರಿ" ಎಂದರು.



ನಿಮ್ಮ ಪಕ್ಷದಲ್ಲಿ ಒಬ್ಬೊಬ್ಬರು ಒಂದೊಂದು ಹೇಳಿಕೆ ನೀಡುತ್ತಾ ಇದ್ದಾರಲ್ಲಾ ಎಂದು ಕೇಳಿದಾಗ, "ಯಾವ ಹೇಳಿಕೆಯೂ ಇಲ್ಲ. ಯಾವ ಗುಂಪೂ ಇಲ್ಲ. 139 ಶಾಸಕರು ನನ್ನದೇ ಗುಂಪು. ಕಾಂಗ್ರೆಸ್ ಗುಂಪು. ನಮಗೆ ಪಕ್ಷ ಹಾಗೂ ಪಕ್ಷದ ಹಿತ ಮುಖ್ಯ. ಪಕ್ಷದ ಅಭಿವೃದ್ಧಿಗೆ ಹಾಗೂ ಅದರ ಒಳಿತಿಗೆ ಏನು ಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಿದ್ದೇವೆ. ನಾವೆಲ್ಲ ಒಟ್ಟಿಗೆ ಸೇರಿ ಕೆಲಸ ಮಾಡುತ್ತಿದ್ದೇವೆ, ಮಾಡುತ್ತೇವೆ" ಎಂದರು.

ಜಬ್ಬಾರ್ ಹಾಗೂ ನಸೀರ್ ಅಹ್ಮದ್ ಅವರ ವಿರುದ್ಧ ಕ್ರಮ ಕೈಗೊಂಡಿರುವುದರ ಬಗ್ಗೆಯೂ ಮಾತನಾಡುತ್ತೇನೆ ಎಂದು ಸತೀಶ್ ಜಾರಕಿಹೊಳಿ ಅವರು ಹೇಳಿದ್ದರ ಬಗ್ಗೆ ಕೇಳಿದಾಗ, "ಇಲ್ಲಿ ಯಾವುದೇ ವೈಯಕ್ತಿಕ ವಿಚಾರಗಳು ಇಲ್ಲ. ಪಕ್ಷಕ್ಕೆ ತನ್ನದೇ ಆದ ರೀತಿ-ರಿವಾಜುಗಳಿವೆ. ಎಂಎಲ್ ಎ, ಎಂಎಲ್ ಸಿ ವಿಚಾರವಾಗಿ ದೆಹಲಿ ನಾಯಕರು ಏನೂ ಹೇಳದೇ, ಅವರು ಏನೂ ಸೂಚನೆ ಕೊಡದೆ, ನಾವು ಏನೂ ಮಾಡಲೂ ಆಗುವುದಿಲ್ಲ. ಕೆಲವನ್ನು ಮಾರ್ಗದರ್ಶನದ ಅನುಸಾರವಾಗಿ ಮಾಡಬೇಕಾಗುತ್ತದೆ. ಕೆಲವರು ನನ್ನ ಮೇಲೆ ದೂರಬಹುದು. ಹಾಗೇ ನನ್ನ ಮೇಲೆ ಹೇಳಿದರೂ ಚಿಂತೆಯಿಲ್ಲ. ಪಕ್ಷದ ಶಿಸ್ತಿನ ಚೌಕಟ್ಟಿನಲ್ಲಿ ನಾವೆಲ್ಲರೂ ಕೆಲಸ ಮಾಡಬೇಕಾಗುತ್ತದೆ" ಎಂದರು.

**ಕಾಂಗ್ರೆಸ್ ಪಕ್ಷ ಇರುವುದೇ ಎಲ್ಲರ ಒಳಿತಿಗೆ**

ಅಲ್ಪಸಂಖ್ಯಾತ ಸಮುದಾಯವನ್ನು ಮತ್ತೆ ತುಳಿಯುವ ಯತ್ನ ಮಾಡಲಾಗುತ್ತಿದೆ ಎನ್ನುವ ಆರೋಪದ ಬಗ್ಗೆ ಕೇಳಿದಾಗ, "ಇಡೀ ಕಾಂಗ್ರೆಸ್ ಪಕ್ಷ ಇರುವುದೇ ಪರಿಶಿಷ್ಟ ಜಾತಿ, ಪಂಗಡ, ಅಲ್ಪಸಂಖ್ಯಾತರು, ಹಿಂದುಳಿದ ವರ್ಗ, ರೈತರು - ಹೀಗೆ ಎಲ್ಲಾ ವರ್ಗಕ್ಕೂ ನ್ಯಾಯ ಒದಗಿಸಲು" ಎಂದರು.

ಸತೀಶ್ ಜಾರಕಿಹೊಳಿ ಅವರ ಜತೆ ಏನು ಚರ್ಚೆ ನಡೆಯಿತು ಎಂದು ಕೇಳಿದಾಗ, "ಅವರು ನಮ್ಮ ಪಕ್ಷದ ನಾಯಕರು. 2028 ಕ್ಕೆ ಕಾಂಗ್ರೆಸ್ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವುದೇ ನಮ್ಮ ಉದ್ದೇಶ. ನಾವು ಒಟ್ಟಿಗೆ ಕೆಲಸ ಮಾಡುತ್ತಿದ್ದೇವೆ. ನನಗೆ ಶೇ. 1000 ಪಟ್ಟು ಅಧಿಕಾರಕ್ಕೆ ಮರಳುವ ವಿಶ್ವಾಸವಿದೆ" ಎಂದರು.

"ನಾನು ಹಾಗೂ ಸತೀಶ್ ಜಾರಕಿಹೊಳಿ ಅವರು ಬೆಂಗಳೂರಿನ ಟ್ರಾಫಿಕ್ ಅನ್ನು ಹೇಗೆ ನಿಯಂತ್ರಣ ಮತ್ತು ಕಡಿಮೆ ಮಾಡಬೇಕು ಎನ್ನುವ ವಿಚಾರವಾಗಿ ಚರ್ಚೆ ನಡೆಸಿದ್ದೇವೆ. ನೆಲಮಂಗಲದಿಂದ ಗೊರಗುಂಟೆಪಾಳ್ಯದವರೆಗೆ ಹೆಚ್ಚು ವಾಹನ ಸಂಚಾರ ದಟ್ಟಣೆ ಇದೆ. ರಾಷ್ಟ್ರೀಯ ಹಾಗೂ ರಾಜ್ಯ ಹೆದ್ದಾರಿಗಳ ಮೂಲಕ ನಗರದ ಒಳಗೆ ವಾಹನಗಳು ಬರದಂತೆ ಹೇಗೆ ಬದಲಿ ವ್ಯವಸ್ಥೆ ಮಾಡಬಹುದು. ನೈಸ್ ರಸ್ತೆಗೆ ಮುನ್ನ ಯಾವ ವ್ಯವಸ್ಥೆ ಮಾಡಬಹುದು ಎಂದು ಚರ್ಚೆ ನಡೆಸಿದ್ದೇವೆ. ಈಗಾಗಲೇ ಬಿಜಿನೆಸ್ ಕಾರಿಡಾರ್ ಯೋಜನೆ ಕೈಗೆತ್ತಿಕೊಂಡಿದ್ದೇವೆ" ಎಂದರು.

**ರಾಜಕೀಯ ಲಾಭಕ್ಕಾಗಿ ಕ್ಷೇತ್ರ ಮರುವಿಂಗಡಣೆ ತೀರ್ಮಾನ**

ಮಹಿಳಾ ಮೀಸಲಾತಿ ಹಾಗೂ ಕ್ಷೇತ್ರ ಪುನರ್ ವಿಂಗಡಣೆ ಬಗ್ಗೆ ಕೇಂದ್ರದ ತರಾತುರಿ ನಿರ್ಧಾರದ ಬಗ್ಗೆ ಕೇಳಿದಾಗ, "ಅವರು ಏಕೆ ಆತುರದಲ್ಲಿ ಇದ್ದಾರೆ ಎಂದು ತಿಳಿಯುತ್ತಿಲ್ಲ. ಕಾಂಗ್ರೆಸ್ ಪಕ್ಷವು ಚೌಕಟ್ಟಿನ ಒಳಗೆ ಇದರ ಬಗ್ಗೆ ಸೂಕ್ತ ಚರ್ಚೆ ನಡೆಸಬೇಕು ಎಂದು ಬಯಸುತ್ತದೆ. ರಾಜಕೀಯ ಲಾಭಕ್ಕಾಗಿ ಯಾವುದೇ ಸ್ಪಷ್ಟನೆ ಇಲ್ಲದೇ ಈ ನಿರ್ಧಾರವನ್ನು ಬಿಜೆಪಿ ತೆಗೆದುಕೊಳ್ಳುತ್ತಿದೆ. ಇದು ಒಳ್ಳೆಯದಲ್ಲ" ಎಂದರು.

"ಬಿಜೆಪಿಯವರು ಅಭದ್ರತೆ ಎದುರಿಸುತ್ತಿದ್ದಾರೆ. ಅದಕ್ಕೆ ಈ ವಿಚಾರದ ಬಗ್ಗೆ ತರಾತುರಿಯಲ್ಲಿದ್ದಾರೆ. ಸೋನಿಯಾ ಗಾಂಧಿ ಅವರ ನೇತೃತ್ವದಲ್ಲಿ ಈ ಹಿಂದೆ ಈ ಬಗ್ಗೆ ತೀರ್ಮಾನ ಆಗಿತ್ತು" ಎಂದರು.

## ಕೆಲಸದ ಸ್ಥಳಗಳಲ್ಲಿ ಕಿರುಕುಳ: ಕ್ರಮಕ್ಕೆ ಮನವಿ

• **ಮಲ್ಲಮ್ಮ ನುಡಿ ವಾರ್ತೆ ವಿಜಯಪುರ**

ಕೆಲಸದ ಸ್ಥಳಗಳಲ್ಲಿ ಯುವಕ-ಯುವತಿಯರ ಮೇಲಿನ ಕಿರುಕುಳ ಹಾಗೂ ಬಲವಂತದ ಧಾರ್ಮಿಕ ಆಚರಣೆಗಳ ಆರೋಪಗಳ ಹಿನ್ನೆಲೆಯಲ್ಲಿ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳುವಂತೆ ವಿಜಯಪುರ ಜಿಲ್ಲಾಧಿಕಾರಿಗಳಿಗೆ ಬಿಜೆಪಿ ಮುಖಂಡರರಾದ ದಯಾಸಾಗರ ಪಾಟೀಲ ಮನವಿ ಸಲ್ಲಿಸಿದರು.

ಮಹಾರಾಷ್ಟ್ರದ ನಾಶಿಕ್‌ನ Tata Consultancy Services (TCS) ಸಂಸ್ಥೆಗೆ ಸಂಬಂಧಿಸಿದಂತೆ ಇತ್ತೀಚೆಗೆ ಹೊರಬಂದ ವರದಿಗಳು ದೇಶಾದ್ಯಂತ ಆತಂಕದ ವಾತಾವರಣ ನಿರ್ಮಾಣವಾಗಿದೆ. ಈ ಹಿನ್ನೆಲೆಯಲ್ಲಿ ವಿಜಯಪುರದಲ್ಲಿ ಇಂತಹ ಘಟನೆಗಳು ನಡೆ-ಯದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು ಎಂಬ ಒತ್ತಾಯ ಮಾಡಿದರು. ಇನ್ನು ಜಿಲ್ಲೆಯಲ್ಲಿ ವಿವಿಧ ಸಮುದಾಯಗಳ ಉದ್ಯೋಗಿಗಳನ್ನು ಹೊಂದಿರುವ ಶಿಕ್ಷಣ ಸಂಸ್ಥೆಗಳು, ಆರೋಗ್ಯ



ಕೇಂದ್ರಗಳು, ತರಬೇತಿ ಸಂಸ್ಥೆಗಳು ಹಾಗೂ ಸಣ್ಣ ಕೈಗಾರಿಕೆಗಳು ಹೆಚ್ಚಿನ ಸಂಖ್ಯೆಯಲ್ಲಿ ಇರುವುದರಿಂದ, ಎಲ್ಲರಿಗೂ ಸುರಕ್ಷಿತ ಮತ್ತು ಗೌರವಯುತ ಕೆಲಸದ ವಾತಾವರಣ ಒದಗಿಸುವುದು ಅತ್ಯಗತ್ಯವಾಗಿದೆ ಎಂದು ಮನವಿಯಲ್ಲಿ ಸಲ್ಲಿಸಿದ್ದಾರೆ. ಕೆಲಸದ ಸ್ಥಳಗಳಲ್ಲಿ ಸಿಸಿಟಿವಿ ಕ್ಯಾಮೆರಾ ಸೇರಿದಂತೆ ಸೂಕ್ತ ನಿಗಾವ್ಯವಸ್ಥೆ ಕಲ್ಪಿಸುವುದು, ಉದ್ಯೋಗಿಗಳ ಹಕ್ಕುಗಳು ಮತ್ತು ದೂರು ಪರಿಹಾರ ವ್ಯವಸ್ಥೆಗಳ ಬಗ್ಗೆ ಜಾಗೃತಿ ಮೂಡಿಸುವುದು ಕಿರುಕುಳ ಹಾಗೂ ಬಲವಂತದ ವಿರುದ್ಧ ಕಠಿಣ ನೀತಿಗಳನ್ನು ಸಂಸ್ಥೆಗಳು ಅಳವಡಿಸಿಕೊಳ್ಳುವಂತೆ ಸೂಚಿಸುವುದು.

## ರಾಷ್ಟ್ರನಿರ್ಮಾಣದಲ್ಲಿ ಶಿಕ್ಷಕರ ಪಾತ್ರ ದೊಡ್ಡದು



• **ಮಲ್ಲಮ್ಮ ನುಡಿ ವಾರ್ತೆ ಭಾಲ್ಕಿ**

ಶಿಕ್ಷಕರು ರಾಷ್ಟ್ರ ನಿರ್ಮಾಣದ ಭದ್ರ ಬುನಾದಿ ಹಾಕುವ ಕಾರ್ಯ ಮಾಡುತ್ತಿದ್ದಾರೆ. ಸೈನಿಕರು ಗಡಿ ಕಾಯುವ ಮೂಲಕ ದೇಶದ ರಕ್ಷಣೆ ಮಾಡಿದರೆ ಶಿಕ್ಷಕರು ದೇಶಕ್ಕೆ ಒಳ್ಳೆಯ ಪ್ರಜೆ ನಿರ್ಮಿಸುವ ಮೂಲಕ ರಾಷ್ಟ್ರಕಟ್ಟುವ ಕಾರ್ಯ ಮಾಡುತ್ತಾರೆ. ಮಕ್ಕಳ ಭವಿಷ್ಯ ನಾವು ಯಾವ ರೀತಿ ರೂಪಿಸುತ್ತೇವೆಯೊ ನಮ್ಮ ದೇಶ ಆ ದಿಶೆಯಲ್ಲಿ ಅಭಿವೃದ್ಧಿಯಾಗುತ್ತದೆ ಎಂದು ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಹೇಳಿದರು.

ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ವಿಶ್ವಗುರು ಬಸವಣ್ಣನವರ ಜಯಂತಿ, ವಚನ ಜಾತ್ರೆ-2026, ಡಾ.ಚನ್ನಬಸವ ಪಟ್ಟದ್ದೇವರ 27ನೆಯ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತಮಹೋತ್ಸವ ನಿಮಿತ್ತ ಹಿರೇಮಠ ಸಂಸ್ಥಾನ ಮತ್ತು ಅಮೃತಮಹೋತ್ಸವ ಸಮಿತಿ ವತಿಯಿಂದ ಗುರುವಾರ ಆಯೋಜಿಸಿದ್ದ 75 ಉತ್ತಮ ಶಿಕ್ಷಕರ ಸನ್ಮಾನ ಸಮಾರಂಭದ ನೇತೃತ್ವ ವಹಿಸಿ ಅವರು ಮಾತನಾಡಿದರು.

ಒಂದರ್ಥದಲ್ಲಿ ದೇಶದ ಭವಿಷ್ಯ ರೂಪಿಸುವವರು ಶಿಕ್ಷಕರಾಗಿದ್ದಾರೆ. ಶಿಕ್ಷಕ ವೃತ್ತಿಯ ಕುರಿತು ನಮ್ಮ ಪೂಜ್ಯರಿಗೆ ಅಪಾರ ಗೌರವವಿದೆ. ಅವರು ನಾನೊಬ್ಬ ಶಿಕ್ಷಕನಾಗಬೇಕೆಂದು ಕನಸು ಕಂಡವರು. ಆದರೆ ಇಂದು ಸಾವಿರಾರು ಶಿಕ್ಷಕರನ್ನು ಆಶ್ರಯ ನೀಡಿ ಲಕ್ಷಾಂತರ ಮಕ್ಕಳಿಗೆ ಸಂಸ್ಕಾರಸಹಿತ ಗುಣಾತ್ಮಕ ಶಿಕ್ಷಣ ನೀಡುವ ಅಕ್ಷರ ಸಂತರಾಗಿದ್ದಾರೆ ಎಂದು ತಿಳಿಸಿದರು.

# ಎಂ.ಕೆ. ಸ್ಟಾಲಿನ್ ನಿಲುವು ದಕ್ಷಿಣ ಭಾರತದ ಅಭಿಪ್ರಾಯವಲ್ಲ

• **ಮಲ್ಲಮ್ಮ ನುಡಿ ವಾರ್ತೆ ನವದೆಹಲಿ**

ಲೋಕಸಭೆ ಮತ್ತು ವಿಧಾನಸಭೆಗಳಲ್ಲಿ ಮಹಿಳೆಯರಿಗೆ 33% ಮೀಸಲಾತಿ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ಇರಿಸಿರುವ ಹೆಜ್ಜೆ ಐತಿಹಾಸಿಕ ಎಂದು ಬಣ್ಣಿಸಿದ ಕೇಂದ್ರ ಸಚಿವರಾದ ಹೆಚ್.ಡಿ. ಕುಮಾರಸ್ವಾಮಿ ಅವರು; ಇದೇ ಸಂದರ್ಭದಲ್ಲಿ ಕಾಂಗ್ರೆಸ್ ಹಾಗೂ ಡಿಎಂಕೆ ಪಕ್ಷಗಳ ವಾದಗಳು ಭಯ ಹುಟ್ಟಿಸುವ ರೀತಿಯಲ್ಲಿವೆ ಎಂದು ಕಳವಳ ವ್ಯಕ್ತಪಡಿಸಿದರು.

ಲೋಕಸಭೆಯಲ್ಲಿ ಶುಕ್ರವಾರ ಮಹಿಳಾ ಮೀಸಲು ಮಸೂದೆಯನ್ನು ಬೆಂಬಲಿಸಿ ಮಾತನಾಡಿದ ಕೇಂದ್ರ ಸಚಿವರು; ಮಹಿಳೆಯರಿಗೆ ಮೀಸಲಾತಿ ನೀಡುವ ನಿಟ್ಟಿನಲ್ಲಿ ಈ ಮಸೂದೆಯು ಭಾರತದ ಪ್ರಜಾಪ್ರಭುತ್ವದ ಪಯಣದಲ್ಲಿ ಕ್ರಾಂತ ಕ್ರಾಂತಿಕಾರಕ ಹೆಜ್ಜೆಯಾಗಿದೆ ಎಂದರು.

**ಸುಧಾರಣೆಗಳಿಗೆ ಕಾಂಗ್ರೆಸ್ ಅಡ್ಡಿಯಾಗಿದೆ:** ಕಾಂಗ್ರೆಸ್ ಪಕ್ಷವು ನಿರಂತರವಾಗಿ ಸುಧಾರಣೆಗಳಿಗೆ ವ್ಯವಸ್ಥಿತವಾಗಿ ತಡೆಯೊಡ್ಡುತ್ತಿದೆ. ಈ ಮಸೂದೆಯನ್ನು ಬೆಂಬಲಿಸುವುದನ್ನು



ಬಿಟ್ಟು ಜನರನ್ನು ದಾರಿತಪ್ಪಿಸುವ ಸಂಕಥನಗಳನ್ನು ಸೃಷ್ಟಿಸುತ್ತಿದೆ. ಕಾಂಗ್ರೆಸ್ ಸೃಷ್ಟಿಸುತ್ತಿರುವ ಗೊಂದಲಗಳಿಗೆ ಅರ್ಥವಿಲ್ಲ, ಅವುಗಳನ್ನು ಜನರು ನಂಬುವುದಿಲ್ಲ ಹಾಗೂ ಸಂಕುಚಿತ ಸಂಕಥನಗಳ ಕಾಂಗ್ರೆಸ್ ವಾದವು ರಾಷ್ಟ್ರದ ವಿಶಾಲ ತಳಹದಿಯ ಭಾವನೆಯನ್ನು ಪ್ರತಿಬಿಂಬಿಸುವುದಿಲ್ಲ ಎಂದು ಅವರು ಸ್ಪಷ್ಟ ಮಾತುಗಳಲ್ಲಿ ಹೇಳಿದರು.

**ಎಂ.ಕೆ.ಸ್ಟಾಲಿನ್ ನಿಲುವು ದಕ್ಷಿಣ ಭಾರತದ ಅಭಿಪ್ರಾಯವಲ್ಲ:** ಮಸೂದೆಯ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್ ಅವರು ತೆಗೆದುಕೊಂಡ ನಿಲುವು ಎಲ್ಲಾ ದಕ್ಷಿಣದ ರಾಜ್ಯಗಳ ಅಭಿಪ್ರಾಯವಲ್ಲ ನೇರ ಮಾತುಗಳಲ್ಲಿ ಹೇಳಿದ ಕೇಂದ್ರ ಸಚಿವರು; ಇಂದು ನಾವು ಯಾವ ಮಸೂದೆಯ ಬಗ್ಗೆ ಚರ್ಚೆ ನಡೆಸುತ್ತಿದ್ದೇವೆಯೋ ಅದನ್ನು ಮುಕ್ತವಾಗಿ ಬೆಂಬಲಿಸಿರುವ ಆಂಧ್ರಪ್ರದೇಶದ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಶ್ಲಾಘಿಸಿ, ನಾಯ್ಡು ಅವರಿಗೇನು ರಾಷ್ಟ್ರಪ್ರೇಮ ಇಲ್ಲವೇ? ಇಂದು ಪ್ರಶ್ನಿಸಿದರು.

ತಮಿಳುನಾಡಿನಲ್ಲಿ ಅಧಿಕಾರದಲ್ಲಿರುವ ಡಿಎಂಕೆ ಈ ಮಹತ್ವದ ಮಸೂದೆಗಳನ್ನು ತೀವ್ರವಾಗಿ ವಿರೋಧಿಸುತ್ತಿರುವುದು ಮತ್ತು ಅವುಗಳು ದಕ್ಷಿಣದ ರಾಜ್ಯಗಳ ಮೇಲೆ ಭಾರಿ ಪ್ರತಿಕೂಲ ಪರಿಣಾಮ ಬೀರುತ್ತವೆ ಎಂಬ ಕಳವಳವನ್ನು ವ್ಯಕ್ತಪಡಿಸಿದೆ. ಇದು ಸರಿಯಲ್ಲ, ಅನಗತ್ಯವಾಗಿದೆ ಎಂದು ಕೇಂದ್ರ ಸಚಿವರು ಪ್ರತಿಪಾದಿಸಿದರು.

**ಕಿರಿಯ ಸಹೋದರ ಎಂದು ಕುಟುಕಿದ ಸಚಿವರು:** ಕಾಂಗ್ರೆಸ್ ಮತ್ತು ಡಿಎಂಕೆ ಮೈತ್ರಿಯನ್ನು ಗುರಿಯಾಗಿಸಿಕೊಂಡು ವಾಗ್ದಾಳಿ ನಡೆಸಿದ ಕುಮಾರಸ್ವಾಮಿ ಅವರು; ರಾಹುಲ್ ಗಾಂಧಿ ಅವರು ಕೆಲ ದಿನಗಳ ಹಿಂದೆ, ತಾವು ಸ್ಟಾಲಿನ್ ಅವರ ಕಿರಿಯ ಸಹೋದರ ಎಂದು ಹೇಳಿಕೊಂಡಿದ್ದರು. ಆದರೆ ವಿಧಾನಸಭೆ ಕ್ಷೇತ್ರಗಳ ಹಂಚಿಕೆ ನಂತರ ಹಿರಿಯ ಸಹೋದರ ಕಿರಿಯ ಸಹೋದರನ ಮೇಲೆ ಮುನಿಸಿಕೊಂಡಂತೆ ಕಾಣುತ್ತಿದೆ. ಆದರೂ ಕಿರಿಯ ಸಹೋದರ ಈಗಲೂ ಹಿರಿಯ ಸಹೋದರನಿಂದ ಪ್ರೀತಿಯನ್ನು ನಿರೀಕ್ಷೆ ಮಾಡುತ್ತಿರುವಂತೆ ತೋರುತ್ತಿದೆ ಎಂದು ತರಾಟೆಗೆ ತೆಗೆದುಕೊಂಡರು.

ಮಹಿಳಾ ಮೀಸಲಾತಿ, ಅದರಲ್ಲೂ ಮುಖ್ಯವಾಗಿ ಅನುಪಾತದ ಪ್ರಾತಿನಿಧ್ಯದ ಬಗ್ಗೆ ರಾಹುಲ್ ಗಾಂಧಿ ಅವರ ನಿಲುವಿನಲ್ಲಿ ಸ್ಪಷ್ಟತೆ ಇಲ್ಲ ಎಂದು ಟೀಕಿಸಿದ ಸಚಿವ ಕುಮಾರಸ್ವಾಮಿ ಅವರು; ರಾಹುಲ್.ಗಾಂಧಿ ಅವರು ತಮಿಳುನಾಡು ಬಗ್ಗೆ ನೀಡುತ್ತಿರುವ ಹೇಳಿಕೆಯನ್ನು ಉತ್ತರ ಪ್ರದೇಶ, ಬಿಹಾರ ಅಥವಾ ಮಧ್ಯಪ್ರದೇಶಕ್ಕೆ ಹೋಗಿ ಹೇಳುತ್ತಾರೆಯೇ? ಎಂದು ಖಾರವಾಗಿ ಪ್ರಶ್ನಿಸಿದರು.

# ಸಂತೋಷ: ಆಸ್ತಿಯಲ್ಲ, ಆಯ್ದುಕೊಳ್ಳುವ ಹಾದಿ



**ಕಥಾ-ಲೋಕ**
• ವೀರಣ್ಣ ಕಲಕೇರಿ
ಕೆಂಭಾವಿ

ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಬದುಕಿನಲ್ಲಿ ಸಂತೋಷದಿಂದಿರಲು ಬಯಸುತ್ತಾನೆ. ಇದಕ್ಕಾಗಿ ಹಗಲಿರುಳು ಕಷ್ಟಪಡುತ್ತಾನೆ. ಆದರೆ ವಿಪರ್ಯಾಸವೆಂದರೆ, ಎಷ್ಟೇ ಕಷ್ಟಪಟ್ಟರೂ ಅನೇಕರಿಗೆ ಆ 'ಸಂತೋಷ' ಮಾತ್ರ ಮರೀಚಿಕೆಯಾಗಿಯೇ ಉಳಿದಿದೆ. ಇಲ್ಲಿ ಗಮನಿಸಬೇಕಾದ ಒಂದು ಆಶ್ಚರ್ಯಕರ ಸಂಗತಿಯೆಂದರೆ, ಸಂತೋಷ ಎಂಬುದು ಹಣ ಕೊಟ್ಟು ಮಾರುಕಟ್ಟೆಯಲ್ಲಿ ಖರೀದಿಸುವ ವಸ್ತುವಲ್ಲ.

ನಮಗೆ ಒಂದು ವಸ್ತು ಅತೀ ಅವಶ್ಯಕವಾಗಿದೆ ಎಂದಾಗ, ಅದನ್ನು ಪಡೆಯಲು ನಾವು ಹಣ ನೀಡಬೇಕು. ಆ ಹಣವನ್ನು ಗಳಿಸಲು ಶ್ರಮವಹಿಸಬೇಕು. ಹೀಗೆ ಶ್ರಮವಹಿಸಿ ಗಳಿಸಿದ ಹಣದಿಂದ ಭೌತಿಕ ವಸ್ತುಗಳನ್ನು ನಮ್ಮದಾಗಿಸಿಕೊಳ್ಳಬಹುದು. ಆದರೆ ಇಂದಿನ ವರ್ತಮಾನದ ಬದುಕಿನಲ್ಲಿ ಮನುಷ್ಯನಿಗೆ ತಾತ್ಕಾಲಿಕ ಸೌಲಭ್ಯಗಳ ಪೂರೈಕೆಗಿಂತಲೂ ಅತೀ ಅವಶ್ಯವಾಗಿ ಬೇಕಾಗಿರುವುದು ಶಾಶ್ವತ ನೆಮ್ಮದಿ ಮತ್ತು ಸಂತೋಷ.

ಇವತ್ತಿನ ವಿಚಿತ್ರ ಪರಿಸ್ಥಿತಿಯೆಂದರೆ, ಮನುಷ್ಯ



ತನ್ನ ಶಕ್ತ್ಯಾನುಸಾರ ಕಷ್ಟಪಟ್ಟಾದರೂ ಟಿ.ವಿ, ಮೊಬೈಲ್, ಬೈಕ್, ಕಾರು ಮತ್ತು ಹಣದಂತಹ ಭೌತಿಕ ಸುಖಭೋಗಗಳನ್ನು ಪಡೆಯುತ್ತಿದ್ದಾನೆ. ಆದರೆ ಯಾವುದೇ ಹಣದ ಅವಶ್ಯಕತೆಯಿಲ್ಲದ, ಕೇವಲ ತನ್ನದೇ ಮನಸ್ಸಿನ ಮೇಲೆ ಅವಲಂಬಿತವಾಗಿರುವ 'ಸಂತೋಷ'ವನ್ನು ಪಡೆದುಕೊಳ್ಳುವಲ್ಲಿ ಮಾತ್ರ ಹಿಂದೆ ಬಿದ್ದಿದ್ದಾನೆ ಎಂದೆನಿಸದೆ ಇರದು.

ನಮ್ಮ ಮುಂದೆ ಇಂದು ಎರಡು ಆಯ್ಕೆಗಳಿವೆ; ಒಂದು 'ಸಂತೋಷ', ಇನ್ನೊಂದು 'ಭೌತಿಕ ಸೌಲಭ್ಯಗಳು'. ಸೌಲಭ್ಯಗಳನ್ನು ನಾವು 'ಆಸ್ತಿ'ಯಾಗಿ ನೋಡುತ್ತೇವೆ; ಅದನ್ನು ಪಡೆಯಲು ಖರ್ಚು ಮತ್ತು ಶ್ರಮ ಎರಡೂ ಬೇಕು.

ಆದರೆ ಸಂತೋಷ ಎಂಬುದು ಕೇವಲ ನಮ್ಮ 'ಆಯ್ಕೆ'. ಈ ಆಯ್ಕೆಗೆ ಹಣದ ಖರ್ಚಿಲ್ಲ, ಬದಲಿಗೆ ವಾಸ್ತವವನ್ನು ಒಪ್ಪಿಕೊಳ್ಳುವ ಉದಾತ್ತ ಮನಸ್ಥಿತಿ ನಮ್ಮದಾಗಬೇಕು ಅಷ್ಟೆ.

ದುರದೃಷ್ಟವಶಾತ್, ಮನುಷ್ಯ ಅರಿವಿನ ಅಭಾವದಿಂದಾಗಿ ಶಾಶ್ವತ ನೆಮ್ಮದಿಗೆ ಕಾರಣವಾಗುವ ಸಂತೋಷವನ್ನು ಕಡೆಗಣಿಸುತ್ತಿದ್ದಾನೆ ಎನಿಸುತ್ತದೆ. ಕೊನೆಯಿಲ್ಲದ ಬಯಕೆಗಳ ಹಿಂದೆ ಬಿದ್ದು, ಇಂದು ಶ್ರೀಮಂತನೂ ಕೂಡ ನೆಮ್ಮದಿಯ ವಿಷಯದಲ್ಲಿ ಬಡವನಾಗುತ್ತಿದ್ದಾನೆ. ನಾವು ನೆನಪಿಡಬೇಕಾದ ಸತ್ಯವೇನೆಂದರೆ "ಹಸಿದವನಿಗೆ ಒಂದು ತುತ್ತು ಅನ್ನ ನೀಡುವಾಗ ಸಿಗುವ ತೃಪ್ತಿ, ದೊಡ್ಡ ಹೋಟೆಲ್‌ನಲ್ಲಿ ಸಾವಿರ ರೂಪಾಯಿ ಕೊಟ್ಟು ತಿನ್ನುವ ಅದ್ದೂರಿ ಊಟದಲ್ಲಿ ಸಿಗದಿರಬಹುದು. ಏಕೆಂದರೆ ತೃಪ್ತಿ ಇರುವುದು ವಸ್ತುವಿನ ಬೆಲೆಯಲ್ಲಿ ಅಲ್ಲ, ನಮ್ಮ ಮನಸ್ಥಿತಿಯಲ್ಲಿ."

ಹಾಗಾಗಿ ಬಾಹ್ಯ ಜಗತ್ತಿನ ಸೌಲಭ್ಯಗಳು ದೇಹಕ್ಕೆ ಆರಾಮ ನೀಡಬಲ್ಲವೇ ಹೊರತು ಆತ್ಮಕ್ಕೆ ಶಾಂತಿ ನೀಡಲಾರವು. ಆ ಶಾಂತಿ ಸಿಗುವುದು ನಮ್ಮ ಆಲೋಚನೆ ಮತ್ತು ತೃಪ್ತ ಭಾವದಲ್ಲಿ ಮಾತ್ರ ಎಂದು ಹೇಳಬಹುದು.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.
PRGI NO. 120927
(RNINO:KARKAN/2011/48371)